# ಡಾ|| ರಾಜ್‌ಕುಮಾರ್ ಅಕಾಡೆಮಿ ಬೆಂಗಳೂರು

ಡಾ|| ರಾಜ್‌ಕುಮಾರ್ ಕುಟುಂಬದವರ ಕೊಡುಗೆ

# ವಾರದ ಸುದ್ದಿ ಸಂಕಲನ

## ಸ್ಪಷ್ಟ ಮತ್ತು ಸಮಗ್ರ ವಿದ್ಯಮಾನಗಳು

## ಆಗಸ್ಟ್ ೩ನೇ ವಾರ

18-08-2025 TO 23-08-2025




‘ಎಐ’ ಯುದ್ಧವಿಮಾನ ‘ಕಾಲಭೈರವ’

---

ಗಾಜಾದಲ್ಲಿ ಕ್ಷಾಮ: ವಿಶ್ವಸಂಸ್ಥೆ ಘೋಷಣೆ

---

ಹೊಸ ಐ.ಟಿ ಮಸೂದೆ

---

ಕ್ರೀಡಾ ಕಾಯ್ದೆ

## ❖ ಪ್ರಣವ್‌ಗೆ ರಾಷ್ಟ್ರಪತಿ ಶೌರ್ಯ ಪ್ರಶಸ್ತಿ

- ನಗರದ ಕಲ್ಪತರು ವಿದ್ಯಾಸಂಸ್ಥೆ ಉಪಾಧ್ಯಕ್ಷ ಹಾಗೂ ಕೊಬ್ಬರಿ ವರ್ತಕ ಬಿ.ಎಸ್. ಉಮೇಶ್ ಮತ್ತು ವಿದ್ಯಾ ದಂಪತಿ ಪುತ್ರ ಪ್ರಣವ್ ಬೆಳ್ಳೂರು ಭಾರತೀಯ ವಾಯುಸೇನೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ.
- ಇತ್ತೀಚಿಗೆ ನಡೆದ 'ಆಪರೇಷನ್ ಸಿಂಧೂರ್' ಕಾರ್ಯಾಚರಣೆಯಲ್ಲಿ ತೋರಿದ ಸಾಹಸಕ್ಕಾಗಿ ರಾಷ್ಟ್ರಪತಿಗಳ ಶೌರ್ಯ ಪ್ರಶಸ್ತಿ 'Mention in despatches' ಗೌರವಕ್ಕೆ ಭಾಜನರಾಗಿದ್ದಾರೆ.

## ❖ 'ಪುರಂದರದಾಸರ ಯಕ್ಷಗಾನ ಕೃತಿ ಲಭ್ಯ'

- ಇಲ್ಲಿನ ನಿವೃತ್ತ ಉಪನ್ಯಾಸಕಿ ವಿಜಯನಳಿನಿ ರಮೇಶ ಅವರ ಗೃಹ ಗ್ರಂಥಾಲಯದಲ್ಲಿ ಕರ್ನಾಟಕ ಸಂಗೀತದ ಪಿತಾಮಹ ಪುರಂದರದಾಸರು ರಚಿಸಿದ 'ಅನಸೂಯಾಚರಿತೆ' ಯಕ್ಷಗಾನ ಕೃತಿ ಸಿಕ್ಕಿದ್ದು, ಇದು ಯಕ್ಷಗಾನ ಕ್ಷೇತ್ರದ ಪ್ರಾಚೀನತೆಗೆ ಪುಷ್ಟಿ ನೀಡಿದೆ ಎಂದು ಯಕ್ಷಗಾನ ವಿದ್ವಾಂಸ ಕಬ್ಬಿನಾಲೆ ವಸಂತ ಭಾರದ್ವಾಜ ತಿಳಿಸಿದ್ದಾರೆ.
- 'ಇದು 16ನೇ ಶತಮಾನದ ಪೂರ್ವಾರ್ಧದ ಕೃತಿಯಾಗಿದ್ದು, 19 ಕಡೆ ಪುರಂದರ ವಿಠಲ ಎಂಬ ಅಂಕಿತವಿರುವುದರಿಂದ ಕೃತಿಯ ಕರ್ತೃತ್ವ ಪ್ರಶ್ನಾತೀತವಾಗಿದೆ' ಎಂದು ಹೇಳಿದ್ದಾರೆ.
- 'ಕೃತಿಯಲ್ಲಿ ಕಂದಪದ್ಯ, ದ್ವಿಪದಿ ಮತ್ತು ವಚನಗಳು ಹೆಚ್ಚಾಗಿವೆ. 13 ರಾಗಗಳ ವಿವಿಧ ಮಟ್ಟುಗಳಿದ್ದು, ಪುರಂದರದಾಸರ ಪ್ರಸಿದ್ಧವಾದ ಮೂರು ಕೀರ್ತನೆಗಳೂ ಇವೆ. ಹರಿಕಥಾ ನಿರೂಪಣೆಯ ಶೈಲಿಯನ್ನು ಇದು ಹೊಂದಿದೆ. ಕಲೆಯ ವಿಸ್ತಾರ ಹಾಗೂ ಇತಿಹಾಸ ತಿಳಿಯಲು ಈ ಕೃತಿ ಮಹತ್ವದ್ದಾಗಿದೆ' ಎಂದು ಅವರು ತಿಳಿಸಿದ್ದಾರೆ.

## ❖ ತಗ್ಗುತ್ತಿರುವ ಹಣದುಬ್ಬರ ಪ್ರಮಾಣ ಬೆಳವಣಿಗೆಗೆ ವೇಗ ನೀಡಲು ಸಕಾಲ

- ವರ್ಷಗಳಿಂದ ಏರುಗತಿಯಲ್ಲಿ ಇದ್ದ 'ಗ್ರಾಹಕ ಬೆಲೆ ಸೂಚ್ಯಂಕ' (ಸಿಪಿಐ) ಆಧಾರಿತ ಚಿಲ್ಲರೆ ಹಣದುಬ್ಬರ ದರವು ಈಗ ಕೆಲವು ತಿಂಗಳುಗಳಿಂದ ಇಳಿಮುಖವಾಗಿದೆ.
- ಚಿಲ್ಲರೆ ಹಣದುಬ್ಬರ ಪ್ರಮಾಣವು ಜುಲೈ ತಿಂಗಳಲ್ಲಿ ಎಂಟು ವರ್ಷಗಳ ಕನಿಷ್ಠ ಮಟ್ಟವಾದ ಶೇ 1.55ಕ್ಕೆ ತಗ್ಗಿದೆ.
- ತರಕಾರಿ ಹಾಗೂ ಧಾನ್ಯಗಳು ಸೇರಿದಂತೆ ವಿವಿಧ ಬಗೆಯ ಆಹಾರ ಉತ್ಪನ್ನಗಳ ಬೆಲೆಯಲ್ಲಿನ ಇಳಿಕೆಯು ಹಣದುಬ್ಬರ ಪ್ರಮಾಣ ತಗ್ಗಲು ಕಾರಣವಾಗಿದೆ.
- ಹಿಂದಿನ ವರ್ಷದ ಜುಲೈನಲ್ಲಿ ಹಣದುಬ್ಬರ ಪ್ರಮಾಣವು ಶೇ 3.6ರಷ್ಟು ಇತ್ತು. ಕಳೆದ ವರ್ಷದ ಜುಲೈಗೆ ಹೋಲಿಸಿದರೆ ಈ ವರ್ಷದ ಜುಲೈನಲ್ಲಿ ಆಹಾರ ವಸ್ತುಗಳ ಬೆಲೆಯು ಇಳಿಕೆ ಕಂಡಿದೆ.
- ಮುಂಗಾರು ಮಳೆಯು ಚೆನ್ನಾಗಿ ಆಗುತ್ತಿರುವ ಕಾರಣಕ್ಕೆ ಹಾಗೂ ಕೃಷಿ ಚಟುವಟಿಕೆಗಳು ಉತ್ತಮವಾಗಿ ನಡೆದಿರುವ ಪರಿಣಾಮವಾಗಿ ಆಹಾರ ವಸ್ತುಗಳ ಬೆಲೆಯು ಮುಂದಿನ ದಿನಗಳಲ್ಲಿಯೂ ತೀರಾ ಹೆಚ್ಚಾಗುವ ಸಾಧ್ಯತೆ ಇಲ್ಲ. ಜಲಾಶಯಗಳಲ್ಲಿ ನೀರಿನ ಸಂಗ್ರಹವು ಚೆನ್ನಾಗಿ ಇದೆ. ಮುಂಗಾರು ಬೆಳೆಯು ಚೆನ್ನಾಗಿ ಆಗುವ ಅಂದಾಜು ಇದೆ. ಇವೆಲ್ಲವೂ ಬೆಲೆಯ ಸ್ಥಿರತೆಗೆ ನೆರವಾಗಲಿವೆ.
- ಆಹಾರ ವಸ್ತುಗಳು ಹಾಗೂ ಇಂಧನವನ್ನು ಹೊರತುಪಡಿಸಿ ಇತರ ಉತ್ಪನ್ನಗಳ ಹಣದುಬ್ಬರ ಪ್ರಮಾಣವು ಜುಲೈನಲ್ಲಿ ಶೇ 4.1ರಷ್ಟು ಆಗಿದೆ. ಇದು ಜೂನ್‌ನಲ್ಲಿ ಶೇ 4.4ರಷ್ಟಾಗಿತ್ತು. ಗ್ರಾಹಕ ಬಳಕೆಯ ಇತರ ಕೆಲವು ವರ್ಗಗಳಲ್ಲಿನ ಉತ್ಪನ್ನಗಳ ಬೆಲೆ ಏರಿಕೆಯು ಜೂನ್‌ನಲ್ಲಿದ್ದ ಪ್ರಮಾಣ ದಲ್ಲೇ ಉಳಿದಿದೆ.
- ತಂಬಾಕು ಮತ್ತು ತಂಬಾಕು ಉತ್ಪನ್ನಗಳ ಬೆಲೆ ಏರಿಕೆಯು ಶೇ 2.4ರಷ್ಟು ಆಗಿದೆ. ಬಟ್ಟೆ ಹಾಗೂ ಪಾದರಕ್ಷೆಗಳ ಬೆಲೆ ಏರಿಕೆ ಪ್ರಮಾಣವು ಜೂನ್‌ನಲ್ಲಿ ಇದ್ದ ಮಟ್ಟದಲ್ಲೇ ಮುಂದುವರಿದಿದೆ.

Dr Rajkumar IAS/KAS Academy

- ಇಂಧನ ಮತ್ತು ವಿದ್ಯುತ್ ಬೆಲೆ ಏರಿಕೆಯು ಶೇ 2.5ರಷ್ಟು ಇದ್ದಿದ್ದು ಶೇ 2.7ಕ್ಕೆ ಹೆಚ್ಚಾಗಿದೆ. ಆದರೂ ಒಟ್ಟಾರೆ ಚಿತ್ರಣವು ಬೆಲೆ ಸ್ಥಿರತೆಯನ್ನು ಹೇಳುತ್ತಿದೆ.
- ದಿನಬಳಕೆಯ ಯಾವುದೇ ಉತ್ಪನ್ನದ ಬೆಲೆಯು ತಕ್ಷಣಕ್ಕೆ ಸವಾಲಾಗಿ ಪರಿಣಮಿಸುವ ಸಾಧ್ಯತೆ ಇಲ್ಲ. ಹೀಗಿದ್ದರೂ ಪರಿಸ್ಥಿತಿಯು ಮಧ್ಯಮಾವಧಿಯಲ್ಲಿ ಇದೇ ರೀತಿ ಉಳಿದುಕೊಳ್ಳುವುದಿಲ್ಲ.
- 2026ರ ಜನವರಿಯಿಂದ ಹಣದುಬ್ಬರ ಪ್ರಮಾಣವು ಹೆಚ್ಚಳ ಕಾಣಲಿದೆ ಎಂದು ಭಾರತೀಯ ರಿಸರ್ವ್ ಬ್ಯಾಂಕ್ ಅಂದಾಜು ಮಾಡಿದೆ. ಅಮೆರಿಕದ ಒತ್ತಡಕ್ಕೆ ಮಣಿದು ಭಾರತವು ರಷ್ಯಾ ದಿಂದ ಕಚ್ಚಾ ತೈಲ ಖರೀದಿ ಕೈಬಿಟ್ಟರೆ, ಅದು ಕೂಡ ಹಣದುಬ್ಬರ ಹೆಚ್ಚಿಸುವ ಸಾಧ್ಯತೆ ಇದೆ.
- ಹಣದುಬ್ಬರಕ್ಕೆ ಸಂಬಂಧಿಸಿದ ಅಂಕಿ-ಅಂಶಗಳು ಈಗಿನ ಸಂದರ್ಭದಲ್ಲಿ ಹೆಚ್ಚು ಕಳವಳ ಮೂಡಿಸುವಂತೆ ಇಲ್ಲ. ಆದರೆ ಅರ್ಥ ವ್ಯವಸ್ಥೆಯ ಬೆಳವಣಿಗೆ ಕುರಿತ ಅಂದಾಜುಗಳು ತೀರಾ ಸಮಾಧಾನಕರವಾಗಿ ಇಲ್ಲ. ಪ್ರಸಕ್ತ ಹಣಕಾಸು ವರ್ಷದಲ್ಲಿ ಜಿಡಿಪಿ ಬೆಳವಣಿಗೆ ದರವು ಶೇ 6.5ರಷ್ಟು ಇರುತ್ತದೆ ಎಂದು ಆರ್‌ಬಿಐ ಅಂದಾಜು ಮಾಡಿದೆ.
- ಜಾಗತಿಕ ಅನಿಶ್ಚಿತತೆಗಳು ಜಿಡಿಪಿ ಬೆಳವಣಿಗೆ ದರದ ಮೇಲೆ ಪರಿಣಾಮ ಬೀರಬಹುದು ಎಂದು ಕೂಡ ಅದು ಹೇಳಿದೆ. ಅಮೆರಿಕವು ಆರಂಭಿಸಿರುವ ಸುಂಕ ಸಮರವು ದೇಶದ ಕೆಲವು ವಲಯಗಳ ಮೇಲೆ ಪರಿಣಾಮ ಉಂಟುಮಾಡುವುದು ಖಚಿತ. ಕೈ
- ಗಾರಿಕಾ ಉತ್ಪಾದನೆಯ ಸೂಚ್ಯಂಕವು ಜುಲೈನಲ್ಲಿ 10 ತಿಂಗಳ ಕನಿಷ್ಠ ಮಟ್ಟದಲ್ಲಿತ್ತು. ಅರ್ಥ ವ್ಯವಸ್ಥೆಯ ಆರೋಗ್ಯವನ್ನು ಸೂಚಿಸುವ ತೆರಿಗೆ ಸಂಗ್ರಹವು ಬಹಳ ಧನಾತ್ಮಕವಾಗಿ ಇಲ್ಲ. ಹಣದುಬ್ಬರ ಪ್ರಮಾಣವು ತೀರಾ ಕಡಿಮೆ ಆಗಿರುವುದು, ಆರ್ಥಿಕ ಬೆಳವಣಿಗೆಗೆ ಇಂಬು ನೀಡಲು ಸರ್ಕಾರವು ಮುಂದಡಿ ಇರಿಸಬಹುದಾದ ಸಂದರ್ಭವೊಂದನ್ನು ಸೃಷ್ಟಿಸಿಕೊಟ್ಟಿದೆ.
- ಸರ್ಕಾರದ ಕಡೆಯಿಂದ ಆಗುವ ವೆಚ್ಚ, ಹೂಡಿಕೆಗಳನ್ನು ಮಾತ್ರ ಆಧರಿಸಿ ಭಾರತ ಬೆಳವಣಿಗೆ ಕಾಣಲು ಸಾಧ್ಯವಿಲ್ಲ. ಖಾಸಗಿ ವಲಯದಿಂದ ಹೂಡಿಕೆ ಹೆಚ್ಚಬೇಕು. ಬೇಡಿಕೆಯು ಚುರುಕುಗೊಳ್ಳಬೇಕು. ಬೆಳವಣಿಗೆಗೆ ವೇಗ ನೀಡಲು ಅಥವಾ ವಿಷಮ ಸನ್ನಿವೇಶ ಎದುರಾದರೆ ಈಗಿನ ಬೆಳವಣಿಗೆ ಪ್ರಮಾಣವನ್ನು ಉಳಿಸಿಕೊಳ್ಳಲು ಈ ವಿಚಾರಗಳ ಬಗ್ಗೆ ಸರ್ಕಾರವು ಗಮನಹರಿಸಬೇಕು.

## ❖ ಅಡುಗೆ ಎಣ್ಣೆಯಿಂದ ವಿಮಾನ ಇಂಧನ: ಇಂಡಿಯನ್ ಆಯಿಲ್

- ಬಳಸಿದ ಅಡುಗೆ ಎಣ್ಣೆಯನ್ನು ವಿಮಾನದ ಇಂಧನವನ್ನಾಗಿ ಪರಿವರ್ತಿಸುವ ಕಾರ್ಯವನ್ನು ವರ್ಷಾಂತ್ಯದ ವೇಳೆಗೆ ಇಂಡಿಯನ್ ಆಯಿಲ್ ಕಂಪನಿ ಆರಂಭಿಸಲಿದೆ.
- ಬಳಸಿದ ಅಡುಗೆ ಎಣ್ಣೆಯಿಂದ ಸುಸ್ಥಿರ ವಿಮಾನ ಇಂಧನ (ಎಸ್‌ಎಎಫ್) ಉತ್ಪಾದಿಸುವ ಪ್ರಮಾಣ ಪತ್ರವನ್ನು ಇಂಡಿಯನ್ ಆಯಿಲ್‌ನ **ಹರಿಯಾಣದ ಪಾಣಿಪತ್** ಸಂಸ್ಕರಣಾ ಘಟಕವು ಪಡೆದಿದೆ.
- ಈ ರೀತಿ **ಅಂತರರಾಷ್ಟ್ರೀಯ ಪ್ರಮಾಣಪತ್ರ ಪಡೆದ ದೇಶದ ಮೊದಲ ಕಂಪನಿ ಇಂಡಿಯನ್ ಆಯಿಲ್** ಎಂದು ಕಂಪನಿಯ ಅಧ್ಯಕ್ಷ ಹೇಳಿದ್ದಾರೆ.
- ಎಸ್‌ಎಎಫ್ **ಪರ್ಯಾಯ ಇಂಧನ** ವಾಗಿದೆ. ಇದು **ವಿಮಾನಗಳ ಮಾಲಿನ್ಯ ಹೊರಸೂಸುವಿಕೆಯನ್ನು ಕಡಿಮೆ ಮಾಡುತ್ತದೆ.** ಇದನ್ನು ಸಾಂಪ್ರದಾಯಿಕ ವಿಮಾನ ಇಂಧನದ ಜೊತೆ **ಶೇ 50ರಷ್ಟು ಮಿಶ್ರಣ** ಮಾಡಬಹುದಾಗಿದೆ. **2027ರ ವೇಳೆಗೆ ಭಾರತವು ಅಂತರರಾಷ್ಟ್ರೀಯ ವಿಮಾನಗಳಿಗೆ ಒದಗಿಸುವ ಇಂಧನದಲ್ಲಿ ಶೇ 1ರಷ್ಟು ಎಸ್‌ಎಎಫ್ ಮಿಶ್ರಣ ಮಾಡುವುದನ್ನು ಕಡ್ಡಾಯ ಮಾಡಿದೆ.** ಈ ವರ್ಷದ ಅಂತ್ಯದಿಂದ ಘಟಕವು ವಾರ್ಷಿಕ 35 ಸಾವಿರ ಟನ್ ಎಸ್‌ಎಎಫ್ ಉತ್ಪಾದನೆ ಆರಂಭಿಸಲಿದೆ. ಇದು ಶೇ 1ರಷ್ಟು ಮಿಶ್ರಣವನ್ನು ಪೂರೈಸಲು ಸಾಕಾಗುತ್ತದೆ ಎಂದು ಹೇಳಿದ್ದಾರೆ.
- <u>ಎಣ್ಣೆ ಸಂಗ್ರಹ ಹೇಗೆ:</u> ದೊಡ್ಡ ಹೋಟೆಲ್‌ಗಳು, ರೆಸ್ಟೋರೆಂಟ್‌ಗಳು, ಕುರುಕುಲು ಮತ್ತು ಸಿಹಿ ತಿಂಡಿ ತಯಾರಿಸುವ **ಹಲ್ದಿರಾಮ್ಸ್** ಸೇರಿದಂತೆ ಅತಿಹೆಚ್ಚು ಎಣ್ಣೆ ಬಳಸುವ ಬಳಕೆದಾರರಿಂದ ಏಜೆನ್ಸಿಗಳು ಬಳಸಿದ ಎಣ್ಣೆಯನ್ನು ಸಂಗ್ರಹಿಸುತ್ತವೆ. ಇದನ್ನು ಪಾಣಿಪತ್‌ನಲ್ಲಿನ ಸಂಸ್ಕರಣಾ ಘಟಕಕ್ಕೆ ಪೂರೈಕೆ

Dr. Rajkumar IAS/KAS Academy

ಮಾಡಲಾಗುತ್ತದೆ. ಘಟಕವು ಎಣ್ಣೆಯನ್ನು ಬಳಸಿ **ಸುಸ್ಥಿರ ವಿಮಾನ ಇಂಧನ** ತಯಾರಿಸಲಿದೆ ಎಂದು ಹೇಳಿದ್ದಾರೆ.

- ದೊಡ್ಡ ಹೋಟೆಲ್‌ಗಳು ಮತ್ತು ರೆಸ್ಟೋರೆಂಟ್‌ಗಳು ಸಹಜವಾಗಿ ಒಮ್ಮೆ ಬಳಸಿದ ಎಣ್ಣೆಯನ್ನು ಮತ್ತೆ ಬಳಸುವುದಿಲ್ಲ. ಪ್ರಸ್ತುತ ಈ ಎಣ್ಣೆಯನ್ನು ಏಜೆನ್ಸಿಗಳು ಸಂಗ್ರಹಿಸಿ, ರಫ್ತು ಮಾಡುತ್ತಿವೆ.
- ಬಳಸಿದ ಅಡುಗೆ ಎಣ್ಣೆಯು ದೇಶದಲ್ಲಿ ದೊಡ್ಡ ಪ್ರಮಾಣದಲ್ಲಿ ಲಭ್ಯವಿದೆ. ಆದರೆ, ಸಂಗ್ರಹ ಮಾಡುವುದೇ ಸವಾಲಾಗಿದೆ. ದೊಡ್ಡ ಹೋಟೆಲ್‌ಗಳಿಂದ ಸಂಗ್ರಹಿಸುವುದು ಸುಲಭ. ಆದರೆ ಮನೆಗಳು ಸೇರಿದಂತೆ ಸಣ್ಣ ಪ್ರಮಾಣದ ಬಳಕೆದಾರರಿಂದ ಸಂಗ್ರಹಿಸಲು ಸೂಕ್ತ ಮಾರ್ಗ ಅಗತ್ಯ ಎಂದು ಹೇಳಿದ್ದಾರೆ.

## ❖ ಅಮೆರಿಕ ತಂಡದ ಭೇಟಿ ಮುಂದಕ್ಕೆ?

- ಭಾರತ ಮತ್ತು ಅಮೆರಿಕ ನಡುವಿನ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ಬಗ್ಗೆ ಮಾತುಕತೆ ನಡೆಸಲು ಭಾರತಕ್ಕೆ ಆಗಸ್ಟ್ 25ರಂದು ಭೇಟಿ ನೀಡಬೇಕಿದ್ದ ಅಮೆರಿಕದ ತಂಡವು ಭೇಟಿಯನ್ನು ಮುಂದೂಡುವ ಸಾಧ್ಯತೆ ಇದೆ.
- ಪ್ರಸ್ತಾವಿತ ದ್ವಿಪಕ್ಷೀಯ ವ್ಯಾಪಾರ ಒಪ್ಪಂದಕ್ಕೆ ಸಂಬಂಧಿಸಿದಂತೆ ಇದುವರೆಗೆ ಐದು ಸುತ್ತುಗಳ ಮಾತುಕತೆ ನಡೆದಿದೆ. ಆರನೆಯ ಸುತ್ತಿನ ಮಾತುಕತೆಗೆ ಅಮೆರಿಕದ ತಂಡವು ಭೇಟಿ ನೀಡಬೇಕಿದೆ. ಈ ಮೊದಲಿನ ವೇಳಾಪಟ್ಟಿ ಪ್ರಕಾರ ಮಾತುಕತೆಯು ಆಗಸ್ಟ್ 25ರಿಂದ 29ರವರೆಗೆ ನಡೆಯಬೇಕಿತ್ತು.
- ಭಾರತದಿಂದ ಆಮದಾಗುವ ಸರಕುಗಳ ಮೇಲೆ ಅಮೆರಿಕವು ಶೇಕಡ 50ರಷ್ಟು ಸುಂಕ ವಿಧಿಸಿರುವ ಹಿನ್ನೆಲೆಯಲ್ಲಿ, ಸಭೆಯು ಮುಂದಕ್ಕೆ ಹೋಗಿರುವುದು ಮಹತ್ವ ಪಡೆದಿದೆ.
- **ಭಾರತದ ಕೃಷಿ ಉತ್ಪನ್ನಗಳ ಮಾರುಕಟ್ಟೆ ಹಾಗೂ ಹೈನು ಉತ್ಪನ್ನಗಳ ಮಾರುಕಟ್ಟೆಯನ್ನು ತನಗೆ ಮುಕ್ತವಾಗಿಸಬೇಕು ಎಂದು ಅಮೆರಿಕವು ಒತ್ತಾಯಿಸುತ್ತಿದೆ.** ಆದರೆ ಇದಕ್ಕೆ ಕೇಂದ್ರ ಸರ್ಕಾರ ಒಪ್ಪಿಗೆ ನೀಡುತ್ತಿಲ್ಲ.
- **ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ** ಮೊದಲ ಹಂತವನ್ನು ಸೆಪ್ಟೆಂಬರ್-ಅಕ್ಟೋಬರ್ ವೇಳೆಗೆ ಅಂತಿಮಗೊಳಿಸುವ ಘೋಷಣೆಯನ್ನು ಎರಡೂ ದೇಶಗಳು ಮಾಡಿವೆ.

## ❖ ವಾಹನಗಳಿಗೆ ಕಡಿಮೆ ಮಟ್ಟದ ತೆರಿಗೆ?

- ವಾಹನಗಳ ವರ್ಗೀಕರಣದಿಂದ ಉಂಟಾಗುವ ವ್ಯಾಜ್ಯಗಳನ್ನು ಪರಿಹರಿಸಲು ಅನುಕೂಲ ಆಗುವ ರೀತಿಯಲ್ಲಿ ಜಿಎಸ್‌ಟಿ ವ್ಯವಸ್ಥೆಯ ಅಡಿ ವಾಹನಗಳ ತೆರಿಗೆ ಹಂತವನ್ನು ನಿರ್ಧಾರ ಮಾಡಲಾಗುತ್ತದೆ ಎಂದು ಮೂಲಗಳು ಹೇಳಿವೆ.
- ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ವ್ಯವಸ್ಥೆಯಲ್ಲಿ ಹಲವು ಸುಧಾರಣೆಗಳನ್ನು ತರುವ ಪ್ರಸ್ತಾವವನ್ನು ಕೇಂದ್ರ ಸರ್ಕಾರವು ಸಿದ್ಧಪಡಿಸಿದೆ.
- ವಾಹನಗಳ ಎಂಜಿನ್ ಸಾಮರ್ಥ್ಯ ಹಾಗೂ ವಾಹನಗಳ ಗಾತ್ರವನ್ನು ಆಧರಿಸಿ ಅವುಗಳನ್ನು ವರ್ಗೀಕರಿಸಲಾಗುತ್ತಿದೆ. ಈಗಿರುವ ವ್ಯವಸ್ಥೆಯಲ್ಲಿ ವಾಹನಗಳಿಗೆ ಶೇಕಡ 28ರಷ್ಟು ತೆರಿಗೆ ವಿಧಿಸಲಾಗುತ್ತಿದೆ. ಇದು ಜಿಎಸ್‌ಟಿ ವ್ಯವಸ್ಥೆಯಲ್ಲಿ ಗರಿಷ್ಠ ಮಟ್ಟದ ತೆರಿಗೆ.
- **ತೆರಿಗೆ ಮಾತ್ರವೇ ಅಲ್ಲದೆ, ವಾಹನಗಳ ಮೇಲೆ ಶೇ 1ರಿಂದ ಶೇ 22ರವರೆಗೆ ಪರಿಹಾರ ಸೆಸ್ ವಿಧಿಸಲಾಗುತ್ತಿದೆ.** ಇದು ವಾಹನ ಯಾವ ಬಗೆಯದ್ದು ಎಂಬುದನ್ನು ಆಧರಿಸಿ ತೀರ್ಮಾನವಾಗುತ್ತದೆ.
- ವಾಹನಗಳ ಎಂಜಿನ್ ಸಾಮರ್ಥ್ಯ ಹಾಗೂ ವಾಹನಗಳ ಉದ್ದವನ್ನು ಆಧರಿಸಿ ಒಟ್ಟು ತೆರಿಗೆ ಪ್ರಮಾಣವು ಶೇ 29ರಿಂದ ಶೇ 50ರವರೆಗೆ ಇರುತ್ತದೆ.
- ಪೆಟ್ರೋಲ್ ಚಾಲಿತ ಸಣ್ಣ ಕಾರುಗಳಿಗೆ ಶೇ 29ರಷ್ಟು ತೆರಿಗೆ ಪಾವತಿಸಬೇಕಾ ಗುತ್ತದೆ. ಎಸ್‌ಯುವಿಗಳಿಗೆ ಶೇ 50ರಷ್ಟು ತೆರಿಗೆ ಇರುತ್ತದೆ. ವಿದ್ಯುತ್ ಚಾಲಿತ ವಾಹನಗಳಿಗೆ ಶೇ 5ರಷ್ಟು ತೆರಿಗೆ ನಿಗದಿ ಮಾಡಲಾಗಿದೆ.
- ಜಿಎಸ್‌ಟಿ ವ್ಯವಸ್ಥೆಯ ಅಡಿಯಲ್ಲಿ ಎರಡು ಹಂತಗಳ ತೆರಿಗೆಯನ್ನು ಮಾತ್ರ ಉಳಿಸಿಕೊಳ್ಳುವ ಪ್ರಸ್ತಾವವನ್ನು ಈಗ ಕೇಂದ್ರ ಸರ್ಕಾರವು ಸಿದ್ಧಪಡಿಸಿದೆ. ಎಂಜಿನ್ ಸಾಮರ್ಥ್ಯ ಹಾಗೂ ವಾಹನದ

ಉದ್ದವನ್ನು ಆಧರಿಸಿ ವರ್ಗೀಕರಣ ಮಾಡುವುದರಿಂದ ಉಂಟಾಗುವ ವ್ಯಾಜ್ಯಗಳನ್ನು ಕೊನೆಗಾಣಿಸುವ ಗುರಿಯೊಂದಿಗೆ ವಾಹನಗಳನ್ನು ನಿರ್ದಿಷ್ಟ ತೆರಿಗೆ ಹಂತವೊಂದರಲ್ಲಿ ತರಲಾಗುತ್ತದೆ ಎಂದು ಮೂಲಗಳು ವಿವರಿಸಿವೆ.

- ತೆರಿಗೆ ಪ್ರಮಾಣವನ್ನು ಕಡಿಮೆ ಮಾಡುವುದರಿಂದ, ಕಾರುಗಳ ಬೆಲೆ ಇಳಿಕೆ ಆಗಿ ಅವು ಇನ್ನಷ್ಟು ಕೈಗೆಟಕುವಂತೆ ಆಗುತ್ತವೆ. ಆಗ ಅವುಗಳ ಮಾರಾಟ ಹೆಚ್ಚಾಗುತ್ತದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.
- ಜಿಎಸ್‌ಟಿ ವ್ಯವಸ್ಥೆಯಲ್ಲಿ ಈಗ ಇರುವ ಶೇ 12 ಹಾಗೂ ಶೇ 28ರ ತೆರಿಗೆ ಹಂತಗಳನ್ನು ತೆಗೆಯುವ ಕೇಂದ್ರದ ಪ್ರಸ್ತಾವವನ್ನು ಸಚಿವರ ಗುಂಪಿನಲ್ಲಿ (ಜಿಒಎಂ) ಆಗಸ್ಟ್ 21ರಂದು ಚರ್ಚಿಸಲಾಗುತ್ತದೆ. ನಂತರದಲ್ಲಿ ಈ ಪ್ರಸ್ತಾವವನ್ನು ಜಿಎಸ್‌ಟಿ ಮಂಡಳಿಯು ಕೈಗೆತ್ತಿಕೊಳ್ಳುವ ನಿರೀಕ್ಷೆ ಇದೆ.
- ಶೇ 40ರಷ್ಟು ತೆರಿಗೆಯನ್ನು ತಂಬಾಕಿನಂತಹ ಕೆಲವೇ ಕೆಲವು ಉತ್ಪನ್ನಗಳಿಗೆ ವಿಧಿಸಲಾಗುತ್ತದೆ. ಈ ಪ್ರಮಾಣದ ತೆರಿಗೆ ವ್ಯಾಪ್ತಿಯಲ್ಲಿ ಗರಿಷ್ಠ ಏಳು ಉತ್ಪನ್ನಗಳು ಬರಬಹುದು ಎಂದು ಮೂಲವೊಂದು ಹೇಳಿದೆ.

## ❖ ‘ಎಲ್ಲವೂ ನ್ಯಾಯಾಂಗ ನಿಂದನೆ ಅಲ್ಲ’

- ‘ತಾನು ಹೊರಡಿಸುವ ಪ್ರತಿಯೊಂದು ನಿರ್ದೇಶನದ ಉಲ್ಲಂಘನೆ ನ್ಯಾಯಾಂಗ ನಿಂದನೆ ಎನಿಸುವುದಿಲ್ಲ’ ಎಂಬ ಮಹತ್ವದ ಅಭಿಪ್ರಾಯವನ್ನು ದೆಹಲಿ ಹೈಕೋರ್ಟ್ ವ್ಯಕ್ತಪಡಿಸಿದೆ.
- ನ್ಯಾಯಮೂರ್ತಿಗಳಾದ ಅನಿಲ್ ಕ್ಷೇತ್ರಪಾಲ್ ಮತ್ತು ಹರೀಶ್ ವೈದ್ಯನಾಥನ್ ಅವರ ಪೀಠವು ಉತ್ತರಾಖಂಡ ಕೇಡರ್‌ನ ಐಎಫ್‌ಎಸ್ ಅಧಿಕಾರಿ ಸಂಜೀವ್ ಚತುರ್ವೇದಿ ಅವರಿಗೆ ಗುಪ್ತಚರ ವಿಭಾಗದ (ಐ.ಬಿ) ವರದಿ ಸಲ್ಲಿಸುವುದಕ್ಕೆ ಸಂಬಂಧಿಸಿದ ಪ್ರಕರಣದಲ್ಲಿ ಈ ಹೀಗೆ ಹೇಳಿದೆ.
- ಹೈಕೋರ್ಟ್ ವಿಭಾಗೀಯ ಪೀಠವು ಗುಪ್ತಚರ ವಿಭಾಗದ ಕೇಂದ್ರೀಯ ಸಾರ್ವಜನಿಕ ಮಾಹಿತಿ ಅಧಿಕಾರಿಗೆ (ಸಿಪಿಐಒ) ನೀಡಿದ ನಿರ್ದೇಶನವನ್ನು ಪದೇ ಪದೇ ಉದ್ದೇಶಪೂರ್ವಕವಾಗಿ ಉಲ್ಲಂಘಿಸಲಾಗಿದೆ ಎಂದು ಆರೋಪಿಸಿ ಚತುರ್ವೇದಿ ಸಲ್ಲಿಸಿದ್ದ ನ್ಯಾಯಾಂಗ ನಿಂದನೆ ಅರ್ಜಿಯ ವಿಚಾರಣೆಯನ್ನು ಪೀಠವು ನಡೆಸಿತು.
- ಐಎಫ್‌ಎಸ್ ಅಧಿಕಾರಿಗೆ ಸಂಬಂಧಿಸಿದ ಐ.ಬಿ ವರದಿ ಸೇರಿದಂತೆ ಸಂಬಂಧಿತ ದಾಖಲೆಗಳನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸುವಂತೆ ವಿಭಾಗೀಯ ಪೀಠವು ಆದೇಶಿಸಿತ್ತು. ಆದರೆ ಸಿಪಿಐಒ ಅವರು ದಾಖಲೆಗಳನ್ನು ಹಾಜರುಪಡಿಸಿರಲಿಲ್ಲ.
- ‘ನ್ಯಾಯಾಂಗ ನಿಂದನೆ ಪ್ರಕ್ರಿಯೆ ಪ್ರಾರಂಭಿಸುವುದು ಗಂಭೀರ ವಿಷಯ ವಾಗಿದ್ದು, ಅದನ್ನು ಸಾಮಾನ್ಯ ಎಂಬಂತೆ ಬಳಸಬಾರದು. ಮೇಲ್ಮನವಿಯ ವಿಚಾರಣೆ ವೇಳೆ ಸಂಬಂಧಪಟ್ಟವರಿಗೆ ದಾಖಲೆಗಳನ್ನು ಹಾಜರುಪಡಿಸುವಂತೆ ಒತ್ತಾಯಿಸುವ ಅಧಿಕಾರ ಪೀಠಕ್ಕೆ ಇದೆ. ಆದಾಗ್ಯೂ, ನ್ಯಾಯಪೀಠ ಹೊರಡಿಸಿದ ಯಾವುದೇ ನಿರ್ದೇಶನವನ್ನು ಉಲ್ಲಂಘಿಸಿದರೂ ನ್ಯಾಯಾಂಗ ನಿಂದನೆ ಪ್ರಕ್ರಿಯೆ ಪ್ರಾರಂಭಿಸುವ ಅಗತ್ಯವಿಲ್ಲ’ ಎಂದು ಪೀಠವು ತನ್ನ ಆದೇಶದಲ್ಲಿ ತಿಳಿಸಿದೆ.
- ನ್ಯಾಯಾಲಯದ ನಿರ್ದೇಶನ ಉಲ್ಲಂಘಿಸಿದ ವ್ಯಕ್ತಿಯ ಹೆಸರನ್ನು ಕೂಡ ಪ್ರತಿವಾದಿ ಒದಗಿಸಿಲ್ಲ. ಆದ್ದರಿಂದ ಒಂದು ಕಚೇರಿಯ ವಿರುದ್ಧ ನ್ಯಾಯಾಂಗ ನಿಂದನೆ ಪ್ರಕ್ರಿಯೆ ಪ್ರಾರಂಭಿಸಲು ಆಗುವುದಿಲ್ಲ ಎಂದೂ ಆದೇಶದಲ್ಲಿ ಹೇಳಿದೆ.
- ವಿಭಾಗೀಯ ಪೀಠವು ಮೊದಲು 2023ರ ಜುಲೈ 27ರಂದು ಮತ್ತು ಆ ಬಳಿಕ 2024ರ ಆಗಸ್ಟ್ 21ರಂದು ದಾಖಲೆಗಳನ್ನು ಒದಗಿಸಬೇಕೆಂದು ಐ.ಬಿಗೆ ಆದೇಶಿಸಿತ್ತು.

## ❖ ತ್ರಿಪಕ್ಷೀಯ ಮಾತುಕತೆಗೆ ಒಲವು

- ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್‌ಸ್ಕಿ ಹಾಗೂ ಐರೋಪ್ಯ ಒಕ್ಕೂಟದ ನಾಯಕರ ಜತೆ ಶ್ವೇತಭವನದಲ್ಲಿ ಮಹತ್ವದ ಸಭೆ ನಡೆಸಿದರು.

Dr. Rajkumar IAS Academy

- ಉಕ್ರೇನ್- ರಷ್ಯಾ ಯುದ್ಧವನ್ನು ಕೊನೆಗೊಳಿಸಲು ಟ್ರಂಪ್ ಅವರು ನಡೆಸುತ್ತಿರುವ ಪ್ರಯತ್ನದ ಭಾಗವಾಗಿ ನಡೆದ ಸಭೆ 'ರಚನಾತ್ಮಕ' ವಾಗಿತ್ತು ಎಂದು ಮೂಲಗಳು ತಿಳಿಸಿವೆ.
- ಮಾತುಕತೆಯು ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರನ್ನೂ ಒಳಗೊಂಡಂತೆ ತ್ರಿಪಕ್ಷೀಯ (ಟ್ರಂಪ್- ಪುಟಿನ್- ಝೆಲೆನ್‌ಸ್ಕಿ) ಮಾತು ಕತೆಗೆ ಹಾದಿಯೊದಗಿಸಬಹುದು ಎಂಬ ಒಲವನ್ನು ಟ್ರಂಪ್ ಹಾಗೂ ಝೆಲೆನ್‌ಸ್ಕಿ ಸಭೆಯ ಆರಂಭದಲ್ಲಿ ವ್ಯಕ್ತಪಡಿಸಿದರು.
- 'ಈ ಮಾತುಕತೆಯಲ್ಲಿ ಎಲ್ಲವೂ ಲೆಕ್ಕಾಚಾರದಂತೆ ನಡೆದರೆ, ತ್ರಿಪಕ್ಷೀಯ ಸಭೆ ನಡೆಯಲಿದೆ' ಎಂದು ಟ್ರಂಪ್ ಹೇಳಿದರು. 'ಯುದ್ಧವನ್ನು ನಿಲ್ಲಿಸಲು ನಾವು ರಷ್ಯಾ ಮತ್ತು ಉಕ್ರೇನ್ ಜತೆ ಸೇರಿ ಕೆಲಸ ಮಾಡಲಿದ್ದೇವೆ. ಮೂವರೂ ಜತೆಯಾಗಿ ಮಾತುಕತೆ ನಡೆಸಿದರೆ ಯುದ್ಧ ಕೊನೆಗೊಳಿಸುವ ಅವಕಾಶ ವಿರುತ್ತದೆ ಎಂದು ಭಾವಿಸಿದ್ದೇನೆ' ಎಂದು ತಿಳಿಸಿದರು.
- ಝೆಲೆನ್‌ಸ್ಕಿ ಕೂಡಾ ತ್ರಿಪಕ್ಷೀಯ ಮಾತುಕತೆ ಬಗ್ಗೆ ತಮ್ಮ ಒಲವು ವ್ಯಕ್ತಪಡಿಸಿದರು. 'ಅಮೆರಿಕದ ಅಧ್ಯಕ್ಷರು ಹೇಳಿದಂತೆ ನಾವು ತ್ರಿಪಕ್ಷೀಯ ಮಾತುಕತೆಗೆ ಸಿದ್ಧರಿದ್ದೇವೆ. ಅಂತಹ ಮಾತುಕತೆ ನಡೆದರೆ ಒಳ್ಳೆಯದು' ಎಂದರು.

'ಪುಟಿನ್ ಜತೆ ಮಾತನಾಡುವೆ'

- ಝೆಲೆನ್‌ಸ್ಕಿ ಜತೆಗಿನ ಸಭೆ ಬಳಿಕ ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರಿಗೆ ಕರೆ ಮಾಡಿ ಮಾತನಾಡುವುದಾಗಿ ಟ್ರಂಪ್ ಹೇಳಿದ್ದಾರೆ.

## ❖ ಕಲ್ಲೆ ಶಿವೋತ್ತಮರಾವ್‌ಗೆ ಅರಸು ಪ್ರಶಸ್ತಿ

- 2025–26ನೇ ಸಾಲಿನ 'ಡಿ.ದೇವರಾಜು ಅರಸು ಪ್ರಶಸ್ತಿ' ಗೆ ಪತ್ರಕರ್ತ ಕಲ್ಲೆ ಶಿವೋತ್ತಮರಾವ್ ಅವರನ್ನು ರಾಜ್ಯ ಸರ್ಕಾರ ಆಯ್ಕೆ ಮಾಡಿದೆ. 'ಸಾಮಾಜಿಕ ನ್ಯಾಯದ ಪರ ಅವರು ನಡೆಸಿದ ಹೋರಾಟಕ್ಕಾಗಿ ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ' ಎಂದು ಸರ್ಕಾರ ತಿಳಿಸಿದೆ.
- **ಪ್ರಶಸ್ತಿಯು ₹5 ಲಕ್ಷ ನಗದು ಹಾಗೂ ಫಲಕವನ್ನು ಒಳಗೊಂಡಿದೆ**. ವಿಧಾನಸೌಧ ದಲ್ಲಿ ಆ.20ರಂದು ಬೆಳಿಗ್ಗೆ 10.45ಕ್ಕೆ ನಡೆಯುವ ದೇವರಾಜ ಅರಸು ಅವರ 110ನೇ ಜನ್ಮದಿನಾಚರಣೆ ಸಮಾರಂಭದಲ್ಲಿ ಮುಖ್ಯಮಂತ್ರಿ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.
- **ಉಡುಪಿ ಜಿಲ್ಲೆಯ ಕಾರ್ಕಳದವ ರಾದ 95ರ ವಯೋಮಾನದಲ್ಲಿರುವ ಕಲ್ಲೆ ಶಿವೋತ್ತಮರಾವ್ 14ನೇ ವಯಸ್ಸಿ ನಲ್ಲಿಯೇ ಮಂಗಳೂರಿನ ನವಭಾರತ ದೈನಿಕದ ವರದಿಗಾರರಾಗಿ ಕೆಲಸ ಆರಂಭಿಸಿದ್ದರು. ರಾಷ್ಟ್ರಬಂಧು, ರಾಷ್ಟ್ರಮತ, ತಾಯಿನಾಡು, ಪ್ರಜಾವಾಣಿ, ಸಂಯುಕ್ತ ಕರ್ನಾಟಕ, ಕನ್ನಡ ಪ್ರಭ, ಕಂಠೀರವ ಪತ್ರಿಕೆಗಳಲ್ಲಿ ವರದಿಗಾರರಾಗಿ, ಜನ ಪ್ರಗತಿಯ ಸಂಪಾದಕರಾಗಿ ಕಾರ್ಯನಿರ್ವಹಿಸಿದ್ದಾರೆ.**
- 'ಜಯಪ್ರಕಾಶ ನಾರಾಯಣ, ರಾಮ ಮನೋಹರ ಲೋಹಿಯಾ ಮತ್ತು ಪೆರಿಯಾರ್ ಚಳವಳಿಗಳ ಪ್ರತಿಪಾದನೆ ಗಳ ಅನುಯಾಯಿಯಾಗಿದ್ದ ಶಿವೋತ್ತಮ ರಾವ್ ಅವರು, ಹಾವನೂರ ಆಯೋಗ ರಚನೆಗೂ ಮುನ್ನವೇ ಸಾಮಾಜಿಕ ನ್ಯಾಯದ ಪರವಾಗಿ ಹೋರಾಟ ನಡೆಸಿ ದ್ದರು' ಎಂದು ಆದೇಶದಲ್ಲಿ ತಿಳಿಸಲಾಗಿದೆ.
- 'ಪತ್ರಿಕೆಗಳ ಸಂಪಾದಕರಾಗಿದ್ದ ಅವಧಿಯಲ್ಲಿ ಹಿಂದುಳಿದ ವರ್ಗಗಳ ಯುವಕರಿಗೆ ವರದಿಗಾರಿಕೆಯ ಅವಕಾಶ ನೀಡಿದ್ದರು' ಎಂದು ವಿವರಿಸಲಾಗಿದೆ.

Dr Rajkumar IASKAS Academy

## ❖ 10 ವರ್ಷಗಳಲ್ಲಿ ಸಾಲ ₹130 ಲಕ್ಷ ಕೋಟಿ ಹೆಚ್ಚಳ

**ಕೇಂದ್ರ ಸರ್ಕಾರದ ಸಾಲ ಗಣನೀಯ ಏರಿಕೆ: ಲೋಕಸಭೆಯಲ್ಲಿ ನಿರ್ಮಲಾ ಸೀತಾರಾಮನ್ ಪ್ರತಿಕ್ರಿಯೆ**

# 10 ವರ್ಷಗಳಲ್ಲಿ ಸಾಲ ₹130 ಲಕ್ಷ ಕೋಟಿ ಹೆಚ್ಚಳ

ಪ್ರಜಾವಾಣಿ ವಾರ್ತೆ

ನವದೆಹಲಿ: ಕೇಂದ್ರ ಸರ್ಕಾರದ ಸಾಲ ಕಳೆದ 10 ವರ್ಷಗಳಲ್ಲಿ ₹130 ಲಕ್ಷ ಕೋಟಿ ಹೆಚ್ಚಳ ಆಗಿದೆ.

ಲೋಕಸಭೆಯಲ್ಲಿ ಪ್ರಶ್ನೋತ್ತರ ಅವಧಿಯಲ್ಲಿ ಸಂಸದ ಡಾ.ಎಂ.ಕೆ. ವಿಷ್ಣು ಪ್ರಸಾದ್ ಸೋಮವಾರ ಕೇಳಿದ ಪ್ರಶ್ನೆಗೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ನೀಡಿರುವ ಉತ್ತರದಲ್ಲಿ ಈ ಮಾಹಿತಿ ಇದೆ. 2015-16ರಲ್ಲಿ ಕೇಂದ್ರದ ಸಾಲವು ₹70.98 ಲಕ್ಷ ಕೋಟಿ ಆಗಿತ್ತು. 2025-26ರಲ್ಲಿ ₹200.16 ಲಕ್ಷ ಕೋಟಿಗೆ ಜಿಗಿದಿದೆ.

ಕೇಂದ್ರವು ಈ ವರ್ಷ ₹4.61 ಲಕ್ಷ ಕೋಟಿ ಸಾಲ ಮರುಪಾವತಿ ಮಾಡಿದೆ. ಒಟ್ಟು ಸಾಲಕ್ಕೆ ಈ ವರ್ಷ ಪಾವತಿಸುತ್ತಿರುವ ಬಡ್ಡಿ ₹12.76 ಲಕ್ಷ ಕೋಟಿ.

ಎಲ್ಲಿಂದ ಎಷ್ಟು ಸಾಲ (ಲಕ್ಷ ಕೋಟಿಗಳಲ್ಲಿ)

| ₹157.11 | ₹8.74 | ₹20.09 | ₹185.94 |
|---|---|---|---|
| ಆಂತರಿಕ ಸಾಲ | ಬಾಹ್ಯ ಸಾಲ | ಇತರ ಹೊಣೆಗಾರಿಕೆಗಳು | ಒಟ್ಟು |

**ಕೇಂದ್ರ ಸರ್ಕಾರದ ಸಾಲ (₹ಲಕ್ಷ ಕೋಟಿಗಳಲ್ಲಿ)**

| ವರ್ಷ | ವಿತ್ತ ಕೊರತೆ (ಶೇ) | ಹಣಕಾಸು ವರ್ಷದ ಅಂತ್ಯಕ್ಕೆ ಬಾಕಿ ಸಾಲ |
|---|---|---|
| 2015-16 | 5.33 | 70.98 |
| 2016-17 | 5.36 | 74.94 |
| 2017-18 | 5.91 | 82.87 |
| 2018-19 | 6.49 | 93.26 |
| 2019-20 | 9.34 | 105.07 |
| 2020-21 | 18.18 | 121.86 |
| 2021-22 | 15.85 | 138.66 |
| 2022-23 | 17.38 | 156.13 |
| 2023-24 | 16.55 | 171.70 |
| 2024-25 | 15.77 | 185.94 |
| 2025-26 | 15.69 | 200.16 |

**ಸಾಲ ಮರು ಪಾವತಿ (₹ಲಕ್ಷ ಕೋಟಿಗಳಲ್ಲಿ)**

| ಆರ್ಥಿಕ ವರ್ಷ | ಸಾಲ ಮರುಪಾವತಿ | ಸಾಲದ ಮೇಲಿನ ಬಡ್ಡಿ ಮರುಪಾವತಿ |
|---|---|---|
| 2015-16 | 1.67 | 4.42 |
| 2016-17 | 2.01 | 4.81 |
| 2017-18 | 1.64 | 5.29 |
| 2018-19 | 1.79 | 5.83 |
| 2019-20 | 2.70 | 6.12 |
| 2020-21 | 2.62 | 6.80 |
| 2021-22 | 3.00 | 8.05 |
| 2022-23 | 3.53 | 9.29 |
| 2023-24 | 4.88 | 10.64 |
| 2024-25 | 4.16 | 11.16 |
| 2025-26 | 4.61 | 12.76 |

**ಅತಿ ಹೆಚ್ಚು ಸಾಲ: ಅಗ್ರ ನಾಲ್ಕರಲ್ಲಿ ಕರ್ನಾಟಕ**

ತಮಿಳುನಾಡು (₹9,55,691 ಲಕ್ಷ ಕೋಟಿ), ಉತ್ತರ ಪ್ರದೇಶ (8,57,844 ಲಕ್ಷ ಕೋಟಿ) ಹಾಗೂ ಮಹಾರಾಷ್ಟ್ರ (₹8,12,068 ಲಕ್ಷ ಕೋಟಿ) ಮೊದಲ ಮೂರು ಸ್ಥಾನಗಳಲ್ಲಿದ್ದರೆ, ₹7,25,456 ಲಕ್ಷ ಕೋಟಿ ಸಾಲ ಮಾಡಿರುವ ಕರ್ನಾಟಕ ನಾಲ್ಕನೇ ಸ್ಥಾನದಲ್ಲಿದೆ.

ಚಾಮರಾಜನಗರ ಸಂಸದ ಸುನೀಲ್ ಬೋಸ್ ಕೇಳಿದ ಪ್ರಶ್ನೆಗೆ ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ ಈ ಉತ್ತರ ನೀಡಿದ್ದಾರೆ.

## ❖ ಜನಧನ: ರಾಜ್ಯದಲ್ಲಿ 54 ಲಕ್ಷ ಖಾತೆ ನಿಷ್ಕ್ರಿಯ

- ಪ್ರಧಾನಮಂತ್ರಿ ಜನ ಧನ ಯೋಜನೆಯಡಿ ಕರ್ನಾಟಕದಲ್ಲಿ ತೆರೆಯಲಾಗಿದ್ದ ₹2.08 ಕೋಟಿ ಖಾತೆಗಳ ಪೈಕಿ 54 ಲಕ್ಷ ಖಾತೆಗಳು ನಿಷ್ಕ್ರಿಯ ಆಗಿವೆ ಎಂದು ಕೇಂದ್ರ ಹಣಕಾಸು ಸಚಿವಾಲಯವು ಲೋಕಸಭೆಗೆ ತಿಳಿಸಿದೆ.
- ದೇಶದಲ್ಲಿ ಜುಲೈ 31ರವರೆಗೆ ಒಟ್ಟು 56.04 ಕೋಟಿ ಜನಧನ ಖಾತೆಗಳನ್ನು ತೆರೆಯಲಾಗಿದೆ. ಈ ಪೈಕಿ, ₹13.04 ಲಕ್ಷ ಖಾತೆಗಳು ನಿಷ್ಕ್ರಿಯವಾಗಿವೆ. ಭಾರತೀಯ ರಿಸರ್ವ್ ಬ್ಯಾಂಕ್ 2009ರಲ್ಲಿ ಹೊರಡಿಸಿದ ಮಾರ್ಗಸೂಚಿಗಳ ಪ್ರಕಾರ, ಎರಡು ವರ್ಷಗಳಿಗಿಂತ ಹೆಚ್ಚು ಕಾಲ ಖಾತೆಯಲ್ಲಿ ಯಾವುದೇ ವಹಿವಾಟು ನಡೆಯದಿದ್ದರೆ ಉಳಿತಾಯ ಖಾತೆಯನ್ನು ನಿಷ್ಕ್ರಿಯ ಎಂದು ಪರಿಗಣಿಸಬೇಕು ಎಂದು ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ ಅವರು ಸದನಕ್ಕೆ ತಿಳಿಸಿದರು.
- ನೇರ ನಗದು ವರ್ಗಾವಣೆ ಯಂತಹ ಸರ್ಕಾರದ ವಿವಿಧ ಯೋಜನೆಗಳ ಮೊತ್ತವನ್ನು ಜನ ಧನ ಖಾತೆ ಸೇರಿದಂತೆ ಬ್ಯಾಂಕ್ ಖಾತೆಗೆ ನೇರವಾಗಿ ಜಮಾ ಮಾಡಲಾಗುತ್ತದೆ. ಈ ಮೊತ್ತವನ್ನು ನಿಷ್ಕ್ರಿಯ ಖಾತೆಗಳಿಗೂ ವರ್ಗಾಯಿಸಲಾಗುತ್ತದೆ ಎಂದು ಅವರು ಸ್ಪಷ್ಟಪಡಿಸಿದರು.
- ಖಾತೆ ನಿಷ್ಕ್ರಿಯಗೊಳ್ಳುವ ಬಗ್ಗೆ ಬ್ಯಾಂಕುಗಳು ಖಾತೆದಾರರಿಗೆ ಪತ್ರಗಳು, ಇಮೇಲ್ ಅಥವಾ ಎಸ್ಎಂಎಸ್ ಮೂಲಕ ಲಿಖಿತವಾಗಿ ಮಾಹಿತಿ ನೀಡುತ್ತವೆ ಎಂದರು.

## ❖ ಗೋಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್‌ನಲ್ಲಿ 'ಶಕ್ತಿ'

- 'ಶಕ್ತಿ' ಯೋಜನೆಯಡಿ ಸಾರಿಗೆ ನಿಗಮಗಳ ಬಸ್‌ಗಳಲ್ಲಿ 500 ಕೋಟಿ ಬಾರಿ ಮಹಿಳೆ ಯರು ಪ್ರಯಾಣಿಸಿರುವುದು ಗೋಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್ ನಲ್ಲಿ ದಾಖಲಾಗಿದೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ.
- ಕೆಎಸ್ಆರ್‌ಟಿಸಿ, ಬಿಎಂಟಿಸಿ, ಎನ್‌ಕೆಆರ್‌ಟಿಸಿ, ಕೆಕೆಆರ್‌ಟಿಸಿ ಆಡಳಿತ ಮಂಡಳಿ, ಅಧಿಕಾರಿಗಳು ಮತ್ತು ಸಿಬ್ಬಂದಿಯ ಪರಿಶ್ರಮ, ಪ್ರಾಮಾಣಿಕತೆ ಇದಕ್ಕೆ ಕಾರಣ. ಶಕ್ತಿ ಯೋಜನೆಯು ಸಾಮಾಜಿಕವಾಗಿ, ಶೈಕ್ಷಣಿಕವಾಗಿ, ಆರ್ಥಿಕವಾಗಿ ಮಹಿಳೆಯರನ್ನು ಸಬಲರ ನ್ನಾಗಿಸುತ್ತದೆ ಎಂಬ ಕಾರಣಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಈ ಯೋಜನೆ ಜಾರಿಗೊಳಿಸಿದ್ದರು ಎಂದು ಹೇಳಿದ್ದಾರೆ.

- ಎರಡು ವರ್ಷಗಳಲ್ಲಿ 5,800 ಹೊಸ ಬಸ್‌ಗಳ ಸೇರ್ಪಡೆ, 10,000 ಸಿಬ್ಬಂದಿ ನೇಮಕ, ಸಾಲ ಪಾವತಿಸಲು ಸರ್ಕಾರ ದಿಂದ ₹2,000 ಕೋಟಿ ಸಹಾಯ, ಸಾರಿಗೆ ಸಂಸ್ಥೆಗಳ ಪ್ರಯಾಣಿಕರ ಸಂಖ್ಯೆ ಯಲ್ಲಿ ಹೆಚ್ಚಳ ಸೇರಿದಂತೆ ಅನೇಕ ಬದಲಾವಣೆಗಳು ಆಗಿವೆ ಎಂದಿದ್ದಾರೆ.
- ಎರಡು ಪ್ರಶಸ್ತಿ: ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಕೈಗೊಂಡಿರುವ ಅತ್ಯುತ್ತಮ ನೇಮಕಾತಿ ಉಪಕ್ರಮ ಗಳಿಗಾಗಿ ಎರಡು ಪ್ರಶಸ್ತಿಗಳು ಬಂದಿವೆ. 'ಅವಾರ್ಡ್ ಫಾರ್ ಇನ್‌ಸ್ಟಿಟ್ಯೂಷನ್ ಬಿಲ್ಡಿಂಗ್' , 'ಬೆಸ್ಟ್ ಇನ್‌ಕ್ಲೂಷನ್ ರಿಕ್ರೂಟ್‌ಮೆಂಟ್ ಪ್ರೋಗ್ರಾಂ' ಪ್ರಶಸ್ತಿಗಳನ್ನು ಸಿಂಗಪುರದಲ್ಲಿ ನಡೆದ ಸಮಾರಂಭದಲ್ಲಿ ಸ್ವೀಕರಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ❖ 'ಆಕ್ಸಿಯಂ-4' ಮಿಷನ್‌ಗೆ ₹548 ಕೋಟಿ ವೆಚ್ಚ

- 'ಆಕ್ಸಿಯಂ-4'ರ ಭಾಗವಾಗಿ ಜೂನ್ 25ರಿಂದ ಜುಲೈ 15ರವರೆಗೆ ಬಾಹ್ಯಾಕಾಶ ದಲ್ಲಿ ಕಳೆದಿದ್ದ ಶುಭಾಂಶು ಅವರಿಗೆ ಭಾರತವು ₹548 ಕೋಟಿ ವ್ಯಯಿಸಿದೆ' ಎಂದು ಕೇಂದ್ರ ಬಾಹ್ಯಾಕಾಶ ಹಾಗೂ ತಂತ್ರಜ್ಞಾನ ಸಚಿವ ಜಿತೇಂದ್ರ ಸಿಂಗ್ ಲೋಕಸಭೆಯಲ್ಲಿ ಮಾಹಿತಿ ನೀಡಿದರು. ಕಾರ್ಯಾಚರಣೆಗೆ ತಗುಲಿದ ವೆಚ್ಚಗಳ ಕುರಿತು ಮೊದಲ ಸಲ ಅಧಿಕೃತವಾಗಿ ಮಾಹಿತಿ ನೀಡಲಾಗಿದೆ.
- ಚಂದ್ರಯಾನ್-3 ಯೋಜನೆಗೆ ₹600 ಕೋಟಿ ಖರ್ಚಾಗಿದ್ದು, ಗಗನಯಾನ್ ಬಜೆಟ್ ₹10 ಸಾವಿರ ಕೋಟಿಯಾಗಿರಲಿದೆ' ಎಂದು ತಿಳಿಸಿದರು.

2040ಕ್ಕೆ ಚಂದ್ರನಲ್ಲಿ ಕಾಲಿಡಲಿರುವ ಭಾರತದ ಗಗನಯಾತ್ರಿ: ಜಿತೇಂದ್ರ ಸಿಂಗ್

- 'ಭಾರತದ ಗಗನಯಾತ್ರಿಯೊಬ್ಬರು 2040ಕ್ಕೆ ಚಂದ್ರನ ಅಂಗಳಕ್ಕೆ ಕಾಲಿಡಲಿದ್ದು, 'ವಿಕಸಿತ ಭಾರತ' ಕ್ಕೆ ಆ ಸಂದರ್ಭ ಸಾಕ್ಷಿಯಾಗಲಿದೆ' ಎಂದು ಕೇಂದ್ರ ಭೂ ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವ ಜಿತೇಂದ್ರ ಸಿಂಗ್ ತಿಳಿಸಿದರು.

## ❖ 'ಜನವಿಶ್ವಾಸ್' ಮಸೂದೆ ಲೋಕಸಭೆಯಲ್ಲಿ ಮಂಡನೆ

- ಸಣ್ಣ ಪುಟ್ಟ ತಪ್ಪುಗಳಿಗೆ ಶಿಕ್ಷೆಯಿಂದ ವಿನಾಯಿತಿ ನೀಡುವ, ಸುಗಮ ಜೀವನ ನಿರ್ವಹಣೆ ಹಾಗೂ ಸುಲಲಿತ ವ್ಯವಹಾರಕ್ಕೆ ಅನುವು ಮಾಡಿಕೊಡುವ ಉದ್ದೇಶದ 'ಜನ ವಿಶ್ವಾಸ್ (ತಿದ್ದುಪಡಿ)–2025' ಮಸೂದೆಯನ್ನು ಸೋಮವಾರ ಲೋಕಸಭೆಯಲ್ಲಿ ಮಂಡಿಸಲಾಗಿದೆ.
- ವ್ಯಾಪಾರ ನಡೆಸುವವರಲ್ಲಿ ವಿಶ್ವಾಸ ಮೂಡಿಸುವ ಗುರಿಯನ್ನು ಈ ಮಸೂದೆ ಹೊಂದಿದೆ. ಇದನ್ನು ಆಯ್ಕೆ ಸಮಿತಿಗೆ ವರ್ಗಾಯಿಸಲಾಗಿದೆ.
- ಈ ಮಸೂದೆಯ ಮೂಲಕ 335 ನಿಬಂಧನೆಗಳನ್ನು ತಿದ್ದುಪಡಿ ಮಾಡುವ ಪ್ರಸ್ತಾವವಿದೆ.
- ವ್ಯವಹಾರಗಳನ್ನು ಸರಳೀಕರಿಸಲು 288 ನಿಬಂಧನೆಗಳನ್ನು ಅಪರಾಧ ಮುಕ್ತಗೊಳಿಸಲಾಗುತ್ತಿದ್ದು, 67 ನಿಬಂಧನೆಗಳು ಸುಗಮ ಜೀವನಕ್ಕೆ ಸಂಬಂಧಿಸಿರಲಿವೆ.

ಭಾರತೀಯ ಬಂದರುಗಳ ಮಸೂದೆ-2025ಕ್ಕೆ ರಾಜ್ಯಸಭೆಯು ಅಂಗೀಕಾರ ನೀಡಿತು.

- ಬಂದರುಗಳಿಗೆ ಸಂಬಂಧಿಸಿದ ಕಾನೂನುಗಳ ಕ್ರೋಡೀಕರಣ, ಬಂದರಿನ ಸಮಗ್ರ ಅಭಿವೃದ್ಧಿಗೆ ಉತ್ತೇಜನ, ವ್ಯಾಪಾರವನ್ನು ಸರಳಗೊಳಿಸುವಿಕೆ ಹಾಗೂ ದೇಶದ ಕರಾವಳಿಯ ಗರಿಷ್ಠ ಬಳಕೆಯ ಖಾತ್ರಿಯನ್ನು ಮಸೂದೆಯು ಒಳಗೊಂಡಿದೆ.

## ❖ ನಿರುದ್ಯೋಗ ಪ್ರಮಾಣ ಇಳಿಕೆ

- ದೇಶದಲ್ಲಿ ನಿರುದ್ಯೋಗ ದರವು ಜುಲೈನಲ್ಲಿ ಶೇ 5.2ಕ್ಕೆ ಇಳಿದಿದೆ ಎಂದು ಕೇಂದ್ರ ಸಾಂಖ್ಯಿಕ ಮತ್ತು ಯೋಜನಾ ಅನುಷ್ಠಾನ ಸಚಿವಾಲಯ ತಿಳಿಸಿದೆ.
- ಜೂನ್ ತಿಂಗಳಿನಲ್ಲಿ ಇದು ಶೇ 5.6 ರಷ್ಟಿತ್ತು. ಪುರುಷರಲ್ಲಿ ನಿರುದ್ಯೋಗ ಪ್ರಮಾಣವು ಶೇ 5.3ರಷ್ಟಿದ್ದರೆ, ಮಹಿಳೆ ಯರಲ್ಲಿ ಇದು ಶೇ 5.1ರಷ್ಟು ಇದೆ ಎಂದು ತಿಳಿಸಿದೆ.



Dr. Rajkumar IAS/KAS Academy

- ನಗರ ಪ್ರದೇಶದಲ್ಲಿರುವ ಎಲ್ಲ ವಯೋಮಾನದವರ ನಿರುದ್ಯೋಗ ಪ್ರಮಾಣ ಜೂನ್‌ನಲ್ಲಿ ಶೇ 7.1 ಇತ್ತು. ಇದು ಜುಲೈನಲ್ಲಿ ಶೇ 7.2ಕ್ಕೆ ಏರಿಕೆಯಾಗಿದೆ. ಗ್ರಾಮೀಣ ಪ್ರದೇಶದಲ್ಲಿ ಶೇ 4.9ರಿಂದ ಶೇ 4.4ಕ್ಕೆ ಇಳಿದಿದೆ.
- ಈ ಪೈಕಿ 15ರಿಂದ 29 ವರ್ಷದೊಳಗಿನವರ ನಿರುದ್ಯೋಗ ಪ್ರಮಾಣವು ಶೇ 15.3ರಿಂದ ಶೇ 14.9ಕ್ಕೆ ತಗ್ಗಿದೆ. ಇದು ನಗರ ಪ್ರದೇಶದಲ್ಲಿ ಶೇ 19ರಷ್ಟಿದ್ದರೆ, ಗ್ರಾಮೀಣ ಭಾಗದಲ್ಲಿ ಶೇ 13ರಷ್ಟಿದೆ.

## ❖ ಎ.ಸಿ ಬೆಲೆ ₹2,500 ಇಳಿಕೆ?

- ಹವಾನಿಯಂತ್ರಕ ಗಳ (ಎ.ಸಿ) ಮೇಲಿನ ಜಿಎಸ್‌ಟಿ ದರವನ್ನು ಈಗಿನ ಶೇ 28ರಿಂದ ಶೇ 18ಕ್ಕೆ ತಗ್ಗಿಸುವ ಪ್ರಸ್ತಾವನೆಯನ್ನು ಕೇಂದ್ರವು ಸಿದ್ಧಪಡಿಸಿರುವ ಹಿನ್ನೆಲೆಯಲ್ಲಿ, ಈ ಬಾರಿ ಹಬ್ಬಗಳ ಋತುವಿನಲ್ಲಿ ಇವುಗಳ ಮಾರಾಟವು ಹೆಚ್ಚಿನ ಮಟ್ಟದಲ್ಲಿ ಇರಲಿದೆ ಎಂಬ ನಿರೀಕ್ಷೆಯಲ್ಲಿ ತಯಾರಕರು ಇದ್ದಾರೆ.
- ತೆರಿಗೆ ಹಂತದಲ್ಲಿನ ಬದಲಾವಣೆಯು ಜಾರಿಗೆ ಬಂದಲ್ಲಿ ಹವಾನಿಯಂತ್ರಕ ಗಳ ಬೆಲೆಯು ₹1,500ರಿಂದ ₹2,500ರವರೆಗೆ ಇಳಿಕೆ ಆಗಲಿದೆ.
- 32 ಇಂಚುಗಳಿಗಿಂತ ಹೆಚ್ಚಿನ ಗಾತ್ರದ ಟಿ.ವಿ.ಗಳ ಮೇಲಿನ ತೆರಿಗೆ ಕೂಡ ಈಗಿನ ಶೇ 28ರಿಂದ ಶೇ 18ಕ್ಕೆ ಇಳಿಕೆ ಆಗುವ ನಿರೀಕ್ಷೆ ಇದೆ.
- ಸರ್ಕಾರವು ಪ್ರಸ್ತಾವಿತ ಬದಲಾವಣೆ ಗಳನ್ನು ಆದಷ್ಟು ಬೇಗ ಜಾರಿಗೆ ತರಬೇಕು. ಏಕೆಂದರೆ ಜನರು ಈಗ ತಮ್ಮ ಖರೀದಿ ತೀರ್ಮಾನಗಳನ್ನು ಮುಂದಕ್ಕೆ ಹಾಕುತ್ತಿದ್ದಾರೆ ಎಂದು ಬ್ಲೂಸ್ಟಾರ್ ಕಂಪನಿಯ ವ್ಯವಸ್ಥಾಪಕ ನಿರ್ದೇಶಕ ಬಿ. ತ್ಯಾಗರಾಜನ್ ಹೇಳಿದ್ದಾರೆ.



### ಜಿಎಸ್‌ಟಿ ಬದಲಾವಣೆ: ಯಾವುದರ ಬೆಲೆ ತಗ್ಗಬಹುದು?

ಸರಕು ಮತ್ತು ಸೇವಾ ತೆರಿಗೆ ವ್ಯವಸ್ಥೆಯಲ್ಲಿ ಬಹಳಷ್ಟು ಬದಲಾವಣೆಗಳನ್ನು ತರಲು ಕೇಂದ್ರ ಸರ್ಕಾರ ಮುಂದಾಗಿದೆ. ಜಿಎಸ್‌ಟಿಯಲ್ಲಿ ಬರಲಿರುವ ಬದಲಾವಣೆಗಳು ದೇಶವಾಸಿಗಳಿಗೆ ದೀಪಾವಳಿ ಉಡುಗೊರೆ ಎಂದು ಪ್ರಧಾನಿ ನರೇಂದ್ರ ಮೋದಿ ಬಣ್ಣಿಸಿದ್ದಾರೆ.

ಜಿಎಸ್‌ಟಿ ಅಡಿ ಶೇ 12ರಷ್ಟು ತೆರಿಗೆ ವಿಧಿಸಲಾಗುತ್ತಿರುವ ಬಹುತೇಕ ವಸ್ತುಗಳನ್ನು ಶೇ 5ರ ತೆರಿಗೆ ಹಂತಕ್ಕೆ ತರಲಾಗುತ್ತದೆ. ಶೇ 28ರಷ್ಟು ತೆರಿಗೆ ವಿಧಿಸಲಾಗುತ್ತಿರುವ ಬಹುತೇಕ ವಸ್ತುಗಳನ್ನು ಶೇ 18ರ ತೆರಿಗೆ ಹಂತಕ್ಕೆ ತರಲಾಗುತ್ತದೆ ಎಂದು ಕೇಂದ್ರ ಸರ್ಕಾರದ ಮೂಲಗಳು ಹೇಳಿವೆ. ಜಿಎಸ್‌ಟಿಯ ಈಗಿನ ನಾಲ್ಕು ತೆರಿಗೆ ಹಂತಗಳಲ್ಲಿ ಇರುವ ಕೆಲವು ವಸ್ತುಗಳ ಮೇಲೊಂದು ಪಕ್ಷಿನೋಟ ಇಲ್ಲಿದೆ.

**5% ರಷ್ಟು ತೆರಿಗೆ**
ಸಕ್ಕರೆ, ಚಹಾ, ಅಡುಗೆ ಎಣ್ಣೆ, ಒಣದ್ರಾಕ್ಷಿ, ಮನೆಬಳಕೆಯ ಅಡುಗೆ ಅನಿಲ, ಗೋಡಂಬಿ, ₹500ಕ್ಕಿಂತ ಕಡಿಮೆ ಬೆಲೆಯ ಪಾದರಕ್ಷೆಗಳು, ₹1,000ಕ್ಕಿಂತ ಕಡಿಮೆ ಬೆಲೆಯ ಉಡುಪುಗಳು, ಪ್ಯಾಕ್ ಮಾಡಿ ಲೇಬಲ್ ಅಂಟಿಸಿರುವ ಅಕ್ಕಿ, ಸಂಬಾರ ಪದಾರ್ಥಗಳು, ಅಗರಬತ್ತಿಗಳು, ಜೀವರಕ್ಷಕ ಔಷಧಗಳು, ಇನ್‌ಸ್ಟಾಂಟ್ ಅಲ್ಲದ ಕಾಫಿ ಪುಡಿ

**12% ರಷ್ಟು ತೆರಿಗೆ**
ಬೆಣ್ಣೆ, ತುಪ್ಪ, ಚೀಸ್, ಬಾದಾಮಿ, ಪಿಸ್ತಾ, ಖರ್ಜೂರ, ಹಣ್ಣಿನ ರಸ, ಜಾಮ್, ಛತ್ರಿಗಳು, ಕೆಲವು ಆಟಿಕೆಗಳು

**18% ರಷ್ಟು ತೆರಿಗೆ**
ಮೊಬೈಲ್ ಫೋನ್‌ಗಳು, ತಲೆಗೆ ಸವರುವ ಎಣ್ಣೆ, ಬಂಡವಾಳ ಸರಕುಗಳು, ಟೂತ್‌ಪೇಸ್ಟ್, ಸೋಪು, ಐಸ್ ಕ್ರೀಂ, ಕಂಪ್ಯೂಟರ್‌ಗಳು

**28% ರಷ್ಟು ತೆರಿಗೆ**
ಸಿಗರೇಟು, ಸಣ್ಣ ಕಾರುಗಳು, ಹವಾ ನಿಯಂತ್ರಕ ಹಾಗೂ ಫ್ರಿಜ್‌ನಂತಹ ಗ್ರಾಹಕ ಬಳಕೆ ಉಪಕರಣಗಳು, ಐಷಾರಾಮಿ ಕಾರುಗಳು, ದ್ವಿಚಕ್ರ ವಾಹನಗಳು

(ಮಾಹಿತಿ: ಕೇಂದ್ರ ಪರೋಕ್ಷ ತೆರಿಗೆಗಳು ಮತ್ತು ಸೀಮಾಸುಂಕ ಮಂಡಳಿ)

- ಹವಾನಿಯಂತ್ರಕಗಳು, ಇತರ ಕೆಲವು ಉತ್ಪನ್ನಗಳ ಮೇಲಿನ ಜಿಎಸ್‌ಟಿಯನ್ನು ಶೇ 18ಕ್ಕೆ ಇಳಿಕೆ ಮಾಡಿದಾಗ, ಮಾರುಕಟ್ಟೆ ಬೆಲೆಯಲ್ಲಿ ಶೇ 7ರವರೆಗೆ ಇಳಿಕೆ ಕಾಣಬಹುದು ಎಂದು ಪ್ಯಾನಾಸೋನಿಕ್ ಲೈಫ್ ಸಲ್ಯೂಷನ್ಸ್ ಇಂಡಿಯಾ ಕಂಪನಿಯ ಅಧ್ಯಕ್ಷ ಮನೀಶ್ ಶರ್ಮಾ ಹೇಳಿದ್ದಾರೆ.

## ❖ ಮನೆಗಳ ಬೆಲೆಯಲ್ಲಿ ಏರಿಕೆ ಬೆಂಗಳೂರಿಗೆ 4ನೇ ಸ್ಥಾನ

- ಜಗತ್ತಿನ ಪ್ರಮುಖ 46 ನಗರಗಳಲ್ಲಿನ ಪ್ರೀಮಿಯಂ ವರ್ಗದ ಮನೆಗಳ ವಾರ್ಷಿಕ ಬೆಲೆ ಏರಿಕೆಯ ಪಟ್ಟಿಯಲ್ಲಿ ಬೆಂಗಳೂರು 4ನೇ ಸ್ಥಾನದಲ್ಲಿದೆ. ಮುಂಬೈ ಮತ್ತು ದೆಹಲಿ ಕ್ರಮವಾಗಿ 6 ಮತ್ತು 15ನೇ ಸ್ಥಾನದಲ್ಲಿವೆ.
- ಬೆಂಗಳೂರಿನಲ್ಲಿ ಮನೆಗಳ ದರ ಏರಿಕೆಯು ವಾರ್ಷಿಕ ಶೇ 10.2ರಷ್ಟು ಇದೆ ಎಂದು ರಿಯಲ್ ಎಸ್ಟೇಟ್ ಸಲಹಾ ಸಂಸ್ಥೆ ನೈಟ್ ಫ್ರಾಂಕ್ ವರದಿ ತಿಳಿಸಿದೆ.
- ಮೊದಲ ಸ್ಥಾನದಲ್ಲಿ ದಕ್ಷಿಣ ಕೊರಿಯಾದ ಸೋಲ್ ಇದೆ. ಇಲ್ಲಿನ ಪ್ರೀಮಿಯಂ ವರ್ಗದ ಮನೆಗಳ ವಾರ್ಷಿಕ ಬೆಲೆ ಹೆಚ್ಚಳವು ಶೇ 25.2ರಷ್ಟಿದೆ. ನಂತರದ ಸ್ಥಾನದಲ್ಲಿ ಟೋಕಿಯೊ (ಶೇ 16.3) ಮತ್ತು ದುಬೈ (ಶೇ 15.8) ಇವೆ. ಬೆಲೆ ಏರಿಕೆ ಪ್ರಮಾಣವು ಮುಂಬೈನಲ್ಲಿ ಶೇ 8.7ರಷ್ಟು ಮತ್ತು ದೆಹಲಿಯಲ್ಲಿ ಶೇ 3.9ರಷ್ಟಿದೆ.
- ಕಳೆದ ಒಂದು ವರ್ಷದಲ್ಲಿ ಜಗತ್ತಿನ ಪ್ರೀಮಿಯಂ ವರ್ಗದ ಮನೆಗಳ ಸರಾಸರಿ ಬೆಲೆ ಶೇ 2.3ರಷ್ಟು ಹೆಚ್ಚಾಗಿದೆ ಎಂದು ಜಾಗತಿಕ ಪ್ರೀಮಿಯಂ ನಗರಗಳ ಸೂಚ್ಯಂಕ (ಪಿಜಿಸಿಐ) ಏಪ್ರಿಲ್-ಜೂನ್ ವರದಿಯಲ್ಲಿ ಸಂಸ್ಥೆಯು ತಿಳಿಸಿದೆ.

## ❖ ವಾಂಗ್ ಯಿ ಭಾರತಕ್ಕೆ ಭೇಟಿ

- ಗಡಿ ವಿಷಯಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ಡೊಭಾಲ್ ಜತೆ ಮಾತುಕತೆ ನಡೆಸುವ ಸಂಬಂಧ ವಾಂಗ್ ಯಿ ಅವರು ಭಾರತಕ್ಕೆ ಎರಡು ದಿನಗಳ ಪ್ರವಾಸ ಕೈಗೊಂಡಿದ್ದಾರೆ.

Dr. Rajkumar IAS Academy


- ಡೊಭಾಲ್ ಮತ್ತು ವಾಂಗ್ ಯಿ ಅವರು ಗಡಿ ಸಮಸ್ಯೆ ಪರಿಹಾರಕ್ಕಾಗಿ ಎರಡೂ ದೇಶಗಳಿಂದ ನಿಯೋಜನೆಗೊಂಡಿರುವ ವಿಶೇಷ ಪ್ರತಿನಿಧಿಗಳಾಗಿದ್ದಾರೆ. ಇದು 24ನೇ ಸುತ್ತಿನ ಚರ್ಚೆಯಾಗಿದೆ.
- ಶಾಂಘೈ ಸಹಕಾರ ಸಂಘಟನೆಯ (ಎಸ್‌ಸಿಒ) ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ಪ್ರಧಾನಿ ನರೇಂದ್ರ ಮೋದಿ ಚೀನಾಗೆ ತೆರಳಲಿದ್ದಾರೆ. ಪ್ರಧಾನಿ ಅವರ ಪ್ರವಾಸಕ್ಕೆ ಮುನ್ನ ವಾಂಗ್ ಯಿ ಭಾರತಕ್ಕೆ ಭೇಟಿ ನೀಡಿರುವುದು ಮಹತ್ವ ಪಡೆದಿದೆ.

## ❖ ಅಲಾಸ್ಕ ಸಭೆ: ಮೋದಿಗೆ ಮಾಹಿತಿ ನೀಡಿದ ಪುಟಿನ್

- ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದೂರವಾಣಿ ಸಂಭಾಷಣೆ ನಡೆಸಿದ್ದಾರೆ.
- ಈ ವೇಳೆ ಉಕ್ರೇನ್-ರಷ್ಯಾ ಯುದ್ಧವನ್ನು ಅಂತ್ಯಗೊಳಿಸುವ ಸಲುವಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ಅಲಾಸ್ಕದಲ್ಲಿ ನಡೆಸಿದ ಸಭೆಯ ಮಾಹಿತಿಯನ್ನೂ ಮೋದಿ ಅವರಿಗೆ ನೀಡಿದ್ದಾರೆ.
- ಇದಕ್ಕೆ ಸಂಬಂಧಿಸಿದಂತೆ ಪ್ರಧಾನಿ ಮೋದಿ ಅವರು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ. 'ದೂರವಾಣಿ ಕರೆ ಮೂಲಕ ಸಂಭಾಷಣೆ ನಡೆಸಿ, ಅಲಾಸ್ಕದಲ್ಲಿ ನಡೆದ ಸಭೆ ಕುರಿತಂತೆ ಮಾಹಿತಿ ಹಂಚಿಕೊಂಡಿರುವ ಗೆಳೆಯ ಪುಟಿನ್ ಅವರಿಗೆ ಧನ್ಯವಾದ' ಎಂದಿದ್ದಾರೆ.
- ಅಲ್ಲದೇ, 'ಉಕ್ರೇನ್ ಸಂಘರ್ಷವನ್ನು ಶಾಂತಿಯುತವಾಗಿ ಬಗೆಹರಿಸಿಕೊಳ್ಳುವಂತೆ ಭಾರತ ಹಿಂದಿನಿಂದಲೂ ಹೇಳುತ್ತಲೇ ಇದೆ. ಈ ನಿಟ್ಟಿನಲ್ಲಿ ಕೈಗೊಳ್ಳುವ ಕ್ರಮಗಳಿಗೂ ನಮ್ಮ ಬೆಂಬಲ ಇರಲಿದೆ' ಎಂದೂ ಮೋದಿ ಹೇಳಿದ್ದಾರೆ.

## ❖ ಭಾರತದ ಪುರುಷರ ತಂಡಕ್ಕೆ ಬೆಳ್ಳಿ

- ಭಾರತದ ಪುರುಷರ ಸೀನಿಯರ್ ತಂಡವು ಇಲ್ಲಿ ಸೋಮವಾರ ಆರಂಭವಾದ ಏಷ್ಯನ್ ಶೂಟಿಂಗ್ ಚಾಂಪಿಯನ್‌ಷಿಪ್‌ನ (ರೈಫಲ್/ಪಿಸ್ತೂಲ್/ಶಾಟ್‌ಗನ್) 10 ಮೀಟರ್ ಏರ್ ಪಿಸ್ತೂಲ್ ಸ್ಪರ್ಧೆಯಲ್ಲಿ ಬೆಳ್ಳಿ ಪದಕ ಗೆದ್ದುಕೊಂಡಿತು. ಆದರೆ, ಅನ್ಮೋಲ್ ಜೈನ್ ಅವರು ವೈಯಕ್ತಿಕ ಸ್ಪರ್ಧೆಯಲ್ಲಿ ನಿರಾಸೆ ಮೂಡಿಸಿದರು.
- ಅನ್ಮೋಲ್ (580), ಆದಿತ್ಯ ಮಲ್ರಾ (579) ಮತ್ತು ಏಷ್ಯನ್ ಗೇಮ್ಸ್ ಚಿನ್ನದ ಪದಕ ವಿಜೇತ ಸೌರಭ್ ಚೌಧರಿ (576) ಅವರನ್ನು ಒಳಗೊಂಡ ಪುರುಷರ ತಂಡವು ಒಟ್ಟು 1,735 ಅಂಕಗಳನ್ನು ಗಳಿಸಿತು. ಚೀನಾ ತಂಡವು 1,744 ಅಂಕಗಳೊಂದಿಗೆ ಚಿನ್ನ ಗೆದ್ದಿತು. ಇರಾನ್ (1733) ಕಂಚಿನ ಪದಕ ಜಯಿಸಿತು.

## ❖ ಎಡಗೈಗೂ 6 ಬಲಗೈಗೂ 6

**ಸಂದರ್ಭ:**

ಪರಿಶಿಷ್ಟ ಜಾತಿಯೊಳಗೆ ಒಳಮೀಸಲಾತಿ ಕಲ್ಪಿಸಬೇಕು ಎಂಬ ಬಹುವರ್ಷಗಳ ಆಗ್ರಹಗಳಿಗೆ ಮನ್ನಣೆ ನೀಡಿರುವ ರಾಜ್ಯ ಸರ್ಕಾರ, **ನಿವೃತ್ತ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನದಾಸ್ ಆಯೋಗ ಸಲ್ಲಿಸಿರುವ ವರದಿ**ಯಲ್ಲಿರುವ ಜಾತಿವಾರು ವರ್ಗೀಕರಣವನ್ನು ತುಸು ಪರಿಷ್ಕರಿಸಿ ಜಾರಿ ಮಾಡುವ ಮಹತ್ವದ ತೀರ್ಮಾನ ಕೈಗೊಂಡಿದೆ.

- 101 ಪರಿಶಿಷ್ಟ ಜಾತಿಗಳನ್ನು ಮೂರು ಗುಂಪುಗಳಾಗಿ ಅಂದರೆ ಎಡಗೈ, ಬಲಗೈ  ಮತ್ತು ಸ್ಪೃಶ್ಯ ಎಂದು ವರ್ಗೀಕರಿಸಲು ಸಚಿವ ಸಂಪುಟದಲ್ಲಿ ನಿರ್ಣಯ ತೆಗೆದುಕೊಳ್ಳಲಾಗಿದೆ.
- ಪರಿಶಿಷ್ಟ ಜಾತಿಯವರಿಗೆ ಶೇ 17ರಷ್ಟಿರುವ ಮೀಸಲಾತಿಯನ್ನು ಎಡಗೈ, ಬಲಗೈ ಸಂಬಂಧಿತ ಜಾತಿಗಳ ಗುಂಪಿಗೆ ತಲಾ ಶೇ 6, ಕೊರಚ, ಕೊರಮ, ಭೋವಿ, ಲಂಬಾಣಿ ಜಾತಿಗಳನ್ನು ಒಳಗೊಂಡ ಸ್ಪೃಶ್ಯ' ಗುಂಪುಗಳಿಗೆ ಶೇ 5 ಮೀಸಲಾತಿ ಹಂಚಿಕೆ ಮಾಡಲು ತೀರ್ಮಾನಿಸಲಾಗಿದೆ.
- ಪರಿಶಿಷ್ಟ ಜಾತಿಯಲ್ಲಿ 101 ಮೂಲ ಜಾತಿಗಳನ್ನು ಆಯೋಗವು ಐದು ಗುಂಪುಗಳಾಗಿ ವರ್ಗೀಕರಿಸಿ, ಲಭ್ಯವಿರುವ ಶೇ 17 ಮೀಸಲಾತಿಯನ್ನು ಪ್ರವರ್ಗ 'ಎ' ಗೆ ಶೇ 1 (ಒಟ್ಟು 59 ಜಾತಿಗಳು), ಪ್ರವರ್ಗ 'ಬಿ' ಗೆ ಶೇ 6 (18 ಜಾತಿಗಳು), ಪ್ರವರ್ಗ 'ಸಿ' ಗೆ ಶೇ 5 (17 ಜಾತಿಗಳು), ಪ್ರವರ್ಗ 'ಡಿ' ಗೆ ಶೇ 4 (4 ಜಾತಿಗಳು), ಪ್ರವರ್ಗ 'ಇ' ಗೆ ಶೇ 1ರಂತೆ (3 ಜಾತಿಗಳು) ಹಂಚಿಕೆ ಮಾಡಿತ್ತು.
- ಆಯೋಗದ ವರದಿಗೆ ಸಂಬಂಧಿಸಿದಂತೆ ಸಮಾಜ ಕಲ್ಯಾಣ ಇಲಾಖೆ ಸಿದ್ಧಪಡಿಸಿದ್ದ ಟಿಪ್ಪಣಿಯನ್ನು ಇಲಾಖೆಯ ಪ್ರಧಾನ ಕಾರ್ಯದರ್ಶಿ ಸಚಿವ ಸಂಪುಟ ಸಭೆಯಲ್ಲಿ ವಿವರಿಸಿದರು ಎಂದು ಮೂಲಗಳು ತಿಳಿಸಿವೆ.

**ನಾಗಮೋಹನದಾಸ್ ಆಯೋಗದ ಶಿಫಾರಸು**

**ಪ್ರವರ್ಗ; ಜಾತಿಗಳ ಸಂಖ್ಯೆ; ಒಟ್ಟು ಜನಸಂಖ್ಯೆ; ಶೇಕಡಾವಾರು ಜನಸಂಖ್ಯೆ; ಶಿಫಾರಸು ಮಾಡಿರುವ ಮೀಸಲಾತಿ (ಶೇ)**

- **ಪ್ರವರ್ಗ 'ಎ' ;59;5,22,099;4.97; 1**
- **ಪ್ರವರ್ಗ 'ಬಿ' ;18;36,69,246;34.91; 6**
- **ಪ್ರವರ್ಗ 'ಸಿ' ;17;30,08,633;28.63; 5**
- **ಪ್ರವರ್ಗ 'ಡಿ' ;04;28,34,939;26.97; 4**
- **ಪ್ರವರ್ಗ 'ಇ' ;03;,74,954;4.52; 1**

**ಒಟ್ಟು;101;1,05,09,871;100; 17**

- 101 ಪರಿಶಿಷ್ಟ ಜಾತಿಗಳನ್ನು ಐದು ಗುಂಪುಗಳಾಗಿ ವಿಂಗಡಿಸಿ ಮೀಸಲಾತಿ ಹಂಚಿಕೆ ಮಾಡಿರುವ ಜೊತೆಗೆ ಇತರ ಐದು ಶಿಫಾರಸು ಗಳನ್ನೂ ಮಾಡಿತ್ತು. 2024ರ ಅಕ್ಟೋಬರ್ 28ರಿಂದ ನೇಮಕಾತಿ ಆರಂಭವಾಗುವರೆಗೆ ವಯೋಮಿತಿ ಮೀರಿದವರಿಗೆ ವಯೋಮಿತಿ ಸಡಿಲಿಸಿ ಅವಕಾಶ ನೀಡಬೇಕು.
- ಒಂದು ಪ್ರವರ್ಗದಲ್ಲಿ ಭರ್ತಿಯಾಗದೆ ಉಳಿದ ಹುದ್ದೆಗಳನ್ನು ಕ್ಯಾರಿ ಫಾರ್ವರ್ಡ್ ನಿಯಮದಂತೆ ಭರ್ತಿ ಮಾಡಬೇಕು. ನಂತರವೂ ಸೂಕ್ತ ಅಭ್ಯರ್ಥಿ ಲಭ್ಯ ಇಲ್ಲದೇ ಇದ್ದರೆ, ಪರಿಶಿಷ್ಟ ಜಾತಿಯ ಮತ್ತೊಂದು ಪ್ರವರ್ಗಕ್ಕೆ ವರ್ಗಾವಣೆ ಮಾಡಬೇಕು. ಕೆಲವು ಜಾತಿಗಳ ಹೆಸರು ಅಪಹಾಸ್ಯಕ್ಕೆ ಈಡಾಗುತ್ತಿದೆ ಎಂಬ ಕಾರಣಕ್ಕೆ ಬದಲಿಸಿಕೊಳ್ಳಲು ಅಪೇಕ್ಷಿಸಿದರೆ ಅವಕಾಶ ಮಾಡಿಕೊಡ ಬೇಕು, ಮೂಲ ಜಾತಿ ಗೊತ್ತಿದ್ದರೂ ಜಾತಿ ಪಟ್ಟಿಯಲ್ಲಿ ಹೆಸರು ಇಲ್ಲದ ಕಾರಣಕ್ಕೆ ಆದಿ ಕರ್ನಾಟಕ, ಆದಿ ದ್ರಾವಿಡ, ಆದಿ ಆಂಧ್ರ ಎಂದು ಜಾತಿ ಪ್ರಮಾಣಪತ್ರ ಪಡೆದುಕೊಂಡವರಿಗೆ, ಅವರ ಜಾತಿಯ ಬಗ್ಗೆ ಅಧ್ಯಯನ ನಡೆಸಿ ಜಾತಿ ಪಟ್ಟಿಯಲ್ಲಿ ಸೇರಿಸಲು ಕ್ರಮ ತೆಗೆದು ಕೊಳ್ಳಬೇಕು, ಆದಿ ಕರ್ನಾಟಕ, ಆದಿ ದ್ರಾವಿಡ, ಆದಿ ಆಂಧ್ರ ಎಂಬ ಹೆಸರಿನ

Dr. Rajkumar IAS KAS Academy

ಜೊತೆಗೆ ತಮ್ಮ ಮೂಲಜಾತಿಯ ಹೆಸರು ತಿಳಿಸಿದ್ದಾರೆ. ಅವರಿಗೆ ಮೂಲಜಾತಿಯ ಪ್ರಮಾಣಪತ್ರ ನೀಡಲು ಕ್ರಮ ಕೈಗೊಳ್ಳ ಬೇಕೆಂದೂ ಸರ್ಕಾರಕ್ಕೆ ತನ್ನ ವರದಿಯಲ್ಲಿ ಆಯೋಗ ಶಿಫಾರಸು ಮಾಡಿತ್ತು.

## ❖ ಬಳಸದ ಭೂಮಿಗೂ ಬಾಡಿಗೆ: ಆಕ್ಷೇಪ

**ಸಂದರ್ಭ:**

ತುಮಕೂರು ಜಿಲ್ಲೆಯ ಪಾವಗಡದ ಸೋಲಾರ್ ಪಾರ್ಕ್‌ನಲ್ಲಿ 1,897 ಎಕರೆ 'ನಿರುಪಯುಕ್ತ ಭೂಮಿ' ಗೂ ಕರ್ನಾಟಕ ಸೌರಶಕ್ತಿ ಅಭಿವೃದ್ಧಿ ನಿಗಮವು (ಕೆಎಸ್‌ಪಿಡಿಸಿಎಲ್) 2015-16ರಿಂದ ಬಾಡಿಗೆ ಪಾವತಿಸುತ್ತಿದೆ ಎಂದು ಮಹಾಲೇಖಪಾಲರ (ಸಿಎಜಿ) ವರದಿ ಆಕ್ಷೇಪ ವ್ಯಕ್ತಪಡಿಸಿದೆ.

- ಸೋಲಾರ್ ಪಾರ್ಕ್‌ಗಳ ಕಾರ್ಯನಿರ್ವಹಣೆ ಕುರಿತ ಸಿಎಜಿ ವರದಿಯನ್ನು ಲೋಕಸಭೆಯಲ್ಲಿ ಮಂಡಿಸಲಾಗಿದೆ. ಅನುಪಯುಕ್ತ ಭೂಮಿಗೆ ಬಾಡಿಗೆ ನೀಡಿದ್ದರಿಂದ ಸರ್ಕಾರದ ಬೊಕ್ಕಸಕ್ಕೆ ಆಗಿರುವ ಭಾರಿ ನಷ್ಟದ ಕುರಿತು ವರದಿಯಲ್ಲಿ ವಿವರಿಸಲಾಗಿದೆ.
- 1,897 ಎಕರೆ ಭೂಮಿಯಲ್ಲಿ 1,531 ಎಕರೆಯನ್ನು ಯೋಜನೆ ಅಭಿವೃದ್ಧಿಪಡಿಸುವವರಿಗೆ ಹಂಚಿಕೆಯನ್ನೇ ಮಾಡಿಲ್ಲ. ಈ ಭೂಮಿ ಸೌರಶಕ್ತಿ ಯೋಜನೆಗಳಿಗೆ ಸೂಕ್ತವಾಗಿಲ್ಲ ಎಂಬುದು ಕಾರಣ. ಆದರೂ, ಈ ಜಾಗಕ್ಕೆ ನಿಗಮವು ಪ್ರತಿ ವರ್ಷ ಬಾಡಿಗೆ ಪಾವತಿಸುತ್ತಿದೆ. ಅಷ್ಟೇ ಅಲ್ಲದೇ, ಗುತ್ತಿಗೆ ಅವಧಿಯನ್ನು 28 ವರ್ಷಗಳಿಗೆ ವಿಸ್ತರಿಸಲಾಗಿದೆ. ಪ್ರತಿ ಎರಡು ವರ್ಷಕ್ಕೊಮ್ಮೆ ಈ ಭೂಮಿಗೆ ಬಾಡಿಗೆ ಶೇ 5ರಷ್ಟು ಹೆಚ್ಚಲಿದೆ. ಯೋಜನೆಗೆ ಅಗತ್ಯವಿರುವ ಏಕರೂಪದ ಭೂಮಿ ಪಡೆಯುವುದು ಸವಾಲಿನ ಕೆಲಸ. ಆದರೆ, ವಿಸ್ತೃತ ಯೋಜನಾ ವರದಿ ತಯಾರಿಗೆ ಮುನ್ನ ವಿವರವಾದ ಸಮೀಕ್ಷೆ ನಡೆಸಿದ್ದರೆ ಈ ಲೋಪ ತಪ್ಪಿಸಬಹುದು ಎಂದು ಸಿಎಜಿ ವರದಿಯಲ್ಲಿ ಅಭಿಪ್ರಾಯ ಪಡಲಾಗಿದೆ.
- ಅನಗತ್ಯ ಭೂಸ್ವಾಧೀನ ವೆಚ್ಚವು ಒಟ್ಟು ಯೋಜನಾ ವೆಚ್ಚ ಹೆಚ್ಚಳಕ್ಕೆ ಕಾರಣವಾಯಿತು. ಕೊನೆಗೆ, ಇದರ ಹೊರೆ ಗ್ರಾಹಕರಿಗೆ ವರ್ಗಾವಣೆಯಾಯಿತು. ಸ್ವಲ್ಪ ಜಾಣ್ಮೆ ವಹಿಸಿದ್ದರೆ ನಿರುಪಯುಕ್ತ ಭೂಮಿಯ ಭೂಸ್ವಾಧೀನ ತಪ್ಪಿಸಬಹುದಿತ್ತು ಎಂದೂ ವರದಿಯಲ್ಲಿ ಹೇಳಲಾಗಿದೆ.
- ಸೌರ ವಿದ್ಯುತ್ ಘಟಕಗಳನ್ನು ಸ್ಥಾಪಿಸಲು ಯೋಜನೆ ಅಭಿವೃದ್ಧಿ ಪಡಿಸುವವರಿಗೆ ನಿಗಮವು 10,811 ಎಕರೆಯನ್ನು ಉಪಗುತ್ತಿಗೆ ನೀಡಿದೆ. 2015-16ರಿಂದ ಯೋಜನೆಯನ್ನು ಅಭಿವೃದ್ಧಿಪಡಿಸುವವರು ನಿಗಮಕ್ಕೆ ಭೂಗುತ್ತಿಗೆ ಶುಲ್ಕ ಪಾವತಿಸುತ್ತಿದ್ದಾರೆ.
- ರಾಜ್ಯದ ಸಾಧನೆಗೆ ಮೆಚ್ಚುಗೆ: ಸೌರ ವಿದ್ಯುತ್ ಉತ್ಪಾದನೆಯಲ್ಲಿ ಇತರ ರಾಜ್ಯಗಳಿಗೆ ಹೋಲಿಸಿದರೆ ರಾಜ್ಯದ ಸಾಧನೆ ಉತ್ತಮವಾಗಿದೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ.
- **ರಾಜ್ಯದಲ್ಲಿ 2,500 ಮೆಗಾವಾಟ್ ಸೌರವಿದ್ಯುತ್ ಉತ್ಪಾದನೆಯ ಗುರಿ ನೀಡಲಾಗಿತ್ತು. ರಾಜ್ಯದಲ್ಲಿ 2,050 ಮೆಗಾವಾಟ್ ಸೌರವಿದ್ಯುತ್ ಉತ್ಪಾದನೆ ಯಾಗುತ್ತಿದೆ. ಈ ಮೂಲಕ ಶೇ 82 ಸಾಧನೆ ಮಾಡಲಾಗಿದೆ. ಗುಜರಾತ್, ರಾಜಸ್ಥಾನ, ಮಧ್ಯಪ್ರದೇಶ, ಉತ್ತರ ಪ್ರದೇಶ, ಹಿಮಾಚಲ ಪ್ರದೇಶ ರಾಜ್ಯಗಳ ಸಾಧನೆ ಶೇ 8ರಿಂದ ಶೇ 34ರ ನಡುವೆ ಇದೆ ಎಂದು ವರದಿ ತಿಳಿಸಿದೆ.**

ಕೆಆರ್‌ಇಡಿಎಲ್‌ಗೆ 293 ಎಕರೆ ಉಪಗುತ್ತಿಗೆ: ಹಿತಾಸಕ್ತಿ ಸಂಘರ್ಷ

- 2,000 ಮೆಗಾವಾಟ್ ಸಾಮರ್ಥ್ಯದ ಈ ಘಟಕವು 2019ರಲ್ಲಿ ವಾಣಿಜ್ಯ ಕಾರ್ಯಾಚರಣೆ ಆರಂಭಿಸಿತು. ಆದರೆ, ಈ ಯೋಜನೆಯಲ್ಲಿ ಕೆಲವೊಂದು ನ್ಯೂನತೆ ಇರುವುದನ್ನು ಲೆಕ್ಕಪರಿಶೋಧನಾ ವರದಿ ತಿಳಿಸಿದೆ.
- ಈ ಯೋಜನೆಯನ್ನು ಕರ್ನಾಟಕ ಸೌರಶಕ್ತಿ ಅಭಿವೃದ್ಧಿ ನಿಗಮದ ಜತೆಗೂಡಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮವು (ಕೆಆರ್‌ಇಡಿಎಲ್) ನಡೆಸುತ್ತಿದೆ. ಈ ಘಟಕದ ಸಾಮರ್ಥ್ಯವನ್ನು 2,000 ಮೆಗಾವಾಟ್‌ನಿಂದ 2,060 ಮೆಗಾವಾಟ್‌ಗೆ ಹೆಚ್ಚಿಸಲು ಅನುಮೋದನೆ ನೀಡಬೇಕು ಎಂದು ಕೇಂದ್ರ ಸರ್ಕಾರವನ್ನು ನಿಗಮವು ಕೋರಿತ್ತು. ಇಲ್ಲಿ 60 ಮೆಗಾವಾಟ್ ಸಾಮರ್ಥ್ಯದ ಘಟಕವನ್ನು ಸ್ಥಾಪಿಸಲು ಕೆಆರ್‌ಇಡಿಎಲ್ ಬಯಸಿತ್ತು. ಈ ಯೋಜನೆಯ ಜಂಟಿ ಪಾಲುದಾರ ಆಗಿರುವ ಕೆಆರ್

ಇಡಿಎಲ್ ಸೌರ ಯೋಜನೆ ಸ್ಥಾಪಿಸುವಂತಿಲ್ಲ ಎಂಬ ಕಾರಣ ನೀಡಿ ಕೇಂದ್ರ ಸರ್ಕಾರವು 2019ರ ಮಾರ್ಚ್‌ನಲ್ಲಿ ಈ ಪ್ರಸ್ತಾವ ತಿರಸ್ಕರಿಸಿತ್ತು. ಪಾರದರ್ಶಕ ಬಿಡ್ಡಿಂಗ್ ಮೂಲಕವೇ ಪ್ರಕ್ರಿಯೆ ನಡೆಸಬೇಕು ಎಂದು ಸೂಚಿಸಿತ್ತು.

- ಆದಾಗ್ಯೂ, ನಿಗಮವು ಕೆಆರ್‌ಇಡಿಎಲ್‌ಗೆ ನಿರುಪಯುಕ್ತವಾದ 293.82 ಎಕರೆಯನ್ನು 2019ರ ಅಕ್ಟೋಬರ್‌ನಲ್ಲಿ ಉಪಗುತ್ತಿಗೆ ನೀಡಿತ್ತು. 50 ಮೆಗಾವಾಟ್‌ನ ಸೌರ ಯೋಜನೆ ಸ್ಥಾಪಿಸಲು ಅನುಮತಿ ನೀಡಿತ್ತು. ಇದು ಹಿತಾಸಕ್ತಿ ಸಂಘರ್ಷಕ್ಕೆ ಸಾಕ್ಷಿ ಎಂದು ಸಿಎಜಿ ವರದಿ ಆಕ್ಷೇಪ ವ್ಯಕ್ತಪಡಿಸಿದೆ.
- ಡಿಪಿಆರ್ ಪ್ರಕಾರ, ನಿಗಮವು ಯೋಜನೆ ಅಭಿವೃದ್ಧಿಪಡಿಸುವವರಿಂದ ಪ್ರತಿ ಮೆಗಾವಾಟ್‌ಗೆ ₹27.27 ಲಕ್ಷ ಶುಲ್ಕ ಸಂಗ್ರಹಿಸಬೇಕಿತ್ತು. ಆದಾಗ್ಯೂ, ನಿಗಮವು 600 ಮೆಗಾವಾಟ್‌ಗೆ ₹27.27 ಲಕ್ಷ (ಪ್ರತಿ ಮೆಗಾ ವಾಟ್‌ಗೆ) ಹಾಗೂ 1,400 ಮೆಗಾವಾಟ್‌ಗೆ ₹29.025 ಲಕ್ಷ ಶುಲ್ಕ ಸಂಗ್ರಹಿಸಿತ್ತು. ಈ ಮೂಲಕ, ನಿಗಮವು ಹೆಚ್ಚುವರಿಯಾಗಿ ₹24.57 ಕೋಟಿ ಸಂಗ್ರಹ ಮಾಡಿತ್ತು. ವಿಭಿನ್ನ ಶುಲ್ಕ ವಿಧಿಸಲು ನಿಗಮವು ಅನುಮೋದನೆ ಪಡೆದಿರಲಿಲ್ಲ. ಈ ಮೂಲಕ, ಕೇಂದ್ರದ ಮಾರ್ಗಸೂಚಿ ಉಲ್ಲಂಘಿಸಿದೆ ಎಂದು ವರದಿ ಹೇಳಿದೆ.

## ❖ ಪ್ರಧಾನಿ, ಸಿಎಂ ಪದಚ್ಯುತಿಗೆ ಅವಕಾಶ: ಸಂವಿಧಾನ ತಿದ್ದುಪಡಿಯ 3 ಮಸೂದೆಗಳ ಮಂಡನೆ ಇಂದು

**ಸಂದರ್ಭ:**

ಸತತವಾಗಿ 30 ದಿನ ಬಂಧನ ದಲ್ಲಿರುವ ಅಥವಾ ಕನಿಷ್ಠ ಐದು ವರ್ಷಗಳ ಜೈಲು ಶಿಕ್ಷೆಗೊಳಗಾಗುವ ಪ್ರಧಾನಿ, ಮುಖ್ಯಮಂತ್ರಿ, ಕೇಂದ್ರ ಹಾಗೂ ರಾಜ್ಯಗಳ ಸಚಿವರನ್ನು ಹುದ್ದೆಯಿಂದ ಪದಚ್ಯುತಗೊಳಿಸಲು ಅವಕಾಶ ಕಲ್ಪಿಸುವ ಮೂರು ಸಂವಿಧಾನ ತಿದ್ದುಪಡಿ ಮಸೂದೆಗಳನ್ನು ಲೋಕಸಭೆಯಲ್ಲಿ ಮಂಡಿಸಲಾಗುತ್ತದೆ.

- ಮಸೂದೆಯ ಪ್ರಕಾರ, 30 ದಿನ ನಿರಂತರ ಬಂಧನದಲ್ಲಿ ಇದ್ದವರನ್ನು 31ನೇ ದಿನ ಪದಚ್ಯುತ ಗೊಳಿಸಲು ಅವಕಾಶ ಕಲ್ಪಿಸಲಾಗುತ್ತದೆ. ಆದರೆ, ಬಂಧನದಿಂದ ಬಿಡುಗಡೆ ಆದವರನ್ನು ಪ್ರಧಾನಮಂತ್ರಿ, ಮುಖ್ಯಮಂತ್ರಿ ಅಥವಾ ಸಚಿವರನ್ನಾಗಿ ನೇಮಿಸಲು ನಿರ್ಬಂಧ ಇರುವುದಿಲ್ಲ.
- **ಸಂವಿಧಾನ (130ನೇ ತಿದ್ದುಪಡಿ) ಮಸೂದೆ 2025, ಕೇಂದ್ರಾಡಳಿತ ಸರ್ಕಾರ (ತಿದ್ದುಪಡಿ) ಮಸೂದೆ ಮತ್ತು ಜಮ್ಮು ಮತ್ತು ಕಾಶ್ಮೀರ ಪುನರ್‌ರಚನೆ (ತಿದ್ದುಪಡಿ) ಮಸೂದೆ- 2025** ಅನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಲೋಕಸಭೆಯಲ್ಲಿ ಮಂಡಿಸಲಿದ್ದಾರೆ. ಈ ಮೂರೂ ಮಸೂದೆಗಳನ್ನು ಹೆಚ್ಚಿನ ಪರಿಶೀಲನೆಗಾಗಿ ಸಂಸತ್ತಿನ ಜಂಟಿ ಸಮಿತಿಗೆ ಒಪ್ಪಿಸುವ ಗೊತ್ತುವಳಿಯನ್ನೂ ಶಾ ಅವರು ಮಂಡಿಸಲಿದ್ದಾರೆ.
- ಅಪರಾಧ ಚಟುವಟಿಕೆಯಲ್ಲಿ ಭಾಗಿಯಾದ ಆರೋಪದ **ಮೇಲೆ ಪ್ರಧಾನಿ, ಮುಖ್ಯಮಂತ್ರಿ, ಕೇಂದ್ರ ಅಥವಾ ರಾಜ್ಯಗಳ ಸಚಿವರನ್ನು** ಬಂಧಿಸಿ, ನ್ಯಾಯಾಂಗ ಬಂಧನದಲ್ಲಿ ಇರಿಸಿದಾಗ ಅಂಥವರನ್ನು ಹುದ್ದೆಗಳಿಂದ ಪದಚ್ಯುತ ಗೊಳಿಸುವ ಪ್ರಕ್ರಿಯೆಗೆ ಕಾನೂನು ಚೌಕಟ್ಟು ವಿಧಿಸಲು ಈ ಮಸೂದೆಗಳನ್ನು ರೂಪಿಸಲಾಗಿದೆ ಎಂದು ಕಾರಣಗಳು ಮತ್ತು ಉದ್ದೇಶಗಳಲ್ಲಿ ತಿಳಿಸಲಾಗಿದೆ.

**ರಾಜ್ಯಪಾಲರಿಗೆ ಅಧಿಕಾರ**

- **ರಾಜ್ಯಗಳಲ್ಲಿ ರಾಜ್ಯಪಾಲರು ಪದಚ್ಯುತಗೊಳಿಸುವ ಅಧಿಕಾರವನ್ನು ಹೊಂದಿರುತ್ತಾರೆ. ದೆಹಲಿ ಮತ್ತು ಇತರ ಕೇಂದ್ರಾಡಳಿತ ಪ್ರದೇಶಗಳಿಗೆ ಸಂಬಂಧಿಸಿದಂತೆ ರಾಷ್ಟ್ರಪತಿಯವರು ಹಾಗೂ ಜಮ್ಮು ಮತ್ತು ಕಾಶ್ಮೀರಕ್ಕೆ ಸಂಬಂಧಿಸಿದಂತೆ ಅಲ್ಲಿನ ಲೆಫ್ಟಿನೆಂಟ್ ಗವರ್ನರ್ ಅವರು ಸಕ್ಷಮ ಪ್ರಾಧಿಕಾರಿಗಳಾಗಿರುತ್ತಾರೆ** ಎಂಬ ಉಲ್ಲೇಖ ಮಸೂದೆಯಲ್ಲಿದೆ.
- ದೆಹಲಿ ಮುಖ್ಯಮಂತ್ರಿಯಾಗಿದ್ದ ಅರವಿಂದ ಕೇಜ್ರಿವಾಲ್, ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೇನ್ ಮತ್ತು ತಮಿಳುನಾಡಿನ ಸಚಿವ ವಿ. ಸೆಂಥಿಲ್ ಬಾಲಾಜಿ ಅವರನ್ನು ಜಾರಿ ನಿರ್ದೇಶನಾಲಯ

Dr. Rajkumar IAS Academy

ಬಂಧಿಸಿತ್ತು. ನ್ಯಾಯಾಂಗ ಬಂಧನದಲ್ಲಿದ್ದರೂ ಅವರು ಹುದ್ದೆಯಲ್ಲಿ ಮುಂದುವರಿದಿದ್ದರು. ಅಂತಹ ಪ್ರಕರಣಗಳಲ್ಲಿ ಪದಚ್ಯುತಗೊಳಿಸುವುದಕ್ಕಾಗಿಯೇ ಈ ತಿದ್ದುಪಡಿ ಪ್ರಸ್ತಾವಗಳನ್ನು ಮಂಡಿಸಲಾಗುತ್ತಿದೆ.

- ಇದಕ್ಕಾಗಿ **ಸಂವಿಧಾನದ 75ನೇ ವಿಧಿಗೆ ಸೆಕ್ಷನ್ 5(ಎ) ಅನ್ನು ಸೇರ್ಪಡೆ ಮಾಡಲಾಗುತ್ತಿದೆ. ಅದರ ಪ್ರಕಾರ, ಹಾಲಿ ಜಾರಿಯಲ್ಲಿರುವ ಯಾವುದೇ ಕಾನೂನುಗಳ ಅಡಿಯಲ್ಲಿ ವ್ಯಾಖ್ಯಾನಿಸಲಾದ ಅಪರಾಧಕ್ಕಾಗಿ ಸತತ 30 ದಿನಗಳಿಂದ ಬಂಧನ ದಲ್ಲಿರುವ ಅಥವಾ ಐದು ವರ್ಷ ಅಥವಾ ಅದಕ್ಕಿಂತ ಹೆಚ್ಚಿನ ಜೈಲು ಶಿಕ್ಷೆಗೆ ಒಳಗಾದ ಸಚಿವರನ್ನು ಸಂಪುಟದಿಂದ ಕೈಬಿಡುವಂತೆ ಪ್ರಧಾನಿಯು 31ನೇ ದಿನದಂದು ರಾಷ್ಟ್ರಪತಿಯವರಿಗೆ ಶಿಫಾರಸು ಮಾಡಬೇಕು. ಪ್ರಧಾನಿಯು, ಶಿಫಾರಸು ಮಾಡದಿದ್ದರೂ ಅಂಥ ಸಚಿವರು 31ನೇ ದಿನದಂದು ಅಧಿಕಾರ ಕಳೆದುಕೊಳ್ಳುತ್ತಾರೆ.**
- ಅಂಥದ್ದೇ ಪ್ರಕರಣಗಳಲ್ಲಿ ಭಾಗಿಯಾದ ಆರೋಪದ ಮೇಲೆ ಪ್ರಧಾನಿಯು 30 ದಿನಗಳಿಂದ ಬಂಧನದಲ್ಲಿದ್ದರೆ 31ನೇ ದಿನದಂದು ಅವರು ರಾಜೀನಾಮೆ ಸಲ್ಲಿಸಬೇಕಾಗುತ್ತದೆ. ಒಂದು ವೇಳೆ ಅವರು ರಾಜೀನಾಮೆ ನೀಡದೇ ಇದ್ದಲ್ಲಿ, ಸ್ವಯಂಚಾಲಿತವಾಗಿ ಪದಚ್ಯುತರಾಗುತ್ತಾರೆ ಎಂಬ ಅಂಶ ಮಸೂದೆಯಲ್ಲಿದೆ. ಇದು ರಾಜ್ಯಗಳ ಮುಖ್ಯಮಂತ್ರಿ ಮತ್ತು ಸಚಿವರಿಗೂ ಅನ್ವಯವಾಗುತ್ತದೆ.

## ❖ 'ಐದು ವರ್ಷ ಹಳ್ಳಿಗಳ ಸೇರ್ಪಡೆ ಇಲ್ಲ' : ಗ್ರೇಟರ್ ಬೆಂಗಳೂರು ಆಡಳಿತ ತಿದ್ದುಪಡಿ ಮಸೂದೆಗೆ ಅಂಗೀಕಾರ

**ಸಂದರ್ಭ :**

'ಗ್ರೇಟರ್ ಬೆಂಗಳೂರು ವ್ಯಾಪ್ತಿಗೆ ಐದು ವರ್ಷದವರೆಗೆ ಹೊಸದಾಗಿ ಯಾವುದೇ ಹಳ್ಳಿಗಳನ್ನು ಸೇರ್ಪಡೆ ಮಾಡುವುದಿಲ್ಲ. ಚುನಾವಣೆ ನಡೆದು ಮೊದಲ ಚುನಾಯಿತ ಸದಸ್ಯರ ಅವಧಿ ಮುಗಿದ ನಂತರವೇ ಈ ಕುರಿತು ತೀರ್ಮಾನಿಸಲಾಗುತ್ತದೆ.

- ಈ ಮಸೂದೆಯಲ್ಲಿ **ಗ್ರೇಟರ್ ಬೆಂಗಳೂರು ಪ್ರಾಧಿಕಾರವು ಸಂವಿಧಾನದ 74ನೇ ತಿದ್ದುಪಡಿ ಅಡಿಯಲ್ಲಿ ಬರುವ ಪಾಲಿಕೆಗಳ ವಿಚಾರದಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ** ಎಂಬ ಅಂಶವನ್ನು ಸ್ಪಷ್ಟಪಡಿಸಲಾಗಿದೆ' ಎಂದು ತಿಳಿಸಿದರು.
- ಪಾಲಿಕೆಗಳು ಸ್ವತಂತ್ರವಾಗಿ ಕಾರ್ಯನಿರ್ವಹಿಸಲಿವೆ. ಪಾಲಿಕೆಗಳ ಕಾರ್ಯಚಟುವಟಿಕೆಯಲ್ಲಿ ಜಿಬಿಜಿಎ ಹಸ್ತಕ್ಷೇಪ ಇಲ್ಲ ಎಂಬ ಸ್ಪಷ್ಟನೆ ನೀಡಲು ಈ ತಿದ್ದುಪಡಿ ತರಲಾಗಿದೆ'.
- 'ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರಿಂದ ಆಯ್ಕೆಯಾಗುವ ಮೇಯರ್ ಹಾಗೂ ಪಾಲಿಕೆ ಸದಸ್ಯರಿಗೆ ಸಂಪೂರ್ಣ ಅಧಿಕಾರ ಇರಬೇಕು ಎಂಬುದು ಉದ್ದೇಶ.
- ತೆರಿಗೆ ಸಂಗ್ರಹಕ್ಕೆ ಅಧಿಕಾರ, ಆರ್ಥಿಕ ಸ್ವಾಯತ್ತತೆ, ಚುನಾವಣೆ, ಮೀಸಲಾತಿ ಸೇರಿದಂತೆ ಯಾವುದೇ ವಿಚಾರದಲ್ಲಿ ಪಾಲಿಕೆಗಳ ಅಧಿಕಾರದಲ್ಲಿ ಸರ್ಕಾರ ಹಸ್ತಕ್ಷೇಪ ಮಾಡುವುದಿಲ್ಲ. ಸಂವಿಧಾನದ 74ನೇ ತಿದ್ದುಪಡಿಯನ್ನು ಸಂಪೂರ್ಣವಾಗಿ ರಕ್ಷಣೆ ಮಾಡಲಾಗಿದೆ'.

## ❖ 'ಕಾವೇರಿ' ಯಲ್ಲಿ ನೀರು ನಾಯಿಗಳು

- ಇಲ್ಲಿನ ಕಾವೇರಿ ನದಿಯಲ್ಲಿ ಅಳಿವಿನ ಅಂಚಿನಲ್ಲಿರುವ ನೀರು ನಾಯಿಗಳು ಗೋಚರಿಸಿದವು.
- ಪಟ್ಟಣದ ವೆಲ್ಲೆಸ್ಲಿ ಸೇತುವೆಯ ಪೂರ್ವ ಭಾಗದಲ್ಲಿ ನೀರಿನಲ್ಲಿ ಈಜಾಡುತ್ತಿದ್ದ ನೀರು ನಾಯಿಗಳನ್ನು ಜನ ಕುತೂಹಲದಿಂದ ವೀಕ್ಷಿಸಿದರು.

Dr. Rajkumar IAS Academy

# ಗಾಜಾ ಪಟ್ಟಿ ಮಕ್ಕಳ ಬಾಲ್ಯ ಜರ್ಜರಿತ

ಇಸ್ರೇಲ್–ಹಮಾಸ್ ನಡುವಿನ ಯುದ್ಧದಿಂದ ಗಾಜಾ ಪಟ್ಟಿಯ ಲಕ್ಷಾಂತರ ಮಕ್ಕಳ ಬದುಕು ಜರ್ಜರಿತವಾಗಿದೆ; ಸ್ವಲ್ಪ ಆಹಾರ, ಗುಟುಕು ನೀರಿಗಾಗಿ ಹಾಹಾಕಾರ ನಡೆಯುತ್ತಿದೆ. ಅನೇಕ ಮಕ್ಕಳಿಗೆ ಪೋಷಕರೇ ಉಳಿದಿಲ್ಲ. ಕಣ್ಣ ಮುಂದೆ ಪ್ರೀತಿಪಾತ್ರರ ಸಾವು, ಹಿಂಸಾಚಾರ, ಬಾಂಬ್, ಕ್ಷಿಪಣಿಗಳ ನಿರಂತರ ದಾಳಿ, ಯಾವ ಕ್ಷಣ ಏನಾಗುವುದೋ ಎನ್ನುವ ಭಯ, ಶಿಬಿರದಿಂದ ಶಿಬಿರಕ್ಕೆ ಅಲೆಯುವ ಬದುಕು; ಭೂಮಿಯ ಮೇಲೆ ಮನುಷ್ಯನಿಗೆ ಎದುರಾಗಬಹುದಾದ ಸಕಲ ಸವಾಲುಗಳನ್ನೂ, ಸಂಕಷ್ಟಗಳನ್ನೂ ಬಾಲ್ಯದಲ್ಲೇ ಅನುಭವಿಸುತ್ತಿರುವ, ಯುದ್ಧದ ಆತ್ಯಂತಿಕ ಪರಿಣಾಮಗಳಿಗೆ ಒಳಗಾಗಿರುವ ಗಾಜಾ ಪಟ್ಟಿಯ ಮಕ್ಕಳ ದುರ್ಭರ ಪರಿಸ್ಥಿತಿಯನ್ನು ವಿವರಿಸಲು ಪದಗಳೇ ಲಭ್ಯವಿಲ್ಲ

ಪ್ರಜಾವಾಣಿ ವಾರ್ತೆ

‘ನಿನಗೆ ಕ್ರಯಾನ್‌ಗಳು ಬೇಕೋ, ಬ್ರೆಡ್ ಬೇಕೋ ಎಂದು ಕೇಳಿದರೆ, ನನ್ನ ಆಯ್ಕೆ ಬ್ರೆಡ್’

– ಇದು ಗಾಜಾ ಪಟ್ಟಿಯ 12 ವರ್ಷದ ರಹ್ಮಾ ಅಬು ಅಬೆದ್‌ಳ ಮಾತು. ಆಟ ಎಂದರೆ ಊಟ, ನಿದ್ದೆ ಎಲ್ಲವನ್ನೂ ಮರೆಯುವ ಮಕ್ಕಳ ನಡುವೆ ರಹ್ಮಾಳ ಉತ್ತರ ವಿಚಿತ್ರ ಅನ್ನಿಸಬಹುದು. ಆದರೆ, ರಹ್ಮಾಳ ಮಾತಿನಲ್ಲಿ ಗಾಜಾ ಪಟ್ಟಿಯ ಮಕ್ಕಳ ಭೀಕರ ಚಿತ್ರಣವಿದೆ.

ಇಸ್ರೇಲ್–ಹಮಾಸ್ ಯುದ್ಧದಲ್ಲಿ ದಕ್ಷಿಣ ಗಾಜಾದಲ್ಲಿದ್ದ ರಹ್ಮಾಳ ಮನೆ ನೆಲಕಚ್ಚಿದೆ. ತನ್ನ ಐವರು ಒಡಹುಟ್ಟಿದವರು ಮತ್ತು ಪೋಷಕರೊಂದಿಗೆ ಆಕೆ ಮೀನುಗಾರಿಕಾ ಉಪಕರಣಗಳ ಶೆಡ್‌ನಲ್ಲಿ ವಾಸವಾಗಿದ್ದಾಳೆ. ರಹ್ಮಾಳ ಕುಟುಂಬದಂತೆಯೇ ಅನೇಕ ನಿರಾಶ್ರಿತ ಕುಟುಂಬಗಳೂ ಅಲ್ಲಿ ಆಶ್ರಯ ಪಡೆದಿವೆ. ದಿನಕ್ಕೆ ಒಂದು ಹೊತ್ತು ಮಾತ್ರ ಊಟ ಮಾಡುವ ರಹ್ಮಾ, ದಿನದ ಬಹುಸಮಯವನ್ನು ಹತ್ತಿರದ ಸಮುದ್ರತೀರದಲ್ಲಿ ಕಳೆಯುತ್ತಾಳೆ. ಒಳ್ಳೆಯ ಬಟ್ಟೆ, ಒಳ್ಳೆಯ ಊಟ ಎಂದರೆ ಹೇಗಿರುತ್ತವೆ ಎನ್ನುವುದರ ನೆನಪೂ ಆಕೆಗೆ ಉಳಿದಿಲ್ಲ. ಮಾಂಸ ತಿನ್ನುವುದು ಅವಳಿಗೀಗ ಒಂದು ಕನಸು.

ಇದು ರಹ್ಮಾ ಒಬ್ಬಳ ಸ್ಥಿತಿ ಅಲ್ಲ; ಗಾಜಾ ಪಟ್ಟಿಯಲ್ಲಿರುವ 11 ಲಕ್ಷ ಮಕ್ಕಳ ದಾರುಣ ಪರಿಸ್ಥಿತಿ. 22 ತಿಂಗಳುಗಳಿಂದ ನಡೆಯುತ್ತಿರುವ ಸಂಘರ್ಷದಿಂದ ಗಾಜಾದಲ್ಲಿ ಬಾಲ್ಯ ಎನ್ನುವ ಪದಕ್ಕೆ ಅರ್ಥವೇ ಇಲ್ಲದಂತಾಗಿದೆ. ಇಲ್ಲಿನ ಬಹುತೇಕ ಮಕ್ಕಳು ಎರಡು ವರ್ಷಗಳಿಂದ ಶಾಲೆಯ ಮುಖವನ್ನೇ ಕಂಡಿಲ್ಲ. ಈ ಭಾಗದ ಶೇ 95ರಷ್ಟು ಶಾಲೆಗಳು ನೆಲಕ್ಕುರುಳಿದ್ದರೆ, ಅಳಿದುಳಿದ ಶಾಲೆಗಳು ನಿರಾಶ್ರಿತ ಶಿಬಿರಗಳಾಗಿ ಮಾರ್ಪಟ್ಟಿವೆ.

ಮಕ್ಕಳಿಗೆ ಹೊಟ್ಟೆತುಂಬ ಊಟ, ಮೈಮುಚ್ಚುವಷ್ಟು ಬಟ್ಟೆ, ದಾಹ ತೀರುವಷ್ಟು ಕುಡಿಯುವ ನೀರು ಕೂಡ ದುರ್ಲಭವಾಗಿವೆ; ಹಸಿವು, ಪದೇ ಪದೇ ಆಶ್ರಯ ಶಿಬಿರಗಳ ಬದಲಾವಣೆ, ಬಾಂಬ್, ಕ್ಷಿಪಣಿ ದಾಳಿಗಳಿಂದ ಅವರು ತೀವ್ರ ದೈಹಿಕ ಮತ್ತು ಮಾನಸಿಕ ಕ್ಷೋಭೆಗೆ ಒಳಗಾಗಿದ್ದು, ಅವರಿಗೆ ತಕ್ಷಣ ವೈದ್ಯಕೀಯ ನೆರವು ಬೇಕಾಗಿದೆ. ಯುದ್ಧದ ಭೀಕರತೆ, ಹಿಂಸಾಚಾರ, ಪ್ರೀತಿಪಾತ್ರರ ಸಾವು, ಭಯ ಮತ್ತು ಮೂಲಸೌಕರ್ಯಗಳ ಕೊರತೆಯಿಂದ ಇಲ್ಲಿನ ಮಕ್ಕಳು ಜೀವಚ್ಛವಗಳಾಗಿದ್ದಾರೆ.

ಮಹಿಳೆಯರು, ಅದರಲ್ಲೂ ಗರ್ಭಿಣಿಯರು, ಬಾಣಂತಿಯರು ಮತ್ತು ಮಕ್ಕಳು ಗಾಜಾ ಪಟ್ಟಿಯಲ್ಲಿ ನಿರ್ಮಾಣವಾಗಿರುವ ಮಾನವೀಯ ಬಿಕ್ಕಟ್ಟಿನ ಮೊದಲ ಬಲಿಪಶುಗಳಾಗಿದ್ದಾರೆ. ಈಗಾಗಲೇ ಸಾವಿರಾರು ಮಕ್ಕಳು ಪ್ರಾಣ ಕಳೆದುಕೊಂಡಿದ್ದು, ಅದಕ್ಕಿಂತ ಹೆಚ್ಚು ಮಂದಿ ಗಾಯಾಳುಗಳಾಗಿ ಸರಿಯಾದ ಚಿಕಿತ್ಸೆಯೂ ಸಿಗದೇ ನರಳುತ್ತಿದ್ದಾರೆ. ಯುದ್ಧದಿಂದ ನೇರವಾಗಿ ಸತ್ತವರಂತೆಯೇ ಊಟ ಸಿಗದೇ ಸತ್ತವರು, ಕಾಯಿಲೆಗಳಿಂದ ಸತ್ತ ಮಕ್ಕಳ ಸಂಖ್ಯೆಯೂ ಗಣನೀಯವಾಗಿದೆ. ಏರುತ್ತಿರುವ ಉಷ್ಣಾಂಶ ಕೂಡ ಅವರಿಗೆ ಶಾಪವಾಗಿ ಪರಿಣಮಿಸಿದೆ. ಸುಮಾರು 17 ಸಾವಿರ ಮಕ್ಕಳು ತಮ್ಮ ಪೋಷಕರಿಂದ ದೂರವಾಗಿದ್ದಾರೆ. ಇಸ್ರೇಲ್ 11 ತಿಂಗಳು ಆಹಾರ ಪದಾರ್ಥಗಳ ಸಾಗಣೆಯನ್ನು ನಿರ್ಬಂಧಿಸಿದ್ದರಿಂದ 5 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ತೀವ್ರ ಅಪೌಷ್ಟಿಕತೆಯ ಅಪಾಯ ಎದುರಿಸುತ್ತಿದ್ದಾರೆ.

ಆಹಾರ ಪದಾರ್ಥಗಳ ಲಭ್ಯತೆಯೇ ದೊಡ್ಡ ಸಮಸ್ಯೆಯಾಗಿದೆ. ಬೇಕರಿಗಳನ್ನು ಮುಚ್ಚಲಾಗಿದೆ. ಆಹಾರ ಧಾನ್ಯಗಳ ಬೆಲೆ ಶೇ 700ರಷ್ಟು ಹೆಚ್ಚಾಗಿದ್ದು, ಹಸಿವಿನ ವಿರಾಟ್ ಸ್ವರೂಪವು ಇಲ್ಲಿ ಕಂಡುಬರುತ್ತಿದೆ. ದಿನಕ್ಕೆ ಒಂದು ಹೊತ್ತು ಕೂಡ ಊಟ ಸಿಗದವರ ಸಂಖ್ಯೆ ದೊಡ್ಡದಿದೆ. ಹಸಿವು ತಾಳಲಾಗದೇ ಮಕ್ಕಳು ಆಕ್ರಂದನ ಮಾಡುವುದು, ಪೋಷಕರು ತಮ್ಮ ಮಕ್ಕಳಿಗಾಗಿ ಹಿಡಿ ಅನ್ನ ನೀಡುವಂತೆ ಅಧಿಕಾರಿಗಳನ್ನು ಬೇಡಿಕೊಳ್ಳುವುದು ಇಲ್ಲಿನ ಸಾಮಾನ್ಯ ದೃಶ್ಯಗಳಾಗಿವೆ.

ಕೆಲವು ಸ್ವಯಂ ಸೇವಾ ಸಂಸ್ಥೆಗಳು, ಅಂತರರಾಷ್ಟ್ರೀಯ ಸಂಘ ಸಂಸ್ಥೆಗಳು ಇಲ್ಲಿ ಉದ್ಭವಿಸಿರುವ ಮಾನವೀಯ ಬಿಕ್ಕಟ್ಟನ್ನು ಶಮನ ಮಾಡಲು ಒಂದಿಷ್ಟು ಪ್ರಯತ್ನ ನಡೆಸುತ್ತಿವೆ. ಅದಕ್ಕಾಗಿ ಹಲವು ದೇಶಗಳು ಧನಸಹಾಯ ಮಾಡುತ್ತಿವೆ. ಆದರೆ, ಇಲ್ಲಿನ ಪರಿಸ್ಥಿತಿಯ ತೀವ್ರತೆಗೆ ತಕ್ಕಂತೆ ಪರಿಹಾರ ಕಾರ್ಯಗಳು ನಡೆಯುತ್ತಿಲ್ಲ. ರಕ್ಷಣಾ ಕಾರ್ಯದಲ್ಲಿ, ಆರೋಗ್ಯ ಸೇವೆಗಳಲ್ಲಿ ತೊಡಗಿರುವ ಸಿಬ್ಬಂದಿಯೂ ಹಸಿದ ಹೊಟ್ಟೆಯಲ್ಲಿಯೇ ಕೆಲಸ ಮಾಡಬೇಕಾದ ಸ್ಥಿತಿ ಇದೆ. ಆಹಾರ ಪದಾರ್ಥ, ಪರಿಹಾರ ಸಾಮಗ್ರಿಯನ್ನು ಹೊತ್ತ ಟ್ರಕ್‌ಗಳು ಆಗಮಿಸುತ್ತಿದ್ದಂತೆಯೇ ಜನ ಅವುಗಳನ್ನು ಮುತ್ತಿಕೊಳ್ಳುವ, ನಿರಾಶ್ರಿತರಿಗೆ ಪೂರೈಸಲಾಗುವ ಆಹಾರಕ್ಕಾಗಿ ಪೈಪೋಟಿ ನಡೆಸುವ ಚಿತ್ರಗಳು, ವಿಡಿಯೊಗಳು ಅಲ್ಲಿನ ಪರಿಸ್ಥಿತಿಯ ತೀವ್ರತೆಯನ್ನು ಹೇಳುತ್ತಿವೆ.

ಎಲುಬಿನ ಹಂದರವಾಗಿರುವ ಮಕ್ಕಳು ಆಹಾರಕ್ಕಾಗಿ, ಜೀವ ಉಳಿಸುವಂಥ ಮಾನವೀಯ ನೆರವಿಗಾಗಿ ಆಸೆಯಿಂದ ಎದುರುನೋಡುತ್ತಿದ್ದಾರೆ. ಅವರ ದೈನ್ಯ, ನೋವು ತುಂಬಿದ ಕಣ್ಣುಗಳು ಗಾಜಾ ಪಟ್ಟಿಯ ಪರಿಸ್ಥಿತಿಗೆ, ಮನುಷ್ಯ ನಿರ್ಮಿತ ಬಿಕ್ಕಟ್ಟಿನ ತೀವ್ರತೆಗೆ, ದೇಶ–ದೇಶಗಳ ನಡುವಿನ ಯುದ್ಧ, ಅಸಹನೆ, ಆಕ್ರಮಣಗಳಿಂದ ಉಂಟಾಗುವ ಪರಿಣಾಮಗಳಿಗೆ ಸಂಕೇತದಂತಿವೆ.

ಆಧಾರ: ಇಂಟರ್‌ನ್ಯಾಷನಲ್ ರೆಸ್ಕ್ಯೂ ಕಮಿಟಿ, ಬಿಬಿಸಿ, ರಾಯಿಟರ್ಸ್, ವಿಶ್ವಸಂಸ್ಥೆಯ ವರದಿಗಳು, ದಿ ನ್ಯೂಯಾರ್ಕ್ ಟೈಮ್ಸ್



ಹಸಿವು ತಡೆಯಲಾಗುತ್ತಿಲ್ಲ ಊಟ ಕೊಡಿ... ಗಾಜಾ ಪಟ್ಟಿಯ ನಿರಾಶ್ರಿತರ ಶಿಬಿರವೊಂದರಲ್ಲಿ ಆಹಾರಕ್ಕಾಗಿ ಮಕ್ಕಳು ಪಾತ್ರೆಗಳನ್ನು ಒಡ್ಡಿದ ಕ್ಷಣ –ಎಎಫ್‌ಪಿ ಚಿತ್ರ

| | | | | | |
|---|---|---|---|---|---|
| 19 ಲಕ್ಷ ಯುದ್ಧದಿಂದಾಗಿ ನಿರಾಶ್ರಿತರಾದವರು | 62 ಸಾವಿರ ಈವರೆಗೆ ಮೃತಪಟ್ಟ ಪ್ಯಾಲೆಸ್ಟೀನಿಯರು | 18,500 ಮೃತಪಟ್ಟ ಮಕ್ಕಳ ಸಂಖ್ಯೆ | 1.56 ಲಕ್ಷ ಗಾಯಗೊಂಡ ಪ್ಯಾಲೆಸ್ಟೀನಿಯನ್ನರು | 20 ಸಾವಿರ ತೀವ್ರ ಅಪೌಷ್ಟಿಕತೆಯಿಂದ ಬಳಲುತ್ತಿರುವ ಮಕ್ಕಳು | 6.5 ಲಕ್ಷ ಶಿಕ್ಷಣದಿಂದ ವಂಚಿತರಾದ ಮಕ್ಕಳು |




## ನೆರವು ತಡೆಯುತ್ತಿರುವ ಇಸ್ರೇಲ್

ಗಾಜಾ ಪಟ್ಟಿಯ ಶೇ 86ರಷ್ಟು ಭೂಭಾಗದ ಮೇಲೆ ನಿಯಂತ್ರಣ ಹೊಂದಿರುವ ಇಸ್ರೇಲ್, ಹಸಿವಿನಿಂದ ಬಳಲುತ್ತಿರುವ ನಿರಾಶ್ರಿತ ಪ್ಯಾಲೆಸ್ಟೀನಿಯನ್ನರಿಗೆ ಆಹಾರ ವಸ್ತುಗಳು ಹಾಗೂ ಇನ್ನಿತರ ಅಗತ್ಯ ಸಾಮಗ್ರಿಗಳನ್ನು ಪೂರೈಸುವುದಕ್ಕೆ ಅವಕಾಶ ನೀಡುತ್ತಿಲ್ಲ ಎಂದು ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಘಟಕ ಆರೋಪಿಸಿದೆ. ಕಳೆದ ಕೆಲವು ವಾರಗಳಿಂದ ಗಾಜಾ ಪಟ್ಟಿಗೆ ಸ್ವಲ್ಪ ಪ್ರಮಾಣದಲ್ಲಿ ನೆರವು ತಲುಪುವುದಕ್ಕೆ ಮಾತ್ರ ಇಸ್ರೇಲ್ ಅವಕಾಶ ನೀಡಿದೆ. ಆದರೆ, ಅಲ್ಲಿ ಹೆಚ್ಚುತ್ತಿರುವ ಹಸಿವನ್ನು ತಡೆಯಲು ಇದು ಸಾಕಾಗುತ್ತಿಲ್ಲ ಎಂದು ಅದು ಹೇಳಿದೆ. ಯುದ್ಧ ಆರಂಭವಾದ, 2023ರ ಅಕ್ಟೋಬರ್ 7ಕ್ಕೂ ಮೊದಲು ಪ್ರತಿ ದಿನ 500 ಟ್ರಕ್‌ಗಳು ಗಾಜಾವನ್ನು ಪ್ರವೇಶಿಸುತ್ತಿದ್ದವು. ಅಂದರೆ ಪ್ರತಿ ತಿಂಗಳು 15 ಸಾವಿರದಷ್ಟು ಟ್ರಕ್‌ಗಳು ನೆರವಿನ ಸಾಮಗ್ರಿಗಳನ್ನು ಹೊತ್ತೊಯ್ಯುತ್ತಿದ್ದವು. ಯುದ್ಧದ ನಂತರ ಇದಕ್ಕೆ ಇಸ್ರೇಲ್ ತಡೆಯೊಡ್ಡಿತ್ತು. ಕಡಿಮೆ ಸಂಖ್ಯೆಯ ಟ್ರಕ್‌ಗಳಿಗಷ್ಟೇ ಅವಕಾಶ ನೀಡುತ್ತಿತ್ತು.

ಈಗ ಅಂತರರಾಷ್ಟ್ರೀಯ ಒತ್ತಡದ ಬಳಿಕ ಆಹಾರ ಸಾಮಗ್ರಿಗಳನ್ನು ಹೊತ್ತ ಟ್ರಕ್‌ಗಳಿಗೆ ಗಾಜಾದತ್ತ ತೆರಳಲು ಮತ್ತು ವಿಮಾನ, ಹೆಲಿಕಾಪ್ಟರ್‌ಗಳ ಮೂಲಕ ಅಗತ್ಯ ವಸ್ತುಗಳನ್ನು ನಿರಾಶ್ರಿತ ಶಿಬಿರಗಳ ವ್ಯಾಪ್ತಿಯಲ್ಲಿ ಹಾಕಲು ಇಸ್ರೇಲ್ ಅವಕಾಶ ನೀಡಿದೆ ಎಂದು ವರದಿಯಾಗಿದೆ.



## ಅಮೆರಿಕದ ಮೌನಕ್ಕೆ ಅತೃಪ್ತಿ

ರಷ್ಯಾ ನಡೆಸುತ್ತಿರುವ ದಾಳಿಯಲ್ಲಿ ಉಕ್ರೇನ್ ಸೈನಿಕರು ಹಾಗೂ ಜನರು ಸಾಯುತ್ತಿರುವುದರ ಬಗ್ಗೆ ಮಾತನಾಡುತ್ತಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಗಾಜಾದಲ್ಲಿನ ಮಾನವೀಯ ಬಿಕ್ಕಟ್ಟಿನ ಬಗ್ಗೆ ಮೌನ ತಾಳಿದ್ದಾರೆ. ಬದಲಿಗೆ, ಅಮೆರಿಕ ಸರ್ಕಾರ ಇಸ್ರೇಲ್ ಅನ್ನು ಬೆಂಬಲಿಸುತ್ತಿರುವುದು ಪ್ಯಾಲೆಸ್ಟೀನ್‌ನ ಬೆಂಬಲಕ್ಕೆ ನಿಂತಿರುವ ರಾಷ್ಟ್ರಗಳು ಹಾಗೂ ಜನರ ಅಸಮಾಧಾನಕ್ಕೆ ಕಾರಣವಾಗಿದೆ.



ಪದಬ

ಎಡದಿಂದ ಬಲಕ್ಕೆ
1.ತಲೆಯನ್ನು ಕೆಳಕ್ಕೆ ಬಾಗಿಸಿ ನಡೆಯುವವನು (4)
3.ಮೂಲಿಕೆಗಳನ್ನು ಬಟ್ಟಿಯಿಳಿಸಿ ತೆಗೆದ ರಸ (3)
5.ಗಣಿಯೊಳಗಿರುವ ಬಸುರಿ (3)
7.ಹಲ್ಲುಗಳಿಗೆ ಆಧಾರವಾಗಿರುವ ಮಾಂಸಖಂಡ (3)
8.ಎಲ್ಲರೂ ಒಟ್ಟಾಗಿ ಹಾಡುವಿಕೆ (5)
11.ಗದ್ದಲ ಇಲ್ಲೇ ಕೇಳುತ್ತಿದೆ (3)
12.ಕೋಟೆಯ ಮೇಲುಭಾಗ (3)
15.ಪ್ರತ್ಯಕ್ಷವಲ್ಲದ್ದು ಪಕ್ಷದೊಳಗಿದೆಯಲ್ಲಾ? (3)
16.ಅಕ್ಕಪಕ್ಕ ಎಂದು ಹೀಗೆನ್ನಿ (4)

ಮೇಲಿಂದ ಕೆಳಕ್ಕೆ
1.ಎಣ್ಣೆ ಮಜ್ಜನಕ್ಕೇನೂ ಭಂಗವಿಲ್ಲ ಬಿ
2.ಉತ್ತರದವರ ಸತ್ಯ!
3.ಕರದಲ್ಲಿ ಹಿಡಿದಿರುವ ಕಚ್ಚಾಪ್ರತಿ
4.ನರಕಾಧಿಪತಿ ನೀಡಿದ ಘೋರದ
6.ಸರಪಣಿಯಲ್ಲಿನ ಪಂಕ್ತಿಯೇ ಉಲ
7.ಕೆಲಸಕ್ಕೆ ಬಾರದ ಮಾತಿದು
9.ಮುಸಲ್ಮಾನರ ದೊರೆ
10.ಒಪ್ಪವಾಗಿ ಬಳಿಯುವುದು
11.ಬೆಳಕಿನ ಕಿಂಡಿಯಿದು
13.ರೀತಿಯೊಡನೆ ಬಂದಿರುವ ಸಂಪ್ರ
14.ಕಷ್ಟಕ್ಕೆ ಸಿಕ್ಕಿದವನು ತಿರುಗಿದ್ದಾನ

6139ನೇ ಪದಬಂಧದ ಉತ್ತರ

ಸುಡೊಕು

ಆಡುವುದು ಹೀಗೆ: ಮನೆಗಳನು 1ರಿಂ

## ❖ ಮಸೂದೆಗಳಿಗೆ ಅಂಕಿತ: ರಾಷ್ಟ್ರಪತಿ ಪ್ರಶ್ನಿಸಿರುವುದರಲ್ಲಿ ತಪ್ಪೇನಿದೆ- 'ಸುಪ್ರೀಂ'

**ಸಂದರ್ಭ:**

ರಾಜ್ಯಗಳ ವಿಧಾನಸಭೆಗಳು ಅಂಗೀಕರಿಸಿದ ಮಸೂದೆಗಳಿಗೆ ಅಂಕಿತ ಹಾಕಲು ಕಾಲಮಿತಿ ನಿಗದಿಪಡಿಸುವುದಕ್ಕೆ ಸಂಬಂಧಿಸಿದಂತೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸ್ಪಷ್ಟನೆ ಕೇಳಿರುವುದರಲ್ಲಿ ತಪ್ಪೇನಿದೆ ಎಂದು ಸುಪ್ರೀಂ ಕೋರ್ಟ್ ಪ್ರಶ್ನಿಸಿತು.

- ತಮಿಳುನಾಡು ಮತ್ತು ಕೇರಳ ಸರ್ಕಾರಗಳ ಪರ ವಕೀಲರು ರಾಷ್ಟ್ರಪತಿಯವರು ಸ್ಪಷ್ಟನೆ ಕೋರಿರುವುದನ್ನು ವಿರೋಧಿಸಿದ್ದು, ಅದು ವಿಚಾರಣೆಗೆ ಯೋಗ್ಯವೇ ಎಂದು ಪ್ರಶ್ನಿಸಿದರು. ಬಳಿಕ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ನೇತೃತ್ವದ ಐವರು ನ್ಯಾಯಮೂರ್ತಿಗಳನ್ನು ಒಳಗೊಂಡ ನ್ಯಾಯಪೀಠವು, 'ರಾಷ್ಟ್ರಪತಿ ಸ್ಪಷ್ಟನೆ ಕೇಳಿರು ವುದರಲ್ಲಿ ತಪ್ಪೇನಿದೆ? ಈ ವಿಚಾರದ ಪ್ರತಿವಾದವನ್ನು ನಿಜಕ್ಕೂ ನೀವು ಗಂಭೀರವಾಗಿ ಪರಿಗಣಿಸಿದ್ದೀರಾ' ಎಂದು ಕೇಳಿತು.
- **ಸಂವಿಧಾನದ 143(1)ನೇ ವಿಧಿಯಡಿ ದತ್ತವಾದ ಅಧಿಕಾರವನ್ನು ಬಳಸಿಕೊಂಡು, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸುಪ್ರೀಂ ಕೋರ್ಟ್‌ನಿಂದ ಸ್ಪಷ್ಟನೆ ಕೇಳಿದ್ದಾರೆ.**
- ಕಾಲಮಿತಿಯೊಳಗೆ ಅಂಕಿತ ಹಾಕಬೇಕು ಎಂದು ಹೇಳುವುದರಿಂದ ಸರ್ಕಾರದ ಒಂದು ಅಂಗವೇ ಹೆಚ್ಚಿನ ಅಧಿಕಾರ ಹೊಂದಿದಂತಾಗಲಿದೆ. ಇದರಿಂದ 'ಸಾಂವಿಧಾನಿಕ ವ್ಯವಸ್ಥೆಗೆ ಧಕ್ಕೆ' ಉಂಟಾಗಲಿದೆ ಎಂದು ಕೇಂದ್ರ ಸರ್ಕಾರವು ಸುಪ್ರೀಂ ಕೋರ್ಟ್‌ನಲ್ಲಿ ಅಭಿಪ್ರಾಯ ದಾಖಲಿಸಿದೆ. 'ಈ ವಿಷಯದಲ್ಲಿ ನಮ್ಮ ವ್ಯಾಪ್ತಿಯು ಸಲಹೆ ನೀಡುವುದಕ್ಕಷ್ಟೆ ಸೀಮಿತವಾಗಿದೆ' ಎಂದೂ ಪೀಠವು ತಿಳಿಸಿತು.

## ❖ ಕೇರಳ: ಅಮೀಬಾ ಸೋಂಕು ಹೆಚ್ಚಳ

**ಸಂದರ್ಭ:**

ತೀರಾ ಅಪರೂಪ ಹಾಗೂ ಪ್ರಾಣಕ್ಕೆ ಸಂಚಕಾರ ತರುವ ಸೋಂಕು ಎಂದು ಪರಿಗಣಿಸ ಲಾಗಿರುವ **'ಮಿದುಳು ತಿನ್ನುವ ಅಮೀಬಾ' (ಅಮೀಬಿಕ್ ಮೆನಿಂಗೊಎನ್ಸೆಫಲೈಟಿಸ್)** ಸೋಂಕಿನ ಪ್ರಕರಣಗಳು ಕೇರಳದಲ್ಲಿ ಹೆಚ್ಚಳ ಕಂಡಿವೆ.

- ವರ್ಷಕ್ಕೆ ಒಂದೋ ಎರಡೋ ಪ್ರಕರಣಗಳು ವರದಿಯಾಗುತ್ತಿದ್ದ ರಾಜ್ಯದಲ್ಲಿ, ಪ್ರಸಕ್ತ ವರ್ಷ ಇದುವರೆಗೆ 8 ಮಂದಿಗೆ ಸೋಂಕು ದೃಢಪಟ್ಟಿದೆ. ಸೋಂಕಿನಿಂದಾಗಿ ಇಬ್ಬರು ಮೃತಪಟ್ಟಿದ್ದಾರೆ.
- ಸೋಂಕಿನ ಪ್ರಕರಣಗಳ ಹೆಚ್ಚಳಕ್ಕೆ ಮೂಲ ಕಾರಣ ಏನು ಎಂಬುದನ್ನು ಪತ್ತೆಹಚ್ಚಲು ಸಾಧ್ಯವಾಗಿಲ್ಲ. ಆದಾಗ್ಯೂ, ಅವೈಜ್ಞಾನಿಕ ಕಸ ವಿಲೇವಾರಿಯಿಂದಾಗಿ ಜಲ ಮೂಲಗಳು ಕಲುಷಿತಗೊಳ್ಳುತ್ತಿರುವುದು, ಹವಾಮಾನ ಬದಲಾವಣೆ, ವಲಸೆ ಕಾರ್ಮಿಕರ ಹೆಚ್ಚಳ ಹಾಗೂ ರೋಗ ಪತ್ತೆ ಸೌಲಭ್ಯಗಳ ಉನ್ನತೀಕರಣವನ್ನು ಪ್ರಕರಣಗಳ ಹೆಚ್ಚಳಕ್ಕೆ ಕಾರಣ ಎಂದು ಹೇಳಲಾಗುತ್ತಿದೆ.

## ❖ 'ಎಸ್ಮಾ' ಮಸೂದೆಗೆ ಒಪ್ಪಿಗೆ

**ಸಂದರ್ಭ:**

ಮುಷ್ಕರ ನಡೆಸುವ ಸಾರಿಗೆ ನಿಗಮಗಳ ಸಿಬ್ಬಂದಿ ವಿರುದ್ಧ 'ಎಸ್ಮಾ' ಜಾರಿಗೊಳಿಸುವ 'ಅಗತ್ಯ ಸೇವೆಗಳ ನಿರ್ವಹಣಾ ತಿದ್ದುಪಡಿ ಮಸೂದೆ' ಗೆ ವಿಧಾನಸಭೆ ಅಂಗೀಕಾರ ನೀಡಿತು.

- 2015ರಲ್ಲಿ ಜಾರಿಗೆ ತಂದಿದ್ದ ಕಾಯ್ದೆಯ ಅವಧಿ 10 ವರ್ಷಗಳಿದ್ದು, 2025ರ ಮೇ ನಲ್ಲಿ ಅವಧಿ ಮುಕ್ತಾಯವಾದ ಕಾರಣ ಮತ್ತೆ 20 ವರ್ಷಗಳವರೆಗೆ ವಿಸ್ತರಿಸಿ, ತಿದ್ದುಪಡಿ ತರಲಾಗಿದೆ ಎಂದು ಸಾರಿಗೆ ಸಚಿವ ಹೇಳಿದರು.
- <u>ಮುಖ್ಯಾಧಿಕಾರಿಗೆ ಕಟ್ಟಡ ಪರವಾನಗಿ ಅಧಿಕಾರ:</u> ಪುರಸಭೆ, ಪಟ್ಟಣ ಪಂಚಾಯಿತಿಗಳಲ್ಲಿ ಮನೆ ಮತ್ತಿತರ ಕಟ್ಟಡಗಳ ನಿರ್ಮಾಣಕ್ಕೆ ಪರವಾನಗಿ ನೀಡುವುದು ವಿಳಂಬವಾಗುತ್ತಿರುವುದನ್ನು ತಪ್ಪಿಸಲು

Dr. Rajkumar IAS Academy

ಮುಖ್ಯಾಧಿಕಾರಿಗಳಿಗೆ ಹೊಣೆ ನೀಡುವ ಕರ್ನಾಟಕ ಮುನ್ಸಿಪಾಲಿಟಿಗಳು ಮತ್ತು ಇತರೆ ಕಾನೂನು ತಿದ್ದುಪಡಿ ಮಸೂದೆಗೆ ಅಂಗೀಕಾರ ಸಿಕ್ಕಿತು.

- ಜನರು ಅರ್ಜಿ ಸಲ್ಲಿಸಿದ 30 ದಿನಗಳ ಒಳಗೆ ಪರವಾನಗಿ ನೀಡಬೇಕು. ನಂತರ ನಡೆಯುವ ಕೌನ್ಸಿಲ್‌ನಲ್ಲಿ ಅನುಮತಿ ಪಡೆಯಬೇಕು ಎಂಬ ಷರತ್ತು ವಿಧಿಸಲಾಗಿದೆ.

## ❖ 'ಭಾರತ-ಚೀನಾ ಸಂಬಂಧ ವೃದ್ಧಿ'

**ಸಂದರ್ಭ:**

ಭಾರತವು ಚೀನಾದೊಟ್ಟಿಗಿನ ಗಡಿ ವಿವಾದದ ವಿಷಯದಲ್ಲಿ 'ನ್ಯಾಯಯುತ, ಸಮಂಜಸ ಮತ್ತು ಪರಸ್ಪರ ಸ್ವೀಕಾರಾರ್ಹವಾದ ಪರಿಹಾರಕ್ಕೆ ಬರಲು ಬದ್ಧವಾಗಿದೆ' ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

- ಚೀನಾ ವಿದೇಶಾಂಗ ಸಚಿವ ವಾಂಗ್ ಯಿ ಅವರನ್ನು ಭೇಟಿಯಾದ ಬಳಿಕ ಸಾಮಾಜಿಕ ಮಾಧ್ಯಮದಲ್ಲಿ ಹೇಳಿಕೆ ನೀಡಿರುವ ಪ್ರಧಾನಿ, ಸುಮಾರು 10 ತಿಂಗಳ ಹಿಂದೆ ಚೀನಾ ಅಧ್ಯಕ್ಷ ಷಿ ಜಿನ್‌ಪಿಂಗ್ ಅವರೊಂದಿಗಿನ ಮಾತುಕತೆಯ ನಂತರ ಭಾರತ-ಚೀನಾ ಸಂಬಂಧವು ಸ್ಥಿರವಾದ ಪ್ರಗತಿಯನ್ನು ಸಾಧಿಸಿದೆ ಎಂದರು.
- 'ಉಭಯ ದೇಶಗಳ ನಡುವಿನ ಸ್ಥಿರ ಮತ್ತು ರಚನಾತ್ಮಕ ಸಂಬಂಧವು ಪ್ರಾದೇಶಿಕ ಮತ್ತು ಜಾಗತಿಕ ಶಾಂತಿಗೆ ಗಣನೀಯ ಕೊಡುಗೆ ನೀಡುತ್ತದೆ. ಚೀನಾದ ತಿಯಾನ್‌ಜಿನ್ ನಗರದಲ್ಲಿ ಆಗಸ್ಟ್ 31 ಹಾಗೂ ಸೆಪ್ಟೆಂಬರ್ 1ರಂದು ನಡೆಯಲಿರುವ ಶಾಂಘೈ ಸಹಕಾರ ಸಂಘಟನೆ (ಎಸ್‌ಸಿಒ) ಶೃಂಗಸಭೆ ವೇಳೆ ಚೀನಾದ ಅಧ್ಯಕ್ಷರನ್ನು ಭೇಟಿಯಾಗುವುದನ್ನು ಎದುರು ನೋಡುತ್ತಿದ್ದೇನೆ' ಎಂದು ಹೇಳಿದರು.
- ಗಡಿಯಲ್ಲಿ ಶಾಂತಿ: **'ವಾಸ್ತವ ನಿಯಂತ್ರಣ ರೇಖೆ (ಎಲ್‌ಎಸಿ)** ಉದ್ದಕ್ಕೂ ಕಳೆದ ಒಂಬತ್ತು ತಿಂಗಳಿಂದ ಶಾಂತಿ ನೆಲಸಿದೆ. ಈ ಕಾರಣಕ್ಕೆ ಚೀನಾ ಮತ್ತು ಭಾರತ ನಡುವಿನ ಸಂಬಂಧದಲ್ಲಿ 'ಏರುಗತಿ' ಕಾಣಬಹುದಾಗಿದೆ' ಎಂದು ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ಡೊಭಾಲ್ ಹೇಳಿದರು.

ನೇರ ವಿಮಾನ ಸಂಚಾರ ಶೀಘ್ರ

- ಗಡಿಯಲ್ಲಿ ಶಾಂತಿ ಕಾಯ್ದುಕೊಳ್ಳಲು ಜತೆಯಾಗಿ ಕೆಲಸ ಮಾಡುವುದು, ಗಡಿ ಮೂಲಕ ವ್ಯಾಪಾರ ಸಂಬಂಧ ಪುನರಾರಂಭಿಸುವುದು, ಹೂಡಿಕೆಯನ್ನು ಉತ್ತೇಜಿಸುವುದು ಮತ್ತು ನೇರ ವಿಮಾನ ಸಂಚಾರವನ್ನು ಆದಷ್ಟು ಬೇಗ ಪುನರಾರಂಭಿಸುವುದು ಸೇರಿದಂತೆ ಪರಸ್ಪರ ಸಂಬಂಧ ಬಲಪಡಿಸಲು ಭಾರತ ಮತ್ತು ಚೀನಾ ಮಂಗಳವಾರ ಹಲವಾರು ಕ್ರಮಗಳನ್ನು ಘೋಷಿಸಿವೆ.
- ವಿದೇಶಾಂಗ ಸಚಿವ ಎಸ್.ಜೈಶಂಕರ್ ಮತ್ತು ವಾಂಗ್ ಯಿ ನಡುವಿನ ಮಾತುಕತೆ ವೇಳೆ ಈ ಬಗ್ಗೆ ಚರ್ಚೆ ನಡೆದಿದೆ. **ಲಿಪುಲೇಖ್ ಪಾಸ್, ಶಿಪ್ಕಿ ಲಾ ಪಾಸ್ ಮತ್ತು ನಾಥು ಲಾ ಪಾಸ್ ವ್ಯಾಪಾರ ಕೇಂದ್ರಗಳ ಮೂಲಕ ಗಡಿ ವ್ಯಾಪಾರವನ್ನು ಪುನರಾರಂಭಿಸಲು ಎರಡೂ ಕಡೆಯವರು ಒಪ್ಪಿಕೊಂಡಿದ್ದಾರೆ** ಎಂದು ಜಂಟಿ ಹೇಳಿಕೆ ತಿಳಿಸಿದೆ.

Dr. Rajkumar IAS/KAS Academy

## ❖ 'ತೈವಾನ್: ಭಾರತದ ನಿಲುವು ಅಚಲ'

**ಸಂದರ್ಭ:**

'ತೈವಾನ್ ಕುರಿತಂತೆ ಭಾರತದ ನಿಲುವಿನಲ್ಲಿ ಯಾವುದೇ ಬದಲಾವಣೆ ಇಲ್ಲ' ಎಂದು ಸರ್ಕಾರದ ಮೂಲಗಳು ಸ್ಪಷ್ಟಪಡಿಸಿವೆ.

- 'ವಿಶ್ವದ ಇತರ ರಾಷ್ಟ್ರಗಳಂತೆ, ಭಾರತ ಕೂಡ ತೈವಾನ್ ಜೊತೆ ದ್ವಿಪಕ್ಷೀಯ ಸಂಬಂಧ ಹೊಂದಿದೆ. ಆರ್ಥಿಕತೆ, ತಂತ್ರಜ್ಞಾನ ಮತ್ತು ಸಾಂಸ್ಕೃತಿಕ ಒಪ್ಪಂದಗಳ ಮೇಲೆ ಈ ಸಂಬಂಧ ಕೇಂದ್ರೀಕೃತ ವಾಗಿದೆ' ಎಂದು ಕೇಂದ್ರ ಸರ್ಕಾರ ಹೇಳಿದ್ದಾಗಿ ಇವೇ ಮೂಲಗಳು ತಿಳಿಸಿವೆ.
- 'ತೈವಾನ್‌ಅನ್ನು ಚೀನಾದ ಭಾಗವೆಂದು ಭಾರತ ಪರಿಗಣಿಸುತ್ತದೆ ಎಂಬುದಾಗಿ ಜೈಶಂಕರ್ ಅವರು ವಾಂಗ್ ಯಿ ಅವರಿಗೆ ಸಭೆಯಲ್ಲಿ ಹೇಳಿದ್ದರು' ಎಂಬುದಾಗಿ ಈ ಹೇಳಿಕೆಯಲ್ಲಿ ಉಲ್ಲೇಖಿಸಲಾಗಿತ್ತು. ಇದರ ಬೆನ್ನಲ್ಲೇ ಕೇಂದ್ರ ಸರ್ಕಾರವು ಈ ಸ್ಪಷ್ಟನೆ ನೀಡಿದೆ.
- ಈ ಬೆಳವಣಿಗೆಗಳ ನಂತರ, 'ಜೈಶಂಕರ್ ಅವರ ಹೇಳಿಕೆಯನ್ನು ಚೀನಾ ವಿದೇಶಾಂಗ ಸಚಿವಾಲಯ ತಪ್ಪಾಗಿ ಉಲ್ಲೇಖಿಸಿತ್ತು' ಎಂದೂ ಮೂಲಗಳು ಹೇಳಿವೆ.
- ಚೀನಾ ಹೇಳಿಕೆ ಕುರಿತು ಅಚ್ಚರಿ ವ್ಯಕ್ತಪಡಿಸಿದ್ದ ಸಚಿವ ಜೈಶಂಕರ್, 'ಗಡಿ ವಿಚಾರವಾಗಿ ಭಾರತದೊಂದಿಗೆ ಯಾವ ರೀತಿ ಚೀನಾ ವ್ಯವಹರಿಸುತ್ತಿದೆಯೋ ಅದೇ ರೀತಿ ತೈವಾನ್‌ನೊಂದಿಗೂ ವ್ಯವಹರಿಸುತ್ತಿದೆ' ಎಂದು ಪ್ರತಿಕ್ರಿಯಿಸಿದ್ದರು.

## ❖ ವರಮಾನ ನಷ್ಟ ₹85,000 ಕೋಟಿ

**ಸಂದರ್ಭ:**

ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ವ್ಯವಸ್ಥೆ ಯಲ್ಲಿ ತರಲು ಉದ್ದೇಶಿಸಿರುವ ಸುಧಾರಣೆ ಗಳಿಂದಾಗಿ ಸರ್ಕಾರಗಳಿಗೆ ವಾರ್ಷಿಕ ₹85 ಸಾವಿರ ಕೋಟಿ ವರಮಾನ ನಷ್ಟ ಆಗಲಿದೆ ಎಂದು ಎಸ್‌ಬಿಐ ರಿಸರ್ಚ್ ಅಂದಾಜು ಮಾಡಿದೆ.

- ಆದರೆ ಈ ಸುಧಾರಣೆಗಳ ಪರಿಣಾಮವಾಗಿ ಮಾರುಕಟ್ಟೆ ಯಲ್ಲಿ ₹1.98 ಲಕ್ಷ ಕೋಟಿ ಮೌಲ್ಯದ ಬೇಡಿಕೆಯು ಹೊಸದಾಗಿ ಸೃಷ್ಟಿ ಆಗಲಿದೆ ಎಂದು ಅದು ಅಂದಾಜಿನಲ್ಲಿ ಹೇಳಿದೆ.
- ಕೇಂದ್ರ ಸರ್ಕಾರವು ಪ್ರಸ್ತಾವ ಮಾಡಿರುವ **'ಹೊಸ ತಲೆಮಾರಿನ ಜಿಎಸ್‌ಟಿ' ವ್ಯವಸ್ಥೆಯು ಎರಡು ಹಂತಗಳ ತೆರಿಗೆಗಳನ್ನು ಮಾತ್ರ ಉಳಿಸಿಕೊಳ್ಳಲಿದೆ. ಶೇ 12 ಹಾಗೂ ಶೇ 28ರ ತೆರಿಗೆ ಹಂತಗಳು ಇನ್ನಿಲ್ಲವಾಗಲಿದ್ದು, ಶೇ 5 ಹಾಗೂ ಶೇ 18ರ ತೆರಿಗೆ ಹಂತಗಳು ಮಾತ್ರ ಉಳಿಯಲಿವೆ. ತಂಬಾಕಿನಂತಹ ಕೆಲವೇ ಕೆಲವು ಉತ್ಪನ್ನಗಳಿಗೆ ಶೇ 40ರಷ್ಟು ತೆರಿಗೆ ಇರಲಿದೆ.**
- **ಜಿಎಸ್‌ಟಿ ಸುಧಾರಣೆಯಿಂದಾಗಿ ಬೇಡಿಕೆಯಲ್ಲಿ ಆಗಲಿರುವ ಹೆಚ್ಚಳವು ದೇಶದ ಜಿಡಿಪಿ ಬೆಳವಣಿಗೆಯು ಶೇ 0.6ರಷ್ಟು ಹೆಚ್ಚುವಂತೆ ಮಾಡಲಿದೆ.** ಆದರೆ ಇದು ಹಣದುಬ್ಬರಕ್ಕೆ ಕಾರಣ ಆಗುವುದಿಲ್ಲ. ಏಕೆಂದರೆ ಜನರು ವ್ಯಾಪಕವಾಗಿ ಬಳಕೆ ಮಾಡುವ ಉತ್ಪನ್ನಗಳು, ಸರಕುಗಳ ಮೇಲಿನ ತೆರಿಗೆಯು ಕಡಿಮೆ ಹಂತಕ್ಕೆ ಬರುವ ನಿರೀಕ್ಷೆ ಇದೆ ಎಂದು ಅದು ಹೇಳಿದೆ.
- ಗ್ರಾಹಕ ಬೆಲೆ ಸೂಚ್ಯಂಕ ಆಧಾರಿತ ಹಣದುಬ್ಬರ ಪ್ರಮಾಣವು ಶೇ 0.20ರಿಂದ ಶೇ 0.25ರವರೆಗೆ ಇಳಿಕೆ ಕಾಣಬಹುದು ಎಂದು ಅಂದಾಜು ಮಾಡಿದೆ.
- ಅಗತ್ಯ ವಸ್ತುಗಳಾದ ಆಹಾರ ಮತ್ತು ಬಟ್ಟೆಗೆ ಶೇ 12ರಷ್ಟು ತೆರಿಗೆ ಬದಲು ಶೇ 5ರಷ್ಟು ತೆರಿಗೆ ವಿಧಿಸುವ ಸಾಧ್ಯತೆ ಇರುವ ಕಾರಣ, ಈ ವಸ್ತುಗಳ ಹಣದುಬ್ಬರ ಪ್ರಮಾಣವು ಶೇ 0.1ರಿಂದ ಶೇ 0.15ರಷ್ಟು ಕಡಿಮೆ ಆಗುವ ಸಾಧ್ಯತೆ ಇದೆ.
- ಬದಲಾವಣೆ ಪ್ರಸ್ತಾವಗಳು ಈ ವರ್ಷದ ಅಕ್ಟೋಬರ್‌ನಲ್ಲಿ ಜಾರಿಗೆ ಬಂದಲ್ಲಿ, ಈ ಹಣಕಾಸು ವರ್ಷದಲ್ಲಿ ಆಗುವ ವರಮಾನ ನಷ್ಟವು ₹45 ಸಾವಿರ ಕೋಟಿ ಆಗಬಹುದು.

- ಈ ವರ್ಷದ ಬಜೆಟ್‌ನಲ್ಲಿ ಘೋಷಿಸ ಲಾದ ವರಮಾನ ತೆರಿಗೆ ಮಿತಿ ಸಡಿಲಿಕೆ ಕ್ರಮ ಹಾಗೂ ಜಿಎಸ್‌ಟಿ ಸುಧಾರಣೆಯ ಒಟ್ಟು ಪರಿಣಾಮವಾಗಿ, ಅರ್ಥ ವ್ಯವಸ್ಥೆ ಯಲ್ಲಿ ₹5.31 ಲಕ್ಷ ಕೋಟಿ ಮೌಲ್ಯದ ಬೇಡಿಕೆ ಸೃಷ್ಟಿಯಾಗಲಿದೆ ಎಂದು ಎಸ್‌ಬಿಐ ಅಂದಾಜು ಮಾಡಿದೆ.
- ಕೇಂದ್ರದ ಪ್ರಸ್ತಾವವನ್ನು ರಾಜ್ಯಗಳ ಸಚಿವರ ಗುಂಪು ಪರಾಮರ್ಶೆಗೆ ಒಳಪಡಿಸಲಿದೆ. ಸಚಿವರ ಗುಂಪು ಈ ಪ್ರಸ್ತಾವಕ್ಕೆ ಒಪ್ಪಿಗೆ ಸೂಚಿಸಿದರೆ, ಅದನ್ನು ಜಿಎಸ್‌ಟಿ ಮಂಡಳಿಯ ಮುಂದೆ ಇರಿಸಲಾಗುತ್ತದೆ. ಜಿಎಸ್‌ಟಿ ಮಂಡಳಿಯ ಸಭೆ ಮುಂದಿನ ತಿಂಗಳು ನಡೆಯಲಿದೆ.

## ❖ ಹತ್ತಿಗೆ ಆಮದು ಸುಂಕ ವಿನಾಯಿತಿ

**ಸಂದರ್ಭ:**

ಕಚ್ಚಾ ಹತ್ತಿಯನ್ನು ಸೆಪ್ಟೆಂಬರ್ 30ರವರೆಗೆ ಯಾವುದೇ ಸುಂಕ ಇಲ್ಲದೆ ಆಮದು ಮಾಡಿಕೊಳ್ಳಲು ಕೇಂದ್ರ ಸರ್ಕಾರವು ಅನುಮತಿ ನೀಡಿದೆ. ದೇಶದ ಜವಳಿ ಉದ್ಯಮಕ್ಕೆ ಅಗತ್ಯವಾಗಿರುವ ಈ ಕಚ್ಚಾವಸ್ತುವಿನ ಲಭ್ಯತೆಯನ್ನು ಸುಧಾರಿಸುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ. ಕೇಂದ್ರದ ಈ ಕ್ರಮವು ಅಮೆರಿಕಕ್ಕೆ ಕೂಡ ನೆರವಾಗಲಿದೆ ಎಂದು ಹೇಳಲಾಗಿದೆ.

- ಇದುವರೆಗೆ **ಹತ್ತಿಗೆ ಶೇಕಡ 11ರಷ್ಟು ಆಮದು ಸುಂಕ ವಿಧಿಸಲಾಗುತ್ತಿತ್ತು. ಇದರಲ್ಲಿ ಕೃಷಿ ಮೂಲಸೌಕರ್ಯ ಮತ್ತು ಅಭಿವೃದ್ಧಿ ಸೆಸ್ ಕೂಡ ಇತ್ತು.**
- ಕೇಂದ್ರ ಹಣಕಾಸು ಸಚಿವಾಲಯವು ಆಗಸ್ಟ್ 18ರಂದು ಹೊರಡಿಸಿರುವ ಅಧಿಸೂಚನೆ ಪ್ರಕಾರ, ಸುಂಕ ವಿನಾಯಿತಿಯು ಆಗಸ್ಟ್ 19ರಿಂದ ಜಾರಿಗೆ ಬಂದಿದೆ. ಸುಂಕ ವಿನಾಯಿತಿಯ ಪರಿಣಾಮವಾಗಿ ದೇಶದ ಜವಳಿ ವಲಯಕ್ಕೆ ಜಾಗತಿಕ ಮಟ್ಟದಲ್ಲಿ ಸ್ಪರ್ಧೆ ಒಡ್ಡಲು ಸಾಧ್ಯವಾಗುವ ದರದಲ್ಲಿ ಕಚ್ಚಾ ಹತ್ತಿ ಲಭ್ಯವಾಗುತ್ತದೆ ಎಂಬ ನಿರೀಕ್ಷೆ ಇದೆ.
- ದೇಶದ ಜವಳಿ ವಲಯ ಸೇರಿದಂತೆ ವಿವಿಧ ವಲಯಗಳಿಂದ ಆಮದು ಮಾಡಿಕೊಳ್ಳುವ ಉತ್ಪನ್ನಗಳ ಮೇಲೆ ಅಮೆರಿಕವು ಶೇ 50ರಷ್ಟು ಸುಂಕ ವಿಧಿಸಿರುವ ಸಂದರ್ಭದಲ್ಲಿ ಈ ವಿನಾಯಿತಿಯ ನೆರವು ಜವಳಿ ವಲಯಕ್ಕೆ ದೊರೆತಿದೆ. ಹತ್ತಿ ಪೂರೈಕೆ ಕೊರತೆಯನ್ನು ನಿವಾರಿಸಲು ಹಾಗೂ ಬೆಲೆಯಲ್ಲಿ ಸ್ಥಿರತೆ ತರುವ ಉದ್ದೇಶದಿಂದ ಕೇಂದ್ರ ಸರ್ಕಾರವು ಆಮದು ಸುಂಕವನ್ನು ಶೂನ್ಯಕ್ಕೆ ಇಳಿಸಿದೆ ಎಂದು ಜಿಟಿಆರ್‌ಐ ಅಭಿಪ್ರಾಯಪಟ್ಟಿದೆ.
- **2023–24ರಲ್ಲಿ ಹತ್ತಿಯ ಆಮದು 579.2 ಮಿಲಿಯನ್ ಡಾಲರ್ (ಅಂದಾಜು ₹5,041 ಕೋಟಿ) ಇದ್ದಿದ್ದು ಪ್ರಸಕ್ತ ಹಣಕಾಸು ವರ್ಷದಲ್ಲಿ ಶೇ 107.4ರಷ್ಟು ಹೆಚ್ಚಳ ಕಂಡು 1.20 ಬಿಲಿಯನ್ ಡಾಲರ್‌ಗೆ (ಅಂದಾಜು ₹10,446 ಕೋಟಿ) ತಲುಪಿದೆ.**
- ಕಳೆದ ವರ್ಷ **ಭಾರತಕ್ಕೆ ಹತ್ತಿ ಪೂರೈಕೆ ಮಾಡಿದ ಪ್ರಮುಖ ದೇಶಗಳ ಸಾಲಿನಲ್ಲಿ ಆಸ್ಟ್ರೇಲಿಯಾ, ಅಮೆರಿಕ, ಬ್ರೆಜಿಲ್ ಮತ್ತು ಈಜಿಪ್ಟ್ ಇವೆ.**
- ‘ಕಚ್ಚಾ ವಸ್ತು ಖರೀದಿಗೆ ಹೆಚ್ಚಿನ ಮೊತ್ತ ವಿನಿಯೋಗಿಸುತ್ತಿರುವ ಹತ್ತಿ ಗಿರಣಿಗಳಿಗೆ ಸುಂಕ ವಿನಾಯಿತಿಯ ಕ್ರಮದಿಂದ ನೆರವಾಗಲಿದೆ. ಅಲ್ಲದೆ, ಹತ್ತಿಯ ನೂಲು ಮತ್ತು ಬಟ್ಟೆಯ ರಫ್ತುದಾರರಿಗೆ ಹಬ್ಬಗಳ ಋತುವಿನಲ್ಲಿ ಸಹಾಯ ಆಗಲಿದೆ’ ಎಂದು ಜಿಟಿಆರ್‌ಐ ಸಂಸ್ಥಾಪಕ ಅಜಯ್ ಶ್ರೀವಾಸ್ತವ ಹೇಳಿದ್ದಾರೆ. ‘ದೇಶಿ ಮಾರುಕಟ್ಟೆಗೆ ಹೊಸ ಹತ್ತಿ ಬೆಳೆ ಆವಕ ಆಗುವವರೆಗೆ ಬೆಲೆಯಲ್ಲಿ ಸ್ಥಿರತೆ ತರುವ ಉದ್ದೇಶದಿಂದ ಸಮಯಮಿತಿಯ ಈ ವಿನಾಯಿತಿಯನ್ನು ನೀಡಲಾಗಿದೆ’ ಎಂದು ವಿವರಿಸಿದ್ದಾರೆ.
- **ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ವ್ಯಾಪಾರ ಒಪ್ಪಂದದ ಅನ್ವಯ, ಅಲ್ಲಿಂದ ಭಾರತಕ್ಕೆ ಆಮದಾಗುವ 51 ಸಾವಿರ ಟನ್ ಹತ್ತಿಗೆ ಸುಂಕ ವಿನಾಯಿತಿ ಇದೆ.** ಹೀಗಾಗಿ, ಈಗಿನ ಕ್ರಮದ ಪ್ರಯೋಜನವು ಅಮೆರಿಕಕ್ಕೆ ದೊಡ್ಡ ಮಟ್ಟದಲ್ಲಿ ಸಿಗಲಿದೆ ಎಂದು ತಜ್ಞರು ಅಂದಾಜಿಸಿದ್ದಾರೆ.

Dr. Rajkumar IAS/KAS Academy

## ❖ ಆನ್‌ಲೈನ್ ಗೇಮಿಂಗ್ ನಿಯಂತ್ರಣ ಮಸೂದೆಗೆ ಅನುಮೋದನೆ

**ಸಂದರ್ಭ:**

ಆನ್‌ಲೈನ್ ಗೇಮಿಂಗ್ ವೇದಿಕೆಗಳನ್ನು ನಿಯಂತ್ರಿಸುವ ಉದ್ದೇಶದ 'ಆನ್‌ಲೈನ್ ಗೇಮಿಂಗ್ ಮಸೂದೆ' ಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ಸರ್ಕಾರದ ಮೂಲಗಳು ಹೇಳಿವೆ.


- 'ಆನ್‌ಲೈನ್ ಗೇಮಿಂಗ್ ಉತ್ತೇಜನ ಮತ್ತು ನಿಯಂತ್ರಣ ಮಸೂದೆ-2025' ಅನ್ನು ಸಂಸತ್‌ನಲ್ಲಿ ಮಂಡಿಸುವ ಸಾಧ್ಯತೆ ಇದೆ ಎಂದು ಮೂಲಗಳು ಹೇಳಿವೆ.

## ❖ ಶೂಟಿಂಗ್: ಭಾಕರ್‌ಗೆ ಕಂಚು

**ಸಂದರ್ಭ:**

ಒಲಿಂಪಿಕ್ ಅವಳಿ ಪದಕ ವಿಜೇತೆ ಮನು ಭಾಕರ್ ಅವರು ಇಲ್ಲಿ ನಡೆಯುತ್ತಿರುವ ಏಷ್ಯನ್ ಶೂಟಿಂಗ್ ಚಾಂಪಿಯನ್‌ಷಿಪ್‌ನ ಮಹಿಳೆಯರ 10 ಮೀಟರ್ ಏರ್ ಪಿಸ್ತೂಲ್ ಸ್ಪರ್ಧೆಯಲ್ಲಿ ಕಂಚಿನ ಪದಕ ಗೆದ್ದರು. ಜೂನಿಯರ್ ವಿಭಾಗದಲ್ಲಿ ರಶ್ಮಿಕಾ ಸೆಹಗಲ್ ಚಾಂಪಿಯನ್ ಆಗಿ ಹೊರಹೊಮ್ಮಿದರು.


- ಎಂಟು ಶೂಟರ್‌ಗಳನ್ನು ಒಳಗೊಂಡ ಫೈನಲ್ ಸುತ್ತಿನಲ್ಲಿ 23 ವರ್ಷದ ಭಾಕರ್ 219.7 ಪಾಯಿಂಟ್ಸ್ ನೊಂದಿಗೆ ಮೂರನೇ ಸ್ಥಾನ ಗಳಿಸಿದರು. ಚೀನಾದ ಕ್ವಿಯಾಂಕೆ ಮಾ (243.2) ಮತ್ತು ಕೊರಿಯಾದ ಜಿಯಿನ್ ಯಂಗ್ (241.6) ಕ್ರಮವಾಗಿ ಚಿನ್ನ ಮತ್ತು ಬೆಳ್ಳಿ ಪದಕ ಗೆದ್ದರು.

## ❖ ಎಸ್‌ಸಿಗೆ ಶಾಶ್ವತ ಆಯೋಗ: ಒಳ ಮೀಸಲಾತಿ ಜಾರಿ: ಸಿದ್ದರಾಮಯ್ಯ ಘೋಷಣೆ

**ಸಂದರ್ಭ:**

ಪರಿಶಿಷ್ಟ ಜಾತಿಗಳಲ್ಲಿ ಒಳ ಮೀಸಲಾತಿ ಕಲ್ಪಿಸುವ ತೀರ್ಮಾನವನ್ನು ವಿಧಾನಮಂಡಲದ ಉಭಯ ಸದನಗಳಲ್ಲಿ ಬುಧವಾರ ಘೋಷಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, 'ಪರಿಶಿಷ್ಟ ಜಾತಿಗಳ ಶಾಶ್ವತ ಆಯೋಗ ' ರಚಿಸಲಾಗುವುದು ಎಂದೂ ಪ್ರಕಟಿಸಿದರು.




- '101 ಪರಿಶಿಷ್ಟ ಜಾತಿಗಳನ್ನು 'ಎ' , 'ಬಿ' , 'ಸಿ' ಎಂದು ಮೂರು ಪ್ರವರ್ಗ ಗಳಾಗಿ ವಿಂಗಡಿಸಲು ತೀರ್ಮಾನಿಸಿದ್ದೇವೆ. ಎಡಗೈ ಸಂಬಂಧಿತ ಜಾತಿಗಳಿರುವ 'ಎ' ಪ್ರವರ್ಗಕ್ಕೆ ಶೇ 6, ಬಲಗೈ ಸಂಬಂಧಿತ ಜಾತಿಗಳಿರುವ 'ಬಿ' ಪ್ರವರ್ಗಕ್ಕೆ ಶೇ 6 ಹಾಗೂ 'ಸಿ' ಪ್ರವರ್ಗಕ್ಕೆ ಶೇ 5ರಷ್ಟು ಒಳ ಮೀಸಲಾತಿ ನೀಡಲು ನಿರ್ಣಯಿಸಿದ್ದೇವೆ' ಎಂದರು.
- 'ಪರಿಶಿಷ್ಟ ಜಾತಿಗಳಲ್ಲಿನ ಚಲನಶೀಲತೆ ಹಾಗೂ ಲಭ್ಯವಾಗುವ ದತ್ತಾಂಶಗಳನ್ನು ಪರಿಶೀಲಿಸಿ, ಕಾಲಕಾಲಕ್ಕೆ ಈ ಜಾತಿಗಳ ಸ್ಥಿತಿಗತಿ ಅಧ್ಯಯನ ಮಾಡಿ ವರದಿ ನೀಡಲು ಪರಿಶಿಷ್ಟ ಜಾತಿಗಳ ಶಾಶ್ವತ ಆಯೋಗ ರಚಿಸಲಾಗುವುದು. ಒಳ ಮೀಸಲಾತಿಯ ಕುರಿತಂತೆ ಆದೇಶ ಹೊರಡಿಸಿದ ಕೂಡಲೇ ನೇಮಕಾತಿ ಪ್ರಕ್ರಿಯೆಗಳನ್ನು ಆರಂಭಿಸಲಾಗುವುದು. ಅಲ್ಲದೆ, ಒಂದು ಬಾರಿಗೆ ವಯೋಮಿತಿ ಸಡಿಲಿಸಲಾಗುವುದು. ಒಳ ಮೀಸಲಾತಿ ಹೋರಾಟಗಾರರ ಮೇಲಿನ ಮೊಕದ್ದಮೆ ಹಿಂಪಡೆಯಲಾಗು ವುದು' ಎಂದೂ ತಿಳಿಸಿದರು.
- 'ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಕಲ್ಪಿಸಲು ಸರ್ಕಾರ ರಚಿಸಿದ್ದ ನಿವೃತ್ತ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನದಾಸ್ ನೇತೃತ್ವದ ಆಯೋಗವು, ಪರಿಶಿಷ್ಟ ಜಾತಿಗಳನ್ನು 'ಎ' , 'ಬಿ' , 'ಸಿ' , 'ಡಿ' , 'ಇ' ಎಂದು ಐದು ಪ್ರವರ್ಗಗಳಾಗಿ ವಿಂಗಡಿಸಿ ಶಿಫಾರಸು ಮಾಡಿತ್ತು. ಸುಪ್ರೀಂ ಕೋರ್ಟ್ ತೀರ್ಪಿನಲ್ಲಿದ್ದ ತತ್ವಗಳನ್ನು ಗಮನದಲ್ಲಿ ಇಟ್ಟುಕೊಂಡು ಕೆಲವು ಮಾರ್ಪಾಡುಗಳೊಂದಿಗೆ ಈ ಶಿಫಾರಸು ಗಳನ್ನು ಅಂಗೀಕರಿಸಲಾಗಿದೆ' ಎಂದರು.
- 'ಪರಿಶಿಷ್ಟ ಜಾತಿ ಪಟ್ಟಿಯಲ್ಲಿರುವ ಎಲ್ಲ ಜಾತಿಗಳಿಗೆ ಶಿಕ್ಷಣ, ಉದ್ಯೋಗ ಮತ್ತು ಇತರೆ ವಿಷಯಗಳಲ್ಲಿ ಅವಕಾಶಗಳನ್ನು ಒದಗಿಸುವಾಗ ಸಮಾನತೆ ಮತ್ತು ನ್ಯಾಯ ಸಮ್ಮತಿಯನ್ನು ಖಚಿತಪಡಿಸಿಕೊಳ್ಳುವ ದೃಷ್ಟಿಯಿಂದ ಈ ಮಾರ್ಪಾಡುಗಳನ್ನು ಮಾಡಲಾಗಿದೆ' ಎಂದು ಮುಖ್ಯಮಂತ್ರಿ ಸಮರ್ಥನೆ ನೀಡಿದರು.
- 'ಸದ್ಯ ತೆಗೆದುಕೊಂಡಿರುವ ತೀರ್ಮಾ ನದಲ್ಲಿ ಯಾವುದಾದರೂ ಬದಲಾವ ಣೆಯ ಅಗತ್ಯ ಕಂಡುಬಂದರೆ ಮುಂದೆ ನಡೆಯಲಿರುವ ರಾಷ್ಟ್ರೀಯ ಜನ ಗಣತಿ ಯಲ್ಲಿನ ಅಂಕಿ-ಅಂಶ ಆಧರಿಸಿ ಬದಲಾ ವಣೆಗೆ ಒಳಪಡಿಸುವ ಷರತ್ತಿಗೆ ಸರ್ಕಾರ ಬದ್ಧವಾಗಿದೆ' ಎಂದೂ ಹೇಳಿದರು.

## ❖ ಆರೋಗ್ಯ, ಜೀವ ವಿಮೆಗೆ ಜಿಎಸ್‌ಟಿ ವಿನಾಯಿತಿ?

**ಸಂದರ್ಭ:**

ವ್ಯಕ್ತಿಗಳು ಖರೀದಿಸುವ ಜೀವ ವಿಮೆ ಹಾಗೂ ಆರೋಗ್ಯ ವಿಮೆಗೆ ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ವ್ಯವಸ್ಥೆಯ ಅಡಿಯಲ್ಲಿ ವಿನಾಯಿತಿ ನೀಡುವ ಪ್ರಸ್ತಾವವನ್ನು ಕೇಂದ್ರ ಸರ್ಕಾರವು ಸಿದ್ಧಪಡಿಸಿದೆ ಎಂದು ಜಿಎಸ್‌ಟಿ ಮಂಡಳಿಯ ವಿಮೆ ಕುರಿತ ಸಚಿವರ ಗುಂಪಿನ ಸಂಚಾಲಕ ಸಾಮ್ರಾಟ್ ಚೌಧರಿ ಹೇಳಿದ್ದಾರೆ.

- ಈಗ **ಆರೋಗ್ಯ ವಿಮೆ ಹಾಗೂ ಜೀವ ವಿಮೆಗೆ ಜಿಎಸ್‌ಟಿ ಅಡಿಯಲ್ಲಿ ಶೇ 18ರಷ್ಟು ತೆರಿಗೆ ವಿಧಿಸಲಾಗುತ್ತಿದೆ.** ಜಿಎಸ್‌ಟಿ ಮಂಡಳಿಯ ವಿಮೆ ಕುರಿತ ಸಚಿವರ ಗುಂಪು ಸಭೆ ನಡೆಸಿತು.
- ಕೇಂದ್ರದ ಪ್ರಸ್ತಾವವನ್ನು ಬಹುತೇಕ ಎಲ್ಲ ರಾಜ್ಯಗಳು ಬೆಂಬಲಿಸಿವೆ. ಆದರೆ, ಜಿಎಸ್‌ಟಿ ಅಡಿಯಲ್ಲಿ ನೀಡುವ ವಿನಾಯಿತಿಯು ಗ್ರಾಹಕರಿಗೆ ನೇರವಾಗಿ ವರ್ಗಾವಣೆ ಆಗುವಂತಹ ಮಾರ್ಗವೊಂದನ್ನು ರೂಪಿಸುವಂತೆ ರಾಜ್ಯಗಳು ಹೇಳಿವೆ ಎಂದು ಗುಂಪಿನ ಸದಸ್ಯ ಹಾಗೂ ತೆಲಂಗಾಣದ ಉಪ ಮುಖ್ಯಮಂತ್ರಿ
- ‘ಜೀವ ವಿಮೆ ಹಾಗೂ ಆರೋಗ್ಯ ವಿಮೆ ಮೇಲಿನ ತೆರಿಗೆಯನ್ನು ಕಡಿಮೆ ಮಾಡಬೇಕು ಅಥವಾ ಅವುಗಳಿಗೆ ತೆರಿಗೆಯಿಂದ ವಿನಾಯಿತಿ ಕೊಡಬೇಕು ಎಂದು ರಾಜ್ಯಗಳು ಬಯಸಿದ್ದವು. ತೆರಿಗೆ ವಿನಾಯಿತಿಯ ಪ್ರಯೋಜನವನ್ನು ಗ್ರಾಹಕರಿಗೆ ವರ್ಗಾವಣೆ ಮಾಡುವುದಕ್ಕೆ ಸಂಬಂಧಿಸಿದ ಮಾರ್ಗೋಪಾಯ ವನ್ನು ಜಿಎಸ್‌ಟಿ ಮಂಡಳಿಯು ಕಂಡು ಕೊಳ್ಳಲಿದೆ’ ಎಂದು ವಿಕ್ರಮಾರ್ಕ ತಿಳಿಸಿದ್ದಾರೆ.
- ವ್ಯಕ್ತಿಗಳು ಖರೀದಿಸುವ ಈ ವಿಮೆಗಳಿಗೆ ಜಿಎಸ್‌ಟಿ ವಿನಾಯಿತಿ ನೀಡಿದರೆ ವಾರ್ಷಿಕ ವರಮಾನ ನಷ್ಟ ₹9,700 ಕೋಟಿ ಆಗಬಹುದು ಎಂಬ ಅಂದಾಜು ಇದೆ ಎಂದು ಹೇಳಿದ್ದಾರೆ.
- ಕೇಂದ್ರ ಸರ್ಕಾರದ ಪ್ರಸ್ತಾವವು ಸ್ಪಷ್ಟವಾಗಿದೆ. ವ್ಯಕ್ತಿಗಳು ಖರೀದಿಸುವ ವಿಮೆಗಳಿಗೆ ಜಿಎಸ್‌ಟಿ ವಿನಾಯಿತಿ ಇರಬೇಕು ಎಂದು ಅದು ಹೇಳುತ್ತದೆ. ಇದರ ಬಗ್ಗೆ ಚರ್ಚೆ ಆಗಿದೆ. ಸಚಿವರ ಗುಂಪು ತನ್ನ ವರದಿಯನ್ನು ಜಿಎಸ್‌ಟಿ ಮಂಡಳಿಗೆ ಸಲ್ಲಿಸಲಿದೆ. ಅದರಲ್ಲಿ ಕೆಲವು ರಾಜ್ಯಗಳ ಹಣಕಾಸು ಸಚಿವರು ವ್ಯಕ್ತಪಡಿಸಿರುವ ಕಳವಳಗಳೂ ದಾಖಲಾಗಲಿವೆ ಎಂದು ಬಿಹಾರದ ಉಪ ಮುಖ್ಯಮಂತ್ರಿ ಕೂಡ ಆಗಿರುವ ಚೌಧರಿ ತಿಳಿಸಿದ್ದಾರೆ.
- ತೆರಿಗೆ ಪ್ರಮಾಣ ಕಡಿಮೆ ಮಾಡಲು ಎಲ್ಲ ಸದಸ್ಯರು ಒಪ್ಪಿದ್ದಾರೆ ಎಂದು ಅವರು ಹೇಳಿದ್ದಾರೆ. ಆರೋಗ್ಯ ಹಾಗೂ ಜೀವ ವಿಮೆಗೆ ಸಂಬಂಧಿಸಿದ ಸಚಿವರ ಗುಂಪನ್ನು ಕಳೆದ ವರ್ಷದ ಸೆಪ್ಟೆಂಬರ್‌ನಲ್ಲಿ ರಚಿಸಲಾಗಿದೆ. ಈ ವಿಮೆಗಳಿಗೆ ಎಷ್ಟು ತೆರಿಗೆ ನಿಗದಿ ಮಾಡಬೇಕು ಎಂಬ ಬಗ್ಗೆ ಈ ಗುಂಪು ಸಲಹೆ ನೀಡಬೇಕಿದೆ.

## ❖ ಕೆರೆ ಸಂರಕ್ಷಣೆ ಮಸೂದೆಗೆ ಅಸ್ತು

**ಸಂದರ್ಭ:**

ಕೆರೆಗಳ ಬಫರ್ ಝೋನ್ ಕಡಿಮೆ ಮಾಡಲು ಅವಕಾಶ ಮಾಡಿಕೊಡುವ ‘ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಮಸೂದೆ’ ಯನ್ನು ವಿಧಾನ ಪರಿಷತ್ತಿನಲ್ಲಿ ಅಂಗೀಕರಿಸಲಾಯಿತು.

- ಸಭಾ ನಾಯಕ ಎನ್.ಎಸ್.ಬೋಸರಾಜು ಮಸೂದೆ ಮಂಡಿಸಿದರು. ‘ಬೆಂಗಳೂರು, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಸಣ್ಣ ಜಲಮೂಲಗಳ ಸಂರಕ್ಷಣೆಯ ಜತೆಗೆ ಅಭಿವೃದ್ಧಿ ಚಟುವಟಿಕೆಗಳನ್ನೂ ನಡೆಸಲು ಬಫರ್ ವಲಯವನ್ನು ಕಡಿಮೆ ಮಾಡಬೇಕು ಎಂಬ ಒತ್ತಾಯವಿತ್ತು’ ಎಂದರು.
- ಬೆಂಗಳೂರು ವ್ಯಾಪ್ತಿಯ ಕೆರೆಗಳ ಬಫರ್ ವಲಯವನ್ನು ಕಡಿಮೆ ಮಾಡುವುದಕ್ಕೆ ವಿರೋಧ ಪಕ್ಷಗಳ ಸದಸ್ಯರು ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಈ ತಿದ್ದುಪಡಿಯಿಂದ ರಿಯಲ್ ಎಸ್ಟೇಟ್ ಉದ್ಯಮಿಗಳಿಗೆ ಅನುಕೂಲವಾಗುತ್ತದೆ. ಕೆರೆಗಳು ಹಾಳಾಗುತ್ತವೆ ಎಂದು ಕಳವಳ ವ್ಯಕ್ತಪಡಿಸಿದರು. ಸಚಿವ ಬೋಸರಾಜು ಅವರು ನೀಡಿದ ಉತ್ತರಗಳಿಗೆ ತೃಪ್ತರಾಗದ ಸದಸ್ಯರು, ‘ಬೆಂಗಳೂರಿನ ಕೆರೆಗಳಿಗೆ ಸಂಬಂಧಿಸಿದ ಸೆಕ್ಷನ್

ಗಳನ್ನು ವಾಪಸ್ ಪಡೆಯಬೇಕು. ಇಲ್ಲವೇ ಮಸೂದೆಯನ್ನು ಜಂಟಿ ಸದನ ಸಮಿತಿಗೆ ಒಪ್ಪಿಸಬೇಕು' ಎಂದು ಒತ್ತಾಯಿಸಿದರು.

ಆರೋಗ್ಯ ಸಿಬ್ಬಂದಿಗೆ ಕೌನ್ಸೆಲಿಂಗ್ ಮೂಲಕವಷ್ಟೇ ವರ್ಗಾವಣೆ

- ವಿಧಾನಸಭೆಯಲ್ಲಿ ಅಂಗೀಕಾರವಾಗಿದ್ದ 'ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿ ವರ್ಗಾವಣೆ ನಿಯಂತ್ರಣ) ತಿದ್ದುಪಡಿ ಮಸೂದೆಯನ್ನು ವಿಧಾನಪರಿಷತ್ ಅಂಗೀಕರಿಸಿತು. ಆರೋಗ್ಯ ಇಲಾಖೆಯ ಸಿಬ್ಬಂದಿಯನ್ನು ಕೌನ್ಸೆಲಿಂಗ್ ಮೂಲಕ ಮಾತ್ರ ವರ್ಗಾವಣೆ ಮಾಡಲು ಈ ಮಸೂದೆ ಅವಕಾಶ ಮಾಡಿಕೊಡುತ್ತದೆ.
- ಬೆಂಗಳೂರು ನಗರದಲ್ಲಿ ದೀರ್ಘಾವಧಿ ಸೇವೆಯಲ್ಲಿ ಇರುವವರನ್ನು ಹೊರಜಿಲ್ಲೆಗಳಿಗೆ, ತಜ್ಞ ವೈದ್ಯರನ್ನು ತಜ್ಞರ ಹುದ್ದೆಗಳಿಗಷ್ಟೇ ವರ್ಗಾವಣೆ ಮಾಡಲು ಅವಕಾಶ ಮಾಡಿಕೊಡುವ ಅಂಶಗಳು ಮಸೂದೆಯಲ್ಲಿವೆ.

## ❖ ಸಂವಿಧಾನ (130ನೇ ತಿದ್ದುಪಡಿ) ಮಸೂದೆ



ಸತತ 30 ದಿನ ಜೈಲುವಾಸಕ್ಕೆ ಒಳಗಾದರೆ ಪ್ರಧಾನಿ, ರಾಜ್ಯ/ಕೇಂದ್ರಾಡಳಿತ ಪ್ರದೇಶಗಳ ಮುಖ್ಯಮಂತ್ರಿ ಮತ್ತು ಸಚಿವರನ್ನು ಹುದ್ದೆಯಿಂದ ವಜಾ ಮಾಡಲು ಅವಕಾಶ ಕಲ್ಪಿಸುವ ಮೂರು ಮಸೂದೆಗಳನ್ನು ಕೇಂದ್ರ ಸರ್ಕಾರವು ಲೋಕಸಭೆಯಲ್ಲಿ ಮಂಡಿಸಿದೆ. ಜನರ ಆಶಯ ಮತ್ತು ಆಶೋತ್ತರಗಳನ್ನು ಪ್ರತಿನಿಧಿಸುವ ಜನಪ್ರತಿನಿಧಿಗಳು ರಾಜಕೀಯ ಹಿತಾಸಕ್ತಿ ಮೀರಿ ಕೆಲಸ ಮಾಡುವ ದಿಸೆಯಲ್ಲಿ ಕಾಯ್ದೆ ರೂಪಿಸಲು ಮುಂದಾಗಿದ್ದೇವೆ ಎಂದು ಕೇಂದ್ರ ಸರ್ಕಾರ ಪ್ರತಿಪಾದಿಸಿದೆ. ಆದರೆ, ವಿರೋಧ ಪಕ್ಷಗಳು ಮಸೂದೆಗಳಿಗೆ ತೀವ್ರ ವಿರೋಧ ವ್ಯಕ್ತಪಡಿಸಿವೆ. ಕೇಂದ್ರ ಸರ್ಕಾರದ ವಿವಿಧ ಸಂಸ್ಥೆಗಳನ್ನು ಬಳಸಿ ಚುನಾಯಿತ ಸರ್ಕಾರಗಳನ್ನು ಅಸ್ಥಿರಗೊಳಿಸುವ ಪ್ರಯತ್ನ ಇದಾಗಿದ್ದು, ಇದು ಅಸಾಂವಿಧಾನಿಕ ಎಂದು ಆರೋಪಿಸಿವೆ

# ಸಂವಿಧಾನ (130ನೇ ತಿದ್ದುಪಡಿ) ಮಸೂದೆ

# ವಿಪಕ್ಷಗಳ ವಿರೋಧ ಏಕೆ?

ಕೇಂದ್ರ ಸರ್ಕಾರವು ಪ್ರಧಾನಿ, ಮುಖ್ಯಮಂತ್ರಿ ಮತ್ತು ಕೇಂದ್ರ, ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶಗಳ ಸಚಿವರನ್ನು ಹುದ್ದೆಯಿಂದ ಪದಚ್ಯುತಿಗೊಳಿಸಲು ಸಾಧ್ಯವಾಗುವಂತಹ ಮೂರು ಮಸೂದೆಗಳನ್ನು ಲೋಕಸಭೆಯಲ್ಲಿ ಮಂಡಿಸಿದೆ. ಸಂವಿಧಾನ (130ನೇ ತಿದ್ದುಪಡಿ) ಮಸೂದೆ 2025, ಕೇಂದ್ರಾಡಳಿತ ಸರ್ಕಾರ ತಿದ್ದುಪಡಿ ಮಸೂದೆ, ಜಮ್ಮು ಮತ್ತು ಕಾಶ್ಮೀರ ಪುನರ್‌ರಚನೆ ತಿದ್ದುಪಡಿ ಮಸೂದೆ–2025 ಅನ್ನು ಗೃಹ ಸಚಿವ ಅಮಿತ್ ಶಾ ಅವರು ಮಂಡಿಸಿದ್ದಾರೆ.

ನೈತಿಕತೆ, ಉತ್ತಮ ಆಡಳಿತ ಮತ್ತು ಸಾರ್ವಜನಿಕ ನಂಬಿಕೆಯನ್ನು ಎತ್ತಿಹಿಡಿಯುವ ಉದ್ದೇಶದಿಂದ ಈ ಮಸೂದೆಗಳನ್ನು ಮಂಡಿಸಲಾಗಿದೆ; ಜನಪ್ರತಿನಿಧಿಗಳು ರಾಜಕೀಯ ಹಿತಾಸಕ್ತಿ ಮೀರಿ, ಅನುಮಾನಕ್ಕೆ ಆಸ್ಪದವಿಲ್ಲದಂತೆ ವರ್ತಿಸಬೇಕು; ಈ ದಿಸೆಯಲ್ಲಿ ಸಂವಿಧಾನಕ್ಕೆ ತಿದ್ದುಪಡಿ ತರಲು ಮುಂದಾಗಿರುವುದಾಗಿ ಕೇಂದ್ರ ಸರ್ಕಾರವು ಪ್ರತಿಪಾದಿಸಿದೆ. ಆದರೆ, ವಿರೋಧ ಪಕ್ಷಗಳು ಕಾಯ್ದೆ ದುರ್ಬಳಕೆಯಾಗುವ ಬಗ್ಗೆ ಆತಂಕ ವ್ಯಕ್ತಪಡಿಸಿವೆ. ಮಸೂದೆಯ ಹಿಂದೆ, ರಾಜ್ಯ ಸರ್ಕಾರಗಳನ್ನು ಅಭದ್ರಗೊಳಿಸುವ ನರೇಂದ್ರ ಮೋದಿ ಸರ್ಕಾರದ ತಂತ್ರಗಾರಿಕೆ ಮತ್ತು ಪಿತೂರಿ ಅಡಗಿದೆ ಎಂದು ವಿರೋಧ ಪಕ್ಷಗಳು ಆರೋಪಿಸಿವೆ.

### ವಿರೋಧ ಪಕ್ಷಗಳು ಹೇಳುವುದೇನು?

- ಮಸೂದೆಗಳು ತೀವ್ರ ತುರ್ತುಪರಿಸ್ಥಿತಿಯತ್ತ (ಸೂಪರ್ ಎಮರ್ಜೆನ್ಸಿ) ಇಟ್ಟಿರುವ ಹೆಜ್ಜೆಯಾಗಿದ್ದು, ಭಾರತದಲ್ಲಿ ಎಂದೆಂದಿಗೂ ಪ್ರಜಾಪ್ರಭುತ್ವವನ್ನು ಅಂತ್ಯಗೊಳಿಸುವ ಪ್ರಯತ್ನವಾಗಿದೆ
- ಸರ್ಕಾರದ ಮುಖ್ಯ ಹುದ್ದೆಗಳಲ್ಲಿರುವವರು 30 ದಿನ ಜೈಲುವಾಸ ಅನುಭವಿಸಿದರೆ, ವಿಚಾರಣೆಯ ಹಂತದಲ್ಲೇ ಅವರನ್ನು ಪದಚ್ಯುತಗೊಳಿಸಲು ಮಸೂದೆಯು ಅವಕಾಶ ನೀಡುತ್ತದೆ. ಆದರೆ, ನ್ಯಾಯಾಲಯದಲ್ಲಿ ಅಪರಾಧಿ ಎಂದು ಸಾಬೀತಾಗುವವರೆಗೆ ಅವರು ಕೇವಲ ಆರೋಪಿ ಆಗಿರುತ್ತಾರೆ ಎನ್ನುವುದು ನಮ್ಮ ಸಂವಿಧಾನದ ಮುಖ್ಯ ಅಂಶವಾಗಿದೆ. ಹಾಗಾಗಿ ಈ ಮಸೂದೆ ಸಂವಿಧಾನ ವಿರೋಧಿ
- ಇದು ಅಧಿಕಾರ ವಿಭಜನೆಯ ನಿಯಮಕ್ಕೆ ವಿರುದ್ಧವಾಗಿದ್ದು, ಕಾರ್ಯಾಂಗವೇ ನ್ಯಾಯಾಂಗದಂತೆ ತೀರ್ಪು ನೀಡುವ ಸಂದರ್ಭ ಸೃಷ್ಟಿಗೆ ಕಾರಣವಾಗುತ್ತದೆ. ಚುನಾಯಿತ ಸರ್ಕಾರದ ಮೇಲೆ ಪ್ರಯೋಗಿಸಲಾಗುವ ಮಾರಣಾಂತಿಕ ಪ್ರಹಾರವಾಗಲಿದೆ. ದೇಶದಲ್ಲಿ ಪೊಲೀಸ್ ಪ್ರಭುತ್ವ ಸ್ಥಾಪಿಸಲು ಈ ತಿದ್ದುಪಡಿ ತರಲಾಗುತ್ತಿದೆ
- ಯಾವುದೇ ಸರ್ಕಾರ ಯಾವುದೇ ಸಚಿವರ ಬಗ್ಗೆಯಾದರೂ ಪ್ರಕರಣಗಳನ್ನು ದಾಖಲಿಸಬಹುದು. ಪ್ರಸ್ತುತ, ತನಿಖಾ ಸಂಸ್ಥೆಗಳಾದ ಜಾರಿ ನಿರ್ದೇಶನಾಲಯ, ಸಿಬಿಐ ಅತ್ಯಂತ ವಿವಾದಾಸ್ಪದವಾಗಿವೆ. ಈ ಸಂಸ್ಥೆಗಳು ವಿರೋಧ ಪಕ್ಷಗಳು ಅಧಿಕಾರದಲ್ಲಿರುವ ಯಾವುದೇ ರಾಜ್ಯದ ಮುಖ್ಯಮಂತ್ರಿ ಅಥವಾ ಸಚಿವರ ಬಗ್ಗೆ ಬೇಕಿದ್ದರೂ ವಿಚಾರಣೆ ಆರಂಭಿಸಬಹುದು, ಆ ಪ್ರಕರಣಗಳಿಗೆ ಸಂಬಂಧಿಸಿ ಅವರನ್ನು ಜೈಲಿಗೆ ಕಳುಹಿಸಬಹುದು. ಇದು ಕಾನೂನಿನ ಸಹಜ ನ್ಯಾಯದ ತತ್ವಗಳಿಗೆ ವಿರುದ್ಧ
- ದಮನಕಾರಿ ಉದ್ದೇಶದ ಈ ಮಸೂದೆ ಎಲ್ಲ ತತ್ವಗಳಿಗೂ ವಿರುದ್ಧವಾದುದಾಗಿದೆ. ಇದನ್ನು ಭ್ರಷ್ಟಾಚಾರ ವಿರುದ್ಧದ ಕ್ರಮ ಎಂದು ಪ್ರತಿಪಾದಿಸುತ್ತಿರುವುದು ಒಂದು ತಂತ್ರವಷ್ಟೇ. ಪಕ್ಷಪಾತದಿಂದ ಕೂಡಿದ ಕೇಂದ್ರ ತನಿಖಾ ಸಂಸ್ಥೆಗಳನ್ನು ಬಳಸಿ, ಅಧಿಕಾರದಲ್ಲಿರುವವರನ್ನು ಮನಬಂದಂತೆ ಬಂಧಿಸಿ, ಹುದ್ದೆಯಿಂದ ಕೆಳಗಿಳಿಸುವ ತಂತ್ರ ಇದರ ಹಿಂದಿದೆ
- ಆರ್‌ಎಸ್‌ಎಸ್ ನಿಯಂತ್ರಿತ ಕೇಂದ್ರ ಸರ್ಕಾರವು ಚುನಾಯಿತ ರಾಜ್ಯ ಸರ್ಕಾರಗಳನ್ನು ದುರ್ಬಲಗೊಳಿಸಿದ ಇತಿಹಾಸ ನೋಡಿದರೆ, ಅತ್ಯುನ್ನತ ಮಟ್ಟದಲ್ಲಿ ಅಪರಾಧ ತಡೆಗಟ್ಟುವ ನೆಪದಲ್ಲಿ ಮಂಡಿಸಲಾಗಿರುವ ಮಸೂದೆಗಳ ನಿಜವಾದ ಉದ್ದೇಶ ಏನು ಎನ್ನುವುದು ತಿಳಿಯುತ್ತದೆ. ಮತದಾರರ ಪಟ್ಟಿಯ ವಿಶೇಷ, ಸಮಗ್ರ ಪರಿಷ್ಕರಣೆಯೊಂದಿಗೆ (ಎಸ್‌ಐಆರ್) ಪ್ರಜಾಪ್ರಭುತ್ವವನ್ನು ಬುಡಮೇಲು ಮಾಡುವ ಪ್ರಯತ್ನವೂ ನಡೆಯುತ್ತಿದೆ
- ಇ.ಡಿ., ಸಿಬಿಐ, ಆದಾಯ ತೆರಿಗೆ ಇಲಾಖೆ, ಎನ್‌ಐಎ ಮುಂತಾದ ಕೇಂದ್ರದ ತನಿಖಾ ಸಂಸ್ಥೆಗಳನ್ನು ಆಯುಧಗಳನ್ನಾಗಿ ಬಳಸಿಕೊಂಡು, ರಾಜ್ಯಪಾಲರ ಕಚೇರಿಯನ್ನು ದುರ್ಬಳಕೆ ಮಾಡಿಕೊಂಡು ಕೇಂದ್ರ ಸರ್ಕಾರವು ನಡೆಸಿದ ಸಂಕುಚಿತ, ಪಕ್ಷಪಾತದಿಂದ ಕೂಡಿದ ಕೃತ್ಯಗಳನ್ನು ಹಲವು ಸಂದರ್ಭಗಳಲ್ಲಿ ಸುಪ್ರೀಂ ಕೋರ್ಟ್ ಕೂಡ ಖಂಡಿಸಿದೆ. ಪ್ರಸ್ತುತ ಮಸೂದೆಗಳ ಮೂಲಕ ಅದಕ್ಕೆ ಕಾನೂನಿನ ಮಾನ್ಯತೆ ನೀಡುವ ಪ್ರಯತ್ನ ನಡೆಯುತ್ತಿದೆ
- ತನ್ನ ಸಾಂವಿಧಾನಿಕ ಜವಾಬ್ದಾರಿಗಳನ್ನು ನಿರ್ವಹಿಸುವ ಬದಲು ಈ ಸರ್ಕಾರವು ಉತ್ತರದಾಯಿತ್ವ ಇಲ್ಲದ ಅಧಿಕಾರ, ಸಂಪತ್ತು ಮತ್ತು ನಿಯಂತ್ರಣವನ್ನು ಗಳಿಸುವುದರಲ್ಲಿ ಮಗ್ನವಾಗಿದೆ

ಎಐ ಚಿತ್ರ: ಹಳೇಮನಿ

ಆಧಾರ: ಪಿಟಿಐ, ಮಾಧ್ಯಮ ವರದಿಗಳು

ಹುದ್ದೆಯಿಂದ ವಜಾ ಆದವರು ಕಸ್ಟಡಿಯಿಂದ ಬಿಡುಗಡೆಯಾದ ನಂತರ ಮತ್ತೆ ಪ್ರಧಾನಿ, ಕೇಂದ್ರ ಸಚಿವ, ರಾಜ್ಯಗಳಲ್ಲಿ ಮುಖ್ಯಮಂತ್ರಿ, ಸಚಿವರಾಗಿ ನೇಮಕಗೊಳ್ಳುವುದನ್ನು ಈ ತಿದ್ದುಪಡಿಗಳು ತಡೆಯುವುದಿಲ್ಲ. ಅಂದರೆ, ಸತತ 30 ದಿನ ಕಸ್ಟಡಿಯಲ್ಲಿದ್ದ ಕಾರಣಕ್ಕೆ ಅಧಿಕಾರ ಕಳೆದುಕೊಂಡವರು ಜೈಲಿನಿಂದ ಹೊರ ಬಂದವರು ಮೇಲೆ ಮತ್ತೆ ಅದೇ ಹುದ್ದೆಗೆ ಏರಬಹುದು

### ಮಸೂದೆಯಲ್ಲೇನಿದೆ?

- **ಸಂವಿಧಾನ (130ನೇ ತಿದ್ದುಪಡಿ) ಮಸೂದೆಯು ಸಂವಿಧಾನದ 75, 164 ಮತ್ತು 239ಎಎ ವಿಧಿಗಳಿಗೆ ತಿದ್ದುಪಡಿ ತರುವ ಉದ್ದೇಶ ಹೊಂದಿದೆ**

ಕೇಂದ್ರ ಸಚಿವ ಸಂಪುಟಕ್ಕೆ ಪ್ರಧಾನಿ ಸೇರಿದಂತೆ ಸಚಿವರ ನೇಮಕ ಮತ್ತು ಅವರ ಜವಾಬ್ದಾರಿಗಳನ್ನು 75ನೇ ವಿಧಿಯು ವಿವರಿಸುತ್ತದೆ. 164ನೇ ವಿಧಿಯು ರಾಜ್ಯಗಳಲ್ಲಿ ಮುಖ್ಯಮಂತ್ರಿ ಹಾಗೂ ಸಚಿವರ ನೇಮಕ ಪ್ರಕ್ರಿಯೆ ಹಾಗೂ ಅವರ ಹೊಣೆಗಾರಿಕೆಗಳೇನು ಎಂಬುದನ್ನು ತಿಳಿಸುತ್ತದೆ. 239ಎಎ ವಿಧಿಯು ರಾಷ್ಟ್ರೀಯ ರಾಜಧಾನಿ ದೆಹಲಿಯ ಆಡಳಿತಕ್ಕೆ ಸಂಬಂಧಿಸಿದಂತೆ ವಿಶೇಷ ಅವಕಾಶಗಳನ್ನು ಕಲ್ಪಿಸುತ್ತದೆ. 1991ರಲ್ಲಿ ಈ ವಿಧಿಯನ್ನು ಸಂವಿಧಾನಕ್ಕೆ ಸೇರ್ಪಡೆಗೊಳಿಸಲಾಗಿದ್ದು, ದೆಹಲಿಯಲ್ಲಿ ವಿಧಾನಸಭೆ ಸ್ಥಾಪನೆ ಮತ್ತು ಸಚಿವ ಸಂಪುಟ ರಚನೆಯ ಅಧಿಕಾರ ನೀಡಿದೆ. ಪೊಲೀಸ್, ಸಾರ್ವಜನಿಕ ಸುವ್ಯವಸ್ಥೆ ಮತ್ತು ಭೂಮಿಗೆ ಸಂಬಂಧಿಸಿದ ವಿಷಯಗಳನ್ನು ಬಿಟ್ಟು, ಉಳಿದ ವಿಚಾರಗಳಲ್ಲಿ ದೆಹಲಿಗೆ ಸೀಮಿತವಾಗಿ ಕಾನೂನುಗಳನ್ನು ರೂಪಿಸುವ ಅಧಿಕಾರವನ್ನು ಇದು ದೆಹಲಿಯ ವಿಧಾನಸಭೆಗೆ ನೀಡಿದೆ.

- **75ನೇ ವಿಧಿಯ 5ನೇ ಪರಿಚ್ಛೇದ (ಕ್ಲಾಸ್) ನಂತರ 5ಎ ಎಂಬ ಹೊಸ ಪರಿಚ್ಛೇದ ಸೇರ್ಪಡೆಗೊಳಿಸಲು ಈ ಮಸೂದೆ ಪ್ರಸ್ತಾಪಿಸುತ್ತದೆ**

ಅದರ ಪ್ರಕಾರ, ಐದು ವರ್ಷ ಮತ್ತು ಅದಕ್ಕಿಂತ ಹೆಚ್ಚು ಅವಧಿಗೆ ಜೈಲು ಶಿಕ್ಷೆಗೆ ಅವಕಾಶ ಇರುವ ಅಪರಾಧ ಎಸಗಿರುವ ಆರೋಪದಲ್ಲಿ ಕೇಂದ್ರ ಸಚಿವರೊಬ್ಬರು ಬಂಧನಕ್ಕೆ ಒಳಪಟ್ಟು, ಸತತ 30 ದಿನ ಕಸ್ಟಡಿಯಲ್ಲಿದ್ದರೆ ಪ್ರಧಾನಿ ಅವರ ಶಿಫಾರಸಿನ ಅನ್ವಯ 31ನೇ ದಿನ ಆ ಸಚಿವರನ್ನು ರಾಷ್ಟ್ರಪತಿ ಅವರು ಹುದ್ದೆಯಿಂದ ವಜಾ ಮಾಡಬಹುದು.

ಒಂದು ವೇಳೆ, ಪ್ರಧಾನಿಯವರು 31ನೇ ದಿನ ಆ ಸಚಿವರನ್ನು ವಜಾಗೊಳಿಸುವಂತೆ ರಾಷ್ಟ್ರಪತಿ ಅವರಿಗೆ ಶಿಫಾರಸು ಮಾಡದಿದ್ದರೂ 32ನೇ ದಿನ ಸಚಿವರು ತಮ್ಮ ಹುದ್ದೆಯನ್ನು ತನ್ನಿಂತಾನೆ ಕಳೆದುಕೊಳ್ಳುತ್ತಾರೆ. ಪ್ರಧಾನಿಯಾಗಿದ್ದವರಿಗೂ ಇದೇ ನಿಯಮ ಅನ್ವಯವಾಗುತ್ತದೆ. 31ನೇ ದಿನ ಅವರಾಗಿಯೇ ತಮ್ಮ ಹುದ್ದೆಗೆ ರಾಜೀನಾಮೆ ನೀಡದಿದ್ದರೆ ಮರುದಿನದಿಂದ ಅನ್ವಯವಾಗುವಂತೆ ಅವರು ಪ್ರಧಾನಿ ಹುದ್ದೆಯನ್ನು ಕಳೆದುಕೊಳ್ಳುತ್ತಾರೆ

- **ರಾಜ್ಯಗಳ ಮಟ್ಟದಲ್ಲಿ ಮುಖ್ಯಮಂತ್ರಿಗಳು ಮತ್ತು ಸಚಿವರು ಅಪರಾಧ ಪ್ರಕರಣದಲ್ಲಿ ಸಿಲುಕಿ ಸತತ 30 ದಿನ ಕಸ್ಟಡಿಯಲ್ಲಿದ್ದರೆ, ಅವರನ್ನು ಹುದ್ದೆಯಿಂದ ತೆರವುಗೊಳಿಸುವುದಕ್ಕಾಗಿ ಸಂವಿಧಾನದ 164ನೇ ವಿಧಿಯ 4ನೇ ಪರಿಚ್ಛೇದದ ನಂತರ ಹೊಸದಾಗಿ 4ಎ ಪರಿಚ್ಛೇದ ಸೇರ್ಪಡೆಗೊಳಿಸುವ ಬಗ್ಗೆ ತಿದ್ದುಪಡಿ ಮಸೂದೆ ಪ್ರಸ್ತಾಪಿಸುತ್ತದೆ.**

ಕೇಂದ್ರ ಸಚಿವರು ಮತ್ತು ಪ್ರಧಾನಿ ಅವರಿಗೆ ಅನ್ವಯವಾಗುವ ನಿಯಮವೇ ರಾಜ್ಯಗಳಲ್ಲಿ ಮುಖ್ಯಮಂತ್ರಿ ಹಾಗೂ ಸಚಿವರಿಗೂ ಅನ್ವಯವಾಗುತ್ತದೆ. ಕೇಂದ್ರ ಸಚಿವರ ವಿಚಾರದಲ್ಲಿ ಪ್ರಧಾನಿ ಅವರು ಸಚಿವರ ವಜಾಕ್ಕೆ ರಾಷ್ಟ್ರಪತಿಯವರಿಗೆ ಶಿಫಾರಸು ಮಾಡಿದರೆ, ರಾಜ್ಯಗಳಲ್ಲಿ ಮುಖ್ಯಮಂತ್ರಿಯವರು ರಾಜ್ಯಪಾಲರಿಗೆ ಶಿಫಾರಸು ಮಾಡುತ್ತಾರೆ. ಒಂದುವೇಳೆ, ಶಿಫಾರಸು ಮಾಡದಿದ್ದರೂ, ಕಸ್ಟಡಿಯಲ್ಲಿರುವ ಸಚಿವರು ಅಧಿಕಾರ ಕಳೆದುಕೊಳ್ಳುತ್ತಾರೆ. ಮುಖ್ಯಮಂತ್ರಿಯವರು ಕೂಡ ರಾಜೀನಾಮೆ ನೀಡದೇ ಇದ್ದರೂ ಹುದ್ದೆಯನ್ನು ಕಳೆದುಕೊಳ್ಳುತ್ತಾರೆ

- **ದೆಹಲಿಗೆ ಸಂಬಂಧಿಸಿದ 239ಎಎ ವಿಧಿಯ ಪರಿಚ್ಛೇದ 5ರ ನಂತರ '5ಎ' ಎಂಬ ಹೊಸ ಪರಿಚ್ಛೇದ ಸೇರಿಸಲು ಈ ಮಸೂದೆ ಅವಕಾಶ ನೀಡುತ್ತದೆ. ಕೇಂದ್ರ ಹಾಗೂ ರಾಜ್ಯಗಳಿಗೆ ಅನ್ವಯವಾಗುವ ನಿಯಮಗಳೇ ಇಲ್ಲಿಗೂ ಅನ್ವಯವಾಗುತ್ತವೆ.**
- **ಇನ್ನುಳಿದ ಎರಡು ಮಸೂದೆಗಳು ಕೇಂದ್ರಾಡಳಿತ ಪ್ರದೇಶಗಳು ಹಾಗೂ ಜಮ್ಮು ಮತ್ತು ಕಾಶ್ಮೀರಕ್ಕೆ ಸಂಬಂಧಿಸಿದವು. ಮುಖ್ಯಮಂತ್ರಿ ಹಾಗೂ ಸಚಿವರನ್ನು ವಜಾ ಗೊಳಿಸಲು ಕೇಂದ್ರಾಡಳಿತ ಪ್ರದೇಶಗಳ ಕಾಯ್ದೆ 1963 ಹಾಗೂ ಜಮ್ಮು ಮತ್ತು ಕಾಶ್ಮೀರ ಪುನರ್‌ರಚನೆ ಕಾಯ್ದೆ–2019ಕ್ಕೆ ತಿದ್ದುಪಡಿ ತರಲು ಈ ಮಸೂದೆಗಳಲ್ಲಿ ಪ್ರಸ್ತಾಪಿಸಲಾಗಿದೆ**

### ದುರ್ಬಳಕೆಯ ಆತಂಕ

ಈ ಮಸೂದೆಯು ಕಾಯ್ದೆಯಾಗಿ ಜಾರಿಯಾದರೆ, ಕೇಂದ್ರದಲ್ಲಿ ಆಡಳಿತದಲ್ಲಿರುವ ಪಕ್ಷವು ರಾಜ್ಯಗಳಲ್ಲಿ ಅಥವಾ ಕೇಂದ್ರಾಡಳಿತ ಪ್ರದೇಶಗಳಲ್ಲಿ ಅಧಿಕಾರದಲ್ಲಿರುವ ವಿರೋಧ ಪಕ್ಷಗಳ ಸರ್ಕಾರಗಳನ್ನು ಉರುಳಿಸಲು ಅಥವಾ ತನ್ನ ರಾಜಕೀಯ ದ್ವೇಷ ಸಾಧನೆಗಾಗಿ ಇದನ್ನು ದುರ್ಬಳಕೆ ಮಾಡಿಕೊಳ್ಳಬಹುದು ಎಂದು ಹೇಳಲಾಗುತ್ತಿದೆ.

ಅಪರಾಧ ಪ್ರಕರಣಗಳಲ್ಲಿ ಆರೋಪಿಯಾಗಿ ತಿಂಗಳಿಗಿಂತಲೂ ಹೆಚ್ಚು ಸಮಯ ಜೈಲಿನಲ್ಲಿದ್ದರೂ ಮುಖ್ಯಮಂತ್ರಿ, ಸಚಿವರಾಗಿ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡದೆ, ಜೈಲಿನಿಂದಲೇ ಅಧಿಕಾರ ನಡೆಸಿದ ಉದಾಹರಣೆಗಳಿವೆ.

ದೆಹಲಿಯ ಹಿಂದಿನ ಮುಖ್ಯಮಂತ್ರಿ ಕೇಜ್ರಿವಾಲ್ ಅವರು ಜೈಲಿನಲ್ಲಿದ್ದುಕೊಂಡೇ ಆರು ತಿಂಗಳಿಗಿಂತಲೂ ಹೆಚ್ಚು ಸಮಯ ಆಡಳಿತ ನಡೆಸಿದ್ದರು. ಅಬಕಾರಿ ಹಗರಣದಲ್ಲಿ ಕೇಜ್ರಿವಾಲ್ ಅವರು 2024ರ ಮಾರ್ಚ್‌ನಲ್ಲಿ ಬಂಧನಕ್ಕೆ ಒಳಗಾಗಿದ್ದರು. ಜಾಮೀನಿನ ಮೇಲೆ ಬಿಡುಗಡೆಗೊಂಡ ನಂತರ ಸೆಪ್ಟೆಂಬರ್‌ನಲ್ಲಿ ಅವರು ತಮ್ಮ ಹುದ್ದೆಗೆ ರಾಜೀನಾಮೆ ನೀಡಿದ್ದರು. ದೆಹಲಿಯ ಎಎಪಿ ಸರ್ಕಾರದಲ್ಲಿ ಸಚಿವರಾಗಿದ್ದ ಸತ್ಯೇಂದ್ರ ಜೈನ್ ಅವರನ್ನು ಹಣ ಅಕ್ರಮ ವರ್ಗಾವಣೆ ಪ್ರಕರಣ ಸಂಬಂಧ 2022ರಲ್ಲಿ ಜಾರಿ ನಿರ್ದೇಶನಾಲಯ ಬಂಧಿಸಿತ್ತು. ಬಂಧನದ ನಂತರವೂ ಒಂಬತ್ತು ತಿಂಗಳು ಅವರು ಕೇಜ್ರಿವಾಲ್ ಸಂಪುಟಕ್ಕೆ ರಾಜೀನಾಮೆ ನೀಡಿರಲಿಲ್ಲ.

### ಅಂಗೀಕಾರ ಸಾಧ್ಯತೆ ಕ್ಷೀಣ

ಬುಧವಾರ ಮಂಡಿಸಲಾದ ಮೂರು ಮಸೂದೆಗಳಲ್ಲಿ ಸಂವಿಧಾನ ತಿದ್ದುಪಡಿ ಮಸೂದೆ ಬಿಟ್ಟು ಉಳಿದೆರಡು ಸಾಮಾನ್ಯ ಮಸೂದೆಗಳು. ಆದರೆ, ಸಂವಿಧಾನ ತಿದ್ದುಪಡಿ ಮಸೂದೆ ಅಂಗೀಕಾರವಾದರಷ್ಟೇ ಉಳಿದವುಗಳಿಗೆ ಮೌಲ್ಯ. ಸಂವಿಧಾನ ತಿದ್ದುಪಡಿ ಮಸೂದೆ ಅಂಗೀಕಾರವಾಗಲು ಸಂಸತ್ತಿನಲ್ಲಿ ಮೂರನೇ ಎರಡರಷ್ಟು ಮತ ಅಗತ್ಯ. ಲೋಕಸಭೆ ಮತ್ತು ರಾಜ್ಯಸಭೆಗಳಲ್ಲಿ ಪ್ರತ್ಯೇಕವಾಗಿ ಮಸೂದೆಯನ್ನು ಅಂಗೀಕರಿಸಬೇಕು. ಅದಕ್ಕೆ ಬಹುಮತ ಬೇಕು. ಅಲ್ಲದೇ, ಮಸೂದೆಯನ್ನು ಮತಕ್ಕೆ ಹಾಕುವಾಗ ಸದನಗಳಲ್ಲಿ ಹಾಜರಿರುವ ಸದಸ್ಯರು ಮೂರನೇ ಎರಡಷ್ಟು ಬಹುಮತದಲ್ಲಿ ಅಂಗೀಕರಿಸಬೇಕು. ಒಕ್ಕೂಟ ವ್ಯವಸ್ಥೆಗೆ ಸಂಬಂಧಿಸಿದ ಉಲ್ಲೇಖಗಳು ಮಸೂದೆಯಲ್ಲಿದ್ದರೆ, ರಾಜ್ಯ ಶಾಸನಸಭೆಗಳು ಇದಕ್ಕೆ ಒಪ್ಪಿಗೆ ನೀಡಬೇಕು. ದೇಶದಲ್ಲಿರುವ ಒಟ್ಟು ವಿಧಾನಸಭೆಗಳು ಬಹುಮತದಿಂದ (ಅರ್ಧಕ್ಕೂ ಹೆಚ್ಚು ವಿಧಾನಸಭೆಗಳು) ತಿದ್ದುಪಡಿಯನ್ನು ಅನುಮೋದಿಸಬೇಕು. ರಾಷ್ಟ್ರಪತಿಯವರ ಅಂಕಿತವೂ ಬೇಕು. ಸದ್ಯ, ಲೋಕಸಭೆಯಲ್ಲಿ ಎನ್‌ಡಿಎಗೆ ಮೂರನೇ ಎರಡರಷ್ಟು ಬಹುಮತ ಇಲ್ಲ. ಹೀಗಾಗಿ, ಈ ಮಸೂದೆ ಅಂಗೀಕಾರಗೊಳ್ಳುವ ಸಾಧ್ಯತೆ ಕ್ಷೀಣ ಎಂದು ಹೇಳಲಾಗುತ್ತಿದೆ.

## ❖ ಆನ್‌ಲೈನ್ ಗೇಮ್ ನಿಷೇಧ ಮಸೂದೆ ಅಂಗೀಕಾರ

**ಸಂದರ್ಭ:**

ಹಣ ಕಟ್ಟಿ ಆಡಲಾಗುವ ಆನ್‌ಲೈನ್ ಗೇಮ್‌ಗಳನ್ನು ನಿಷೇಧಿಸುವ ಮಸೂದೆಯನ್ನು ಲೋಕಸಭೆಯಲ್ಲಿ ಅಂಗೀಕರಿಸಲಾಯಿತು.

- ಆನ್‌ಲೈನ್ ಗೇಮ್ ಆಡುವುದನ್ನು ವ್ಯಸನವನ್ನಾಗಿ ಮಾಡಿಕೊಳ್ಳುತ್ತಿರುವ ವರ ಸಂಖ್ಯೆ ಹೆಚ್ಚುತ್ತಿದೆ. ಆನ್‌ಲೈನ್ ಗೇಮಿಂಗ್ ಆ್ಯಪ್‌ಗಳ ಮೂಲಕ ಹಣ ಅಕ್ರಮ ವರ್ಗಾವಣೆ ಹಾಗೂ ಹಣಕಾಸು ವಂಚನೆ ಪ್ರಕರಣಗಳು ಹೆಚ್ಚುತ್ತಿರುವುದಕ್ಕೆ ಕಡಿವಾಣ ಹಾಕುವ ಉದ್ದೇಶದಿಂದ ಕೇಂದ್ರ ಸರ್ಕಾರ ಈ ಮಸೂದೆ ಸಿದ್ಧಪಡಿಸಿದೆ. ಧ್ವನಿಮತದ ಮೂಲಕ ಮಸೂದೆಯನ್ನು ಅಂಗೀಕರಿಸಲಾಯಿತು.



**ಮಸೂದೆಯ ಪ್ರಮುಖ ಅಂಶಗಳು**

- ಆನ್‌ಲೈನ್ ಬೆಟ್ಟಿಂಗ್‌ನಂತಹ ಚಟುವಟಿಕೆಗಳನ್ನು ನಿಷೇಧಿಸುವುದು, ಅವುಗಳ ಕಾರ್ಯಾಚರಣೆ, ಉತ್ತೇಜಿಸುವುದು ಹಾಗೂ ಜಾಹೀರಾತು ಪ್ರಕಟಿಸುವುದನ್ನು ನಿಷೇಧಿಸುವ ಅವಕಾಶಗಳನ್ನು ಮಸೂದೆ ಒಳಗೊಂಡಿದೆ
- ಮನರಂಜನಾ ಕ್ರೀಡೆಗಳಿಂದ ಹಿಡಿದು ಆನ್‌ಲೈನ್ ಜೂಜಾಟ (ಪೋಕರ್, ರಮ್ಮಿ ಮತ್ತು ಇಸ್ಪೀಟ್ ಕಾರ್ಡ್‌ಗಳನ್ನು ಒಳಗೊಂಡ ಆಟಗಳು) ಹಾಗೂ ಆನ್‌ಲೈನ್ ಲಾಟರಿಗಳನ್ನು ನಿಷೇಧಿಸುವ ಅವಕಾಶಗಳಿವೆ
- ಹಣ ಕಟ್ಟಿ ಆಡುವ ಆಟಗಳ ಕುರಿತು ಜಾಹೀರಾತು ಪ್ರಕಟಿಸಿದಲ್ಲಿ, 2 ವರ್ಷಗಳ-ವರೆಗೆ ಜೈಲು ಮತ್ತು ₹50 ಲಕ್ಷ ವರೆಗೆ ದಂಡ ಅಥವಾ ಎರಡೂ ಶಿಕ್ಷೆ ವಿಧಿಸಲು ಅವಕಾಶ ಇದೆ
- ಆನ್‌ಲೈನ್ ಗೇಮ್ ಆಡುವುದಕ್ಕೆ ಅವಕಾಶ ನೀಡುವವರಿಗೆ/ಪ್ರೋತ್ಸಾಹ ನೀಡುವವರಿಗೆ ಗರಿಷ್ಠ 3 ವರ್ಷ ಜೈಲುಶಿಕ್ಷೆ ಅಥವಾ ₹1 ಕೋಟಿ ವರೆಗೆ ದಂಡ ಇಲ್ಲವೇ ಎರಡನ್ನೂ ವಿಧಿಸಬಹುದಾಗಿದೆ
- ಅಪರಾಧಗಳ ಪುನರಾವರ್ತನೆ ಕಂಡುಬಂದಲ್ಲಿ 3ರಿಂದ 5 ವರ್ಷ ಜೈಲು ಮತ್ತು ₹2 ಕೋಟಿ ವರೆಗೆ ದಂಡ ವಿಧಿಸಬಹುದಾಗಿದೆ

- ‘ಕಳವಳಕಾರಿ ಸಂಗತಿ’ : ‘ಆನ್‌ಲೈನ್ ಗೇಮಿಂಗ್ (ಉತ್ತೇಜನ ಮತ್ತು ನಿಯಂತ್ರಣ) ಮಸೂದೆ,2025’ ಅನ್ನು ಮಂಡಿಸಿ ಮಾತನಾಡಿದ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಅವರು ಮಸೂದೆಯಲ್ಲಿನ ಅವಕಾಶಗಳ ಕುರಿತು ಸದನಕ್ಕೆ ಸಂಕ್ಷಿಪ್ತ ಮಾಹಿತಿ ನೀಡಿದರು.
- ‘ಹಣ ಬಳಸಿ ಆನ್‌ಲೈನ್ ಗೇಮ್‌ಗಳನ್ನು ಆಡುವುದು ಹೆಚ್ಚುತ್ತಿದ್ದು, ಇದು ಕಳವಳಕಾರಿ ಸಂಗತಿ. ಈ ಗೇಮ್‌ಗಳನ್ನು ಆಡುವುದು ಒಂದು ವ್ಯಸನವಾಗುತ್ತಿದೆ. ವಂಚನೆಗೂ ಈ ವೇದಿಕೆಗಳನ್ನು ಬಳಸಲಾಗುತ್ತಿದೆ ’ ಎಂದು ಹೇಳಿದರು. ಆಗ, ವಿಪಕ್ಷಗಳ ಸದಸ್ಯರು ತಮ್ಮ ಬೇಡಿಕೆ ಮುಂದಿಟ್ಟುಕೊಂಡು ಪ್ರತಿಭಟಿಸಲು ಆರಂಭಿಸಿದರು.
- ‘ಆನ್‌ಲೈನ್ ಗೇಮ್‌ಗಳು ನೂರಾರು ಕುಟುಂಬಗಳ ನಾಶಕ್ಕೆ ಕಾರಣವಾಗಿವೆ. ಯುವ ಜನತೆಯ ಭವಿಷ್ಯವನ್ನು ಹಾಳುಮಾಡಿವೆ. ಹೀಗಾಗಿ, ಮಸೂದೆ ಕುರಿತ ಚರ್ಚೆಯಲ್ಲಿ ಪಾಲ್ಗೊಳ್ಳಬೇಕು’ ಎಂದು ವಿಪಕ್ಷಗಳ ಸದಸ್ಯರಿಗೆ ಸ್ಪೀಕರ್ ಓಂ ಬಿರ್ಲಾ ಮನವಿ ಮಾಡಿದರು.

## ❖ ಮೂಲಸೌಕರ್ಯ ವಲಯ ಪ್ರಗತಿ ಇಳಿಕೆ

**ಸಂದರ್ಭ:**

ಪ್ರಮುಖ ಎಂಟು ಮೂಲಸೌಕರ್ಯ ವಲಯಗಳ ಬೆಳವಣಿಗೆ ಜುಲೈ ತಿಂಗಳಿನಲ್ಲಿ ಎರಡು ತಿಂಗಳ ಕನಿಷ್ಠ ಮಟ್ಟಕ್ಕೆ ಇಳಿಕೆ ಆಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

- ಜೂನ್‌ನಲ್ಲಿ ವಲಯದ ಪ್ರಗತಿ ಶೇ 2.2ರಷ್ಟಿತ್ತು. ಅದು ಜುಲೈನಲ್ಲಿ ಶೇ 2ಕ್ಕೆ ಇಳಿದಿದೆ. ಕಳೆದ ವರ್ಷದ ಇದೇ ತಿಂಗಳಿನಲ್ಲಿ ಇದು ಶೇ 6.3ರಷ್ಟಿತ್ತು ಎಂದು ತಿಳಿಸಿದೆ.
- ಕಲ್ಲಿದ್ದಲು, ಕಚ್ಚಾತೈಲ, ನೈಸರ್ಗಿಕ ಅನಿಲ ಮತ್ತು ಸಂಸ್ಕರಿಸಿದ ಉತ್ಪನ್ನಗಳ ಉತ್ಪಾದನೆಯಲ್ಲಿ ಇಳಿಕೆ ಆಗಿದೆ. ಇದೇ ಬೆಳವಣಿಗೆ ಇಳಿಕೆಗೆ ಕಾರಣವಾಗಿದೆ ಎಂದು ತಿಳಿಸಿದೆ.
- ರಸಗೊಬ್ಬರ, ವಿದ್ಯುತ್ ಉತ್ಪಾದನೆ ಕ್ರಮವಾಗಿ ಶೇ 2 ಮತ್ತು ಶೇ 0.5ರಷ್ಟು ಏರಿಕೆ ಕಂಡಿವೆ. ಆದರೆ, ಕಳೆದ ಇದೇ ಜುಲೈನಲ್ಲಿ ಶೇ 5.3 ಮತ್ತು ಶೇ 7.9ರಷ್ಟು ಏರಿಕೆ ಆಗಿತ್ತು. ಉಕ್ಕು ಮತ್ತು ಸಿಮೆಂಟ್ ಉತ್ಪಾದನೆ ಕ್ರಮವಾಗಿ ಶೇ 12.8 ಮತ್ತು ಶೇ 11.7ರಷ್ಟು ಏರಿಕೆ ಕಂಡಿವೆ.

## ❖ ಗ್ರಾ.ಪಂ ಸದಸ್ಯರಿಗೂ ಷೇರು ಹೂಡಿಕೆ ತರಬೇತಿ

**ಸಂದರ್ಭ:**

ದೇಶದಾದ್ಯಂತ 2.5 ಲಕ್ಷ ಗ್ರಾಮ ಪಂಚಾಯಿತಿಗಳ ಸದಸ್ಯರಿಗೆ 'ಹೂಡಿಕೆ ಶಿಕ್ಷಣ' ನೀಡುವ ಗುರಿಯೊಂದಿಗೆ, ಪಂಚಾಯತ್ ರಾಜ್ ಸಚಿವಾಲಯವು, ಭಾರತೀಯ ಷೇರುಪೇಟೆ ನಿಯಂತ್ರಣ ಮಂಡಳಿ (ಸೆಬಿ) ಸಹಯೋಗದಲ್ಲಿ ರಾಷ್ಟ್ರವ್ಯಾಪಿ ತರಬೇತಿ ಕಾರ್ಯಕ್ರಮವೊಂದನ್ನು ರೂಪಿಸಿದೆ.

- ಈ ತರಬೇತಿಯಡಿ ಗ್ರಾಮ ಪಂಚಾಯಿತಿ ಸದಸ್ಯರಿಗೆ ಮತ್ತು ಪಂಚಾಯತ್ ರಾಜ್ ಬ್ಲಾಕ್ ಮಟ್ಟದ ಸಿಬ್ಬಂದಿಗೆ ಷೇರುಪೇಟೆ ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಬಂಡವಾಳ ತೊಡಗಿಸುವ ಕುರಿತು ತರಬೇತಿ ನೀಡಲು ಉದ್ದೇಶಿಸಲಾಗಿದೆ.
- ಇತ್ತೀಚಿನ ವರ್ಷಗಳಲ್ಲಿ ಷೇರುಪೇಟೆಯಲ್ಲಿ ಬಂಡವಾಳ ತೊಡಗಿಸುವವರ ಸಂಖ್ಯೆ ಗಣನೀಯವಾಗಿ ಹೆಚ್ಚುತ್ತಿದೆ. ಆದರೆ, ಇದರಲ್ಲಿ ಗ್ರಾಮೀಣರ ಸಹಭಾಗಿತ್ವ ಕಡಿಮೆ ಇದೆ. ಗ್ರಾಮೀಣ ಮಟ್ಟದಲ್ಲಿ ಹಣಕಾಸು ಸಾಕ್ಷರತೆ ಹೆಚ್ಚಿಸಿ, ಸುರಕ್ಷಿತ ಹೂಡಿಕೆ ಪ್ರೋತ್ಸಾಹಿಸುವುದರ ಭಾಗವಾಗಿ ಈ ಕಾರ್ಯಕ್ರಮವನ್ನು ಜಾರಿಗೆ ತರಲಾಗಿದೆ.
- ಈಗಾಗಲೇ ಪುಣೆಯಲ್ಲಿ ಮಹಾರಾಷ್ಟ್ರದ ವಿವಿಧ ಜಿಲ್ಲೆಗಳ 100ಕ್ಕೂ ಹೆಚ್ಚು ಗ್ರಾಮ ಪಂಚಾಯಿತಿಗಳ ಅಧ್ಯಕ್ಷರಿಗೆ ಮತ್ತು ಬ್ಲಾಕ್ ಮಟ್ಟದ ಪ್ರತಿನಿಧಿಗಳಿಗೆ ತರಬೇತಿ ನೀಡಲಾಗಿದೆ. ತರಬೇತಿ ಪಡೆದ ಪಂಚಾಯಿತಿ ಅಧ್ಯಕ್ಷರನ್ನು 'ಹಣಕಾಸು ಸಾಕ್ಷರತೆ ರಾಯಭಾರಿ' ಯಾಗಿ ಪರಿಗಣಿಸಲಾಗುವುದು ಎಂದು ಪಂಚಾಯತ್ ರಾಜ್ ಸಚಿವಾಲಯದ ಪ್ರಕಟಣೆ ತಿಳಿಸಿದೆ.

## ❖ 'ಶಕ್ತಿ ಕೇಂದ್ರ' ಗಳ ಮಧ್ಯೆ ಸೌಹಾರ್ದ ಇದೆಯೇ'

**ಸಂದರ್ಭ:**

'ಸಂವಿಧಾನ ರಚನಕಾರರ ಕಲ್ಪನೆಯಂತೆ ರಾಜ್ಯಪಾಲರು ಹಾಗೂ ಸಂಬಂಧಪಟ್ಟ ರಾಜ್ಯ ಸರ್ಕಾರಗಳ ನಡುವೆ ಸೌಹಾರ್ದ ಸಂಬಂಧ ಇದೆಯೇ' ಎಂದು ಸುಪ್ರಿಂ ಕೋರ್ಟ್ ಪ್ರಶ್ನಿಸಿದೆ.

- ಮುಖ್ಯನ್ಯಾಯಮೂರ್ತಿ ಬಿ.ಆರ್.ಗವಾಯಿ ನೇತೃತ್ವದ ಐವರು ಸದಸ್ಯರು ಇರುವ ಸಂವಿಧಾನ ಪೀಠವು, ರಾಜ್ಯಪಾಲರ ನೇಮಕ ಮತ್ತು ಅಧಿಕಾರ ಕುರಿತು ಸಂವಿಧಾನ ರಚನಾಸಭೆಯಲ್ಲಿ ನಡೆದ ಚರ್ಚೆಗಳನ್ನು ಉಲ್ಲೇಖಿಸಿ, ಕೇಂದ್ರದ ಪರ ಹಾಜರಿದ್ದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರಿಗೆ ಈ ಪ್ರಶ್ನೆ ಕೇಳಿದೆ.
- ನ್ಯಾಯಮೂರ್ತಿ ಗಳಾದ ಸೂರ್ಯಕಾಂತ್, ವಿಕ್ರಮನಾಥ್, ಪಿ.ಎಸ್. ನರಸಿಂಹ ಹಾಗೂ ಎ.ಎಸ್ .ಚಂದೂರ್ಕರ್ ಅವರು ಈ ಪೀಠದಲ್ಲಿದ್ದಾರೆ.
- ಶಾಸನಸಭೆಗಳಲ್ಲಿ ಅಂಗೀಕಾರ ಗೊಂಡ ಮಸೂದೆಗಳಿಗೆ ಅಂಕಿತ ಹಾಕುವುದಕ್ಕೆ ರಾಷ್ಟ್ರಪತಿ ಹಾಗೂ ರಾಜ್ಯಪಾಲರಿಗೆ ಕಾಲಮಿತಿ ನಿಗದಿ ಮಾಡುವುದಕ್ಕೆ ಸಂಬಂಧಿಸಿ ರಾಷ್ಟ್ರಪತಿ ಅವರು ಸುಪ್ರೀಂ ಕೋರ್ಟ್ ಸಲಹೆ ಕೇಳಿದ್ದಾರೆ. ಈ ಕುರಿತಂತೆ ವಿಚಾರಣೆ ಮುಂದುವರಿಯಿತು.
- ಇದಕ್ಕೆ ಪ್ರತಿಕ್ರಿಯಿಸಿದ ಮೆಹ್ತಾ,'ಈ ವಿಚಾರಕ್ಕೆ ಸಂಬಂಧಿಸಿ ವಿವಿಧ ಸ್ತರಗಳಲ್ಲಿ ವ್ಯಾಪಕ ಟೀಕೆಗಳು ವ್ಯಕ್ತವಾಗಿವೆ. ಇದರ ಹೊರತಾಗಿ ಅವಲೋಕಿಸಿದಾಗ, ರಾಜಕೀಯವಾಗಿ ಆಶ್ರಯ ಬೇಡುವವರಿಗಾಗಿ ರಾಜ್ಯಪಾಲರ ಹುದ್ದೆ ಸೃಷ್ಟಿಸಿಲ್ಲ. ರಾಜ್ಯಪಾಲರಿಗೆ ಇರುವ ಅಧಿಕಾರಗಳು ಹಾಗೂ ಜವಾಬ್ದಾರಿಗಳ ಕುರಿತು ಸಂವಿಧಾನದಲ್ಲಿ ಸ್ಪಷ್ಟವಾಗಿ ಹೇಳಲಾಗಿದೆ' ಎಂದು ಹೇಳಿದರು.
- 'ಸಂವಿಧಾನದಲ್ಲಿ ಉಲ್ಲೇಖಿಸಿರು ವಂತೆ ಒಕ್ಕೂಟ ವ್ಯವಸ್ಥೆಯನ್ನು ಗಮನದಲ್ಲಿ ಇಟ್ಟುಕೊಂಡೇ ರಾಜ್ಯಪಾಲರ ನೇಮಕ ಹಾಗೂ ಅವರ ಪಾತ್ರ ಕುರಿತಂತೆ ಸಂವಿಧಾನ ರಚನಾ ಸಭೆಯಲ್ಲಿ ವ್ಯಾಪಕ ಚರ್ಚೆಗಳು ನಡೆದಿವೆ' ಎಂದೂ ಮೆಹ್ತಾ ಪೀಠಕ್ಕೆ ತಿಳಿಸಿದರು.

Dr. Rajkumar IAS/KAS Academy

## ❖ ಸ್ಕೀಟ್ ಚಿನ್ನ ಗೆದ್ದ ಅನಂತಜೀತ್

**ಸಂದರ್ಭ:** ಭಾರತದ ಅನಂತಜೀತ್ ಸಿಂಗ್ ನರೂಕ ಅವರು ಏಷ್ಯನ್ ಶೂಟಿಂಗ್ ಚಾಂಪಿಯನ್‌ಷಿಪ್‌ನ ವೈಯಕ್ತಿಕ ವಿಭಾಗದಲ್ಲಿ ಮೊದಲ ಚಿನ್ನ ಗೆದ್ದುಕೊಂಡರು.

- ಪುರುಷರ ಸ್ಕೀಟ್ ಸ್ಪರ್ಧೆಯ ಫೈನಲ್‌ನಲ್ಲಿ ಅವರು ಕುವೈತ್‌ನ ಮನ್ಸೂರ್ ಅಲ್ ರಶೀದಿ ಅವರನ್ನು ಸೋಲಿಸಿದರು.
- ಭಾರತದ ಸೌರಭ್ ಚೌಧರಿ ಮತ್ತು ಉದಯೋನ್ಮುಖ ಶೂಟರ್ ಸುರುಚಿ ಇಂದರ್ ಸಿಂಗ್ ಅವರನ್ನೊಳಗೊಂಡ ತಂಡ 10 ಮೀ. ಏರ್ ಪಿಸ್ತೂಲ್ ಮಿಶ್ರ ವಿಭಾಗದಲ್ಲಿ ಚೀನಾ ತೈಪೆಯ ಎದುರಾಳಿಗಳನ್ನು ಸೋಲಿಸಿ ಕಂಚಿನ ಪದಕ ಗೆದ್ದುಕೊಂಡಿತ್ತು.
- 27 ವರ್ಷ ವಯಸ್ಸಿನ ನರೂಕ 57–56 ರಿಂದ ಏಷ್ಯನ್ ಗೇಮ್ಸ್ ಚಾಂಪಿಯನ್ ಅಲ್ ರಶೀದಿ ಅವರನ್ನು ಸೋಲಿಸಿ ಚಾಂಪಿಯನ್ ಆದರು. ಕಂಚಿನ ಪದಕ ಕತಾರ್‌ನ ಅಲ್ ಇಶಾಖ್ ಅಲಿ ಅಹ್ಮದ್ ಪಾಲಾಯಿತು.
- 2023ರ ಚಾಂಪಿಯನ್‌ಷಿಪ್‌ನಲ್ಲಿ ತಂಡ ವಿಭಾಗದಲ್ಲಿ ಮತ್ತು ಮಿಶ್ರ ವಿಭಾಗದಲ್ಲಿ ಚಿನ್ನ ಗೆದಿದ್ದ ನರೂಕಾ ಸ್ಕೀಟ್ ಸ್ಪರ್ಧೆಯ ಕ್ವಾಲಿಫೈಯಿಂಗ್ ಸುತ್ತಿನ ಬಳಿಕ 119ರ ಸ್ಕೋರ್‌ನೊಡನೆ ಎರಡನೇ ಸ್ಥಾನದಲ್ಲಿದ್ದರು. ಕುವೈತ್‌ನ ಅಬ್ದುಲಜೀಜ್ ಅಲ್ಸಾದ್ (120) ಮೊದಲಿಗರಾಗಿದ್ದರು. ಅಲ್ ರಶೀದಿ (119) ಮೂರನೇ ಸ್ಥಾನದಲ್ಲಿದ್ದರು.

## ❖ ಕ್ರೀಡಾ ಕಾಯ್ದೆಗೆ ರಾಷ್ಟ್ರಪತಿ ಅಂಕಿತ

**ಸಂದರ್ಭ:** ರಾಷ್ಟ್ರೀಯ ಕ್ರೀಡಾ ಆಡಳಿತ ಮಸೂದೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಅಂಕಿತ ಹಾಕಿದ್ದಾರೆ. ಹೀಗಾಗಿ ಈ ಕಾಯ್ದೆ ಕಾನೂನಿನ ಸ್ವರೂಪ ಪಡೆದುಕೊಂಡಿತು. ಈ ಸಂಬಂಧ ಮಂಗಳವಾರ ಗೆಜೆಟ್ ಅಧಿಸೂಚನೆ ಹೊರಡಿಸಲಾಗಿದೆ.

- ಈ ಹಿಂದೆ 2011ರ ರಾಷ್ಟ್ರೀಯ ಕ್ರೀಡಾಸಂಹಿತೆ ಜಾರಿಯಲ್ಲಿತ್ತು. ಈಗ ಜಾರಿಯಾಗುವ ಹೊಸ ಕಾನೂನಿನಡಿ ರಾಷ್ಟ್ರೀಯ ಕ್ರೀಡಾ ಮಂಡಳಿ ಮತ್ತು ರಾಷ್ಟ್ರೀಯ ಕ್ರೀಡಾ ನ್ಯಾಯಮಂಡಳಿ ಅಸ್ತಿತ್ವಕ್ಕೆ ಬರಲಿದೆ.
- ರಾಷ್ಟ್ರೀಯ ಕ್ರೀಡಾ ಮಂಡಳಿಯು, ರಾಷ್ಟ್ರೀಯ ಕ್ರೀಡಾ ಫೆಡರೇಷನ್‌ಗಳಿಗೆ ಮಾನ್ಯತೆ ನೀಡುವ ಅಥವಾ ರದ್ದುಗೊಳಿಸುವ ಅಧಿಕಾರ ಹೊಂದಿದೆ.




## ❖ ವಿಪಕ್ಷಗಳ ಪಟ್ಟು: ಸದನ ಸಮಿತಿಗೆ ಮಸೂದೆ

**ಸಂದರ್ಭ:** ಕಾರ್ಯಕ್ರಮ, ಸಮಾರಂಭಗಳಲ್ಲಿ ಜನಸಂದಣಿ ನಿಯಂತ್ರಣ ಉದ್ದೇಶದ ಮಸೂದೆ.

- ಕಾರ್ಯಕ್ರಮ ಮತ್ತು ಸಮಾರಂಭಗಳಲ್ಲಿ ಜನಸಂದಣಿ ನಿಯಂತ್ರಿಸುವ ಜೊತೆಗೆ, ಕಾನೂನುಬಾಹಿರ ವಾಗಿ ಗುಂಪುಗೂಡುವುದನ್ನು ತಡೆಯುವ ಉದ್ದೇಶದ **'ಕರ್ನಾಟಕ ಜನಸಂದಣಿ ನಿಯಂತ್ರಣ (ಕಾರ್ಯಕ್ರಮಗಳು ಮತ್ತು ಗುಂಪುಗೂಡುವ ಸ್ಥಳಗಳಲ್ಲಿ ಜನಸಂದಣಿಯ ನಿರ್ವಹಣೆ) ಮಸೂದೆ**ಯನ್ನು ವಿಧಾನಸಭೆಯ ಸದನ ಸಮಿತಿಗೆ ವಹಿಸಬೇಕೆಂಬ ವಿರೋಧ ಪಕ್ಷಗಳ ಸದಸ್ಯರ ಪಟ್ಟಿಗೆ ಸರ್ಕಾರ ಮಣಿಯಿತು.
- ಮಸೂದೆ ಮಂಡಿಸಿದ ಪರಮೇಶ್ವರ, 'ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ನಡೆದ ಕಾಲ್ತುಳಿತವೂ ಸೇರಿದಂತೆ ಹಲವೆಡೆ ಸಂಭವಿಸಿದ ಕಾಲ್ತುಳಿತ ದುರ್ಘಟನೆಯನ್ನು ಗಮನದಲ್ಲಿ ಇಟ್ಟುಕೊಂಡು ಸಾರ್ವಜನಿಕ ಹಾಗೂ ಖಾಸಗಿ ಆಸ್ತಿಗಳ ರಕ್ಷಣೆ ಹಾಗೂ ಆಯೋಜಕರನ್ನು ಜವಾಬ್ದಾರರನ್ನಾಗಿ ಮಾಡುವ ಉದ್ದೇಶದಿಂದ ಈ ಮಸೂದೆ ತರಲಾಗಿದೆ' ಎಂದರು.
- 'ಮಸೂದೆಯ ಪ್ರಕಾರ, ಆಯೋಜಕರು ಜನಸಂದಣಿ ನಿಯಂತ್ರಣ ಮತ್ತು ನಿರ್ವಹಣೆ ಪ್ರಾಧಿಕಾರದಿಂದ ಪೂರ್ವಾನುಮತಿ ಪಡೆಯು ವುದು ಕಡ್ಡಾಯ. ಏಳು ಸಾವಿರ ಜನರಗಿಂತ ಕಡಿಮೆ ಇದ್ದರೆ ಆ ವ್ಯಾಪ್ತಿಯ ಪೊಲೀಸ್ ಠಾಣೆಯ ಉಸ್ತುವಾರಿ ಅಧಿಕಾರಿ, ಏಳು ಸಾವಿರಕ್ಕಿಂತ ಹೆಚ್ಚಿದ್ದರೆ ಡಿವೈಎಸ್ಪಿ, ಬೆಂಗಳೂರಿ ನಲ್ಲಿ ಎಸಿಪಿ, 50 ಸಾವಿರಕ್ಕಿಂತ ಹೆಚ್ಚಿದ್ದರೆ ಎಸ್‌ಪಿ ಅಥವಾ ಕಮಿಷನರ್ ಅನುಮತಿ ಕೊಡಬೇಕಾಗುತ್ತದೆ. ಆಯೋಜಕರು ಕಾರ್ಯ ಕ್ರಮಕ್ಕೆ 10 ದಿನ ಮೊದಲು ಸಿದ್ಧತೆ, ನಡೆಯುವ ಜಾಗ ಸೇರಿದಂತೆ ಸಂಪೂರ್ಣ ಮಾಹಿತಿ ನೀಡಬೇಕು. ಖಾಸಗಿ ಹಾಗೂ ಸಾರ್ವಜನಿಕ ಸ್ವತ್ತಿಗೆ ಹಾನಿಯಾಗದ ರೀತಿ ಕ್ರಮ ಕೈಗೊಳ್ಳುವ ಜವಾಬ್ದಾರಿ ಹೊರಬೇಕು' ಎಂದರು.
- ಪ್ರಾಧಿಕಾರದ ಅನುಮತಿ ನೀಡುವ ಮೊದಲು ಅಗ್ನಿಶಾಮಕ, ಲೋಕೋಪಯೋಗಿ ಮತ್ತು ಆರೋಗ್ಯ ಇಲಾಖೆಯ ಅನುಮತಿ ಯನ್ನು ಆಯೋಜಕರು ಪಡೆದಿರಬೇಕು. ಸಂಬಂಧಿಸಿದ ಪ್ರಾಧಿಕಾರದ ಅಧಿಕಾರಿ ಅರ್ಜಿದಾರರಿಗೆ ಈ ಎಲ್ಲ ನಿರ್ದೇಶನಗಳನ್ನು ನೀಡಬೇಕಾಗುತ್ತದೆ ಎಂದು ಹೇಳಿದರು.
- 'ಈ ಮಸೂದೆಯಲ್ಲಿರುವ ಅಂಶಗಳು ಗೊಂದಲ ಉಂಟು ಮಾಡುವಂತಿದೆ. ಜಾತ್ರೆ, ಹಬ್ಬಗಳ ಬಗ್ಗೆ ಸ್ಪಷ್ಟತೆ ಇಲ್ಲ' ಎಂದು ಆಕ್ಷೇಪಿಸಿದ ವಿರೋಧ ಪಕ್ಷದ ನಾಯಕ ಆರ್. ಅಶೋಕ, ಬಿಜೆಪಿಯ ಎಸ್. ಸುರೇಶ್‌ಕುಮಾರ್, ವಿ. ಸುನಿಲ್‌ಕುಮಾರ್, ಸುರೇಶ್ ಗೌಡ, ಉಮಾನಾಥ ಕೋಟ್ಯಾನ್, ಬಿಜೆಪಿಯ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ ಯತ್ನಾಳ್, ಜೆಡಿಎಸ್‌ನ ಶರಣಗೌಡ ಕಂದಕೂರ ಮುಂತಾದವರು ಸದನ ಸಮಿತಿ ರಚಿಸುವಂತೆ ಪಟ್ಟು ಹಿಡಿದರು.

### ದಂಡ-ಶಿಕ್ಷೆ ಪ್ರಮಾಣ ಎಷ್ಟು?

- 'ಅನುಮತಿ ಪಡೆಯದಿದ್ದರೆ ಕಾರ್ಯಕ್ರಮದ ಆಯೋಜಕರಿಗೆ ಮೂರು ವರ್ಷದಿಂದ ಏಳು ವರ್ಷಗಳವರೆಗೆ ವಿಸ್ತರಿಸಬಹುದಾದ ಜೈಲು ಶಿಕ್ಷೆ, ₹ 1 ಕೋಟಿವರೆಗೆ ದಂಡ ಅಥವಾ ಎರಡನ್ನೂ ವಿಧಿಸಲಾಗುವುದು' ಎಂದು ಜಿ. ಪರಮೇಶ್ವರ ವಿವರಿಸಿದರು.
- ಮಸೂದೆ ಕುರಿತು ಸದನಕ್ಕೆ ವಿವರ ನೀಡಿದ ಅವರು, 'ಸುಳ್ಳು ಹೇಳಿಕೆ, ವದಂತಿಗಳ ಮೂಲಕ ಹಿಂಸಾಚಾರ, ಆಸ್ತಿ ನಷ್ಟ, ಶಾಂತಿಭಂಗಕ್ಕೆ ಪ್ರಚೋದಿಸಿದರೆ ಮೂರು ವರ್ಷಗಳ ವರೆಗೆ ವಿಸ್ತರಿಸಬಹುದಾದ ಜೈಲು, ₹ 50 ಸಾವಿರ ದಂಡ ಅಥವಾ ಎರಡನ್ನೂ ವಿಧಿಸಬಹುದು. ಪೊಲೀಸರ ನಿರ್ದೇಶನ ಉಲ್ಲಂಘಿಸಿದರೆ ಒಂದು ತಿಂಗಳ ಶಿಕ್ಷೆ, ₹ 50 ಸಾವಿರ ದಂಡ ವಿಧಿಸಲಾಗುತ್ತದೆ. ಜೊತೆಗೆ, ಸ್ವತ್ತಿಗೆ ಉಂಟಾದ ನಷ್ಟವನ್ನು ಆಯೋಜಕರು ಭರಿಸಬೇಕು. ಜೀವಹಾನಿ ಜವಾಬ್ದಾರಿಯನ್ನೂ ಹೊರಬೇಕು. 50 ಸಾವಿರ ಜನರಿಗಿಂತ ಹೆಚ್ಚಿದ್ದಾಗ ₹ 1 ಕೋಟಿ ಮೊತ್ತದ ನಷ್ಟ ಭರ್ತಿ ಬಾಂಡ್ ನೀಡಬೇಕು' ಎಂದು ಹೇಳಿದರು.

Dr. Rajkumar IAS KAS Academy

## ❖ ಸೌಹಾರ್ದ ಸಹಕಾರಿ ಮಸೂದೆಗೆ ಮತ್ತೆ ಅಂಗೀಕಾರ

**ಸಂದರ್ಭ:** ವಿಧಾನಪರಿಷತ್ತಿನಲ್ಲಿ ವಿರೋಧ ಪಕ್ಷದ ಒತ್ತಾಯದಿಂದಾಗಿ ಮತ ವಿಭಜನೆಗೆ ಹಾಕಿದ್ದರಿಂದ ಸೋಲು ಕಂಡಿದ್ದ 'ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ಮಸೂದೆ' ಯನ್ನು ವಿಧಾನಸಭೆಯಲ್ಲಿ ಪುನರ್ ಪರ್ಯಾಲೋಚನೆ ನಡೆಸಿ ಮತ್ತೆ ಅಂಗೀಕಾರ ಪಡೆಯಲಾಯಿತು.

- ವಿಧಾನಪರಿಷತ್ತಿನಿಂದ ತಿರಸ್ಕೃತರೂಪದಲ್ಲಿದ್ದ ಮಸೂದೆಯನ್ನು ಕಾನೂನು ಸಚಿವ ಎಚ್.ಕೆ. ಪಾಟೀಲ ಅವರು ಮಂಡಿಸಿದರು.
- ವಿಧಾನಪರಿಷತ್ತಿನಲ್ಲಿ ಈ ಮಸೂದೆಯ ಕುರಿತು ಸುದೀರ್ಘ ಚರ್ಚೆಯ ಬಳಿಕ ಅನುಮೋದನೆ ವೇಳೆಯಲ್ಲಿ ಆಡಳಿತ ಪಕ್ಷದ ಸದಸ್ಯರು ಕಡಿಮೆ ಇರುವುದನ್ನು ಗಮನಿಸಿದ ವಿರೋಧಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ವಿಭಜನೆ ಮತಕ್ಕೆ ಆಗ್ರಹಿಸಿದರು. ಮಸೂದೆಯನ್ನು ಮತಕ್ಕೆ ಹಾಕಿದಾಗ ಮಸೂದೆ ಪರ 23 ಮಸೂದೆ ವಿರುದ್ಧ 26 ಮತಗಳು ಚಲಾವಣೆಗೊಂಡಿದ್ದರಿಂದಾಗಿ, ಮಸೂದೆಗೆ ಸೋಲುಂಟಾಗಿತ್ತು.

## ❖ ಬಹುಮಹಡಿ ಕಟ್ಟಡಗಳಿಗೆ ಅಗ್ನಿ ಸೆಸ್ ಹೊರೆ

**ಸಂದರ್ಭ:** ರಾಜ್ಯದ ಬಹುಮಹಡಿ ಕಟ್ಟಡಗಳಿಗೆ ಶೇಕಡ 1ರಷ್ಟು ಅಗ್ನಿ ಸೆಸ್ ವಿಧಿಸಲು ಅವಕಾಶ ಮಾಡಿಕೊಡುವ 'ಕರ್ನಾಟಕ ಅಗ್ನಿಶಾಮಕ ದಳ (ತಿದ್ದುಪಡಿ) ಮಸೂದೆ-2025'ಕ್ಕೆ ವಿಧಾನ ಮಂಡಲದ ಉಭಯಸದನಗಳ ಅನುಮೋದನೆ ದೊರೆತಿದೆ.

- 21 ಮೀಟರ್‌ಗಿಂತಲೂ ಹೆಚ್ಚು ಎತ್ತರವಿರುವ ಬಹುಮಹಡಿ ಕಟ್ಟಡ ಗಳಿಗೆ, ಅವುಗಳ ತೆರಿಗೆಯ ಮೇಲೆ ಶೇ1ರಷ್ಟು ಅಗ್ನಿ ಸೆಸ್ ವಿಧಿಸಲು ಈ ಮಸೂದೆ ಅವಕಾಶ ಮಾಡಿಕೊಡುತ್ತದೆ.
- ಈ ಮಸೂದೆಗೆ ರಾಜ್ಯಪಾಲರ ಅಂಕಿತ ಬಿದ್ದ ನಂತರ, ಅದು ಕಾರ್ಯರೂಪಕ್ಕೆ ಬರಲಿದೆ. ನಂತರ ಬಹುಮಹಡಿ ಕಟ್ಟಡಗಳ ಮಾಲೀಕರಿಗೆ ತೆರಿಗೆಯ ಹೊರೆ ಹೆಚ್ಚಲಿದೆ.
- 'ಬಹು ಮಹಡಿ ಕಟ್ಟಡಗಳಿಗೆ ಅಗ್ನಿ ಸೆಸ್ ವಿಧಿಸುತ್ತಿಲ್ಲ. ಈ ಕ್ರಮ ಇಲ್ಲದ ಕಾರಣ ಸಂಭಾವ್ಯ ಆದಾಯ ಖೋತಾ ಆಗುತ್ತಿದೆ ಎಂದು ಸಿಎಜಿ ಆಕ್ಷೇಪ ವ್ಯಕ್ತಪಡಿಸಿದ್ದರು. ಈ ಬಗ್ಗೆ ಕ್ರಮ ತೆಗೆದು ಕೊಂಡಿದ್ದೀರಾ ಎಂದು ಪ್ರಶ್ನಿಸಿ ಆರು ಬಾರಿ ಪತ್ರ ಬರೆದಿದ್ದರು. ಅದರ ಆಧಾರದಲ್ಲಿ ಅಗ್ನಿ ಸೆಸ್ ವಿಧಿಸುತ್ತಿದ್ದೇವೆ.

## ❖ ನ್ಯಾಯಾಲಯದ ಕೈ ಕಟ್ಟಿ ಹಾಕಬಹುದೇ?

**ಸಂದರ್ಭ:** 'ಸಾಂವಿಧಾನಿಕ ಹುದ್ದೆಯಲ್ಲಿರುವವರು ತಮ್ಮ ಕರ್ತವ್ಯ ನಿರ್ವಹಿಸಲು ನಿರಾಕರಿಸಿದರೆ ಅಥವಾ ರಾಜ್ಯ ವಿಧಾನಸಭೆ ಅಂಗೀಕಾರ ನೀಡಿರುವ ಮಸೂದೆಯ ವಿಚಾರವಾಗಿ ರಾಜ್ಯಪಾಲರು ನಿಷ್ಕ್ರಿಯತೆ ತೋರಿದ ಸಂದರ್ಭದಲ್ಲಿ ಸಾಂವಿಧಾನಿಕ ನ್ಯಾಯಾಲಯಗಳ ಕೈ ಕಟ್ಟಿ ಹಾಕಬಹುದೇ' ಎಂದು ಸುಪ್ರೀಂ ಕೋರ್ಟ್ ಕೇಂದ್ರ ಸರ್ಕಾರವನ್ನು ಕೇಳಿದೆ.

- ಕೇಂದ್ರ ಸರ್ಕಾರದ ಪರ ಹಾಜರಾದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರು, 'ಕೆಲವು ರಾಜ್ಯಪಾಲರು ವಿಧಾನಸಭೆ ಅಂಗೀಕರಿಸಿದ ಮಸೂದೆಗಳ ಬಗ್ಗೆ ಯಾವುದೇ ನಿರ್ಧಾರ ತೆಗೆದುಕೊಳ್ಳದಿದ್ದರೆ ನ್ಯಾಯಾಂಗದ ಮೂಲಕ ಪರಿಹಾರ ಕಂಡುಕೊಳ್ಳುವ ಬದಲು ರಾಜಕೀಯ ಪರಿಹಾರಗಳನ್ನು ಅನ್ವೇಷಿಸಬೇಕಾಗುತ್ತದೆ' ಎಂದಾಗ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ನೇತೃತ್ವದ ಐವರು ನ್ಯಾಯ ಮೂರ್ತಿಗಳ ಪೀಠ ಈ ಹೇಳಿಕೆ ನೀಡಿದೆ.
- ರಾಜ್ಯ ವಿಧಾನಸಭೆಗಳು ಅಂಗೀಕರಿಸಿದ ಮಸೂದೆಗಳಿಗೆ ಅಂಕಿತ ಹಾಕಲು ಕಾಲಮಿತಿ ನಿಗದಿಪಡಿಸಬಹುದೇ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಉಲ್ಲೇಖಿಸಿರುವ ಸಾಂವಿಧಾನಿಕ ಪ್ರಶ್ನೆಗಳ ಕುರಿತ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ನಡೆಸುತ್ತಿದೆ. ನ್ಯಾಯಮೂರ್ತಿಗಳಾದ ಸೂರ್ಯ ಕಾಂತ್, ವಿಕ್ರಮನಾಥ್, ಪಿ.ಎಸ್.ನರಸಿಂಹ ಮತ್ತು ಎ.ಎಸ್.ಚಂದೂರ್‌ಕರ್ ಅವರು ಪೀಠದಲ್ಲಿದ್ದಾರೆ.

- 'ಸಾಂವಿಧಾನಿಕ ಹುದ್ದೆಯಲ್ಲಿರುವವರು ಸಕಾರಣವಿಲ್ಲದೆ ತಮ್ಮ ಕರ್ತವ್ಯಗಳನ್ನು ನಿರ್ವಹಿಸದಿದ್ದ ಸಂದರ್ಭದಲ್ಲಿ ನ್ಯಾಯಾಲಯಗಳ ಕೈ ಕಟ್ಟಿ ಹಾಕಬಹುದೇ' ಎಂದು ಸಿಜೆಐ ಗವಾಯಿ ಅವರು ಮೆಹ್ತಾ ಅವರನ್ನು ಕೇಳಿದರು.
- ಎಲ್ಲಾ ಸಮಸ್ಯೆಗಳಿಗೂ ನ್ಯಾಯಾಲಯ ಗಳಿಂದ ಪರಿಹಾರ ಕಂಡುಕೊಳ್ಳಲು ಸಾಧ್ಯವಿಲ್ಲ ಮತ್ತು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸಂವಾದಕ್ಕೆ ಆದ್ಯತೆ ನೀಡಬೇಕು ಎಂದು ಮೆಹ್ತಾ ವಿಚಾರಣೆ ವೇಳೆ ವಾದಿಸಿದರು.
- ಪರಿಶೀಲನೆಗಾಗಿ ರಾಜ್ಯಪಾಲರಿಂದ ಬಂದ ಮಸೂದೆಗಳ ವಿಚಾರವಾಗಿ ರಾಷ್ಟ್ರಪತಿಯವರು ಮೂರು ತಿಂಗಳ ಅವಧಿಯಲ್ಲಿ ತೀರ್ಮಾನ ಕೈಗೊಳ್ಳಬೇಕು ಎಂದು ಸುಪ್ರೀಂ ಕೋರ್ಟ್ ಏಪ್ರಿಲ್ 8ರಂದು ಹೇಳಿತ್ತು. ಅದರ ಬೆನ್ನಲ್ಲೇ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸುಪ್ರೀಂ ಕೋರ್ಟ್‌ಗೆ ಐದು ಪುಟಗಳ ಪತ್ರ ಬರೆದು, 14 ಪ್ರಶ್ನೆ ಗಳನ್ನು ಕೇಳಿದ್ದರು.

**ಮಧ್ಯಪ್ರವೇಶಿಸುವ ಅಧಿಕಾರ ಇಲ್ಲವೇ?**

- ಮಸೂದೆಯ ವಿಚಾರವಾಗಿ ರಾಜ್ಯಪಾಲರು ಹಲವು ವರ್ಷ ಯಾವುದೇ ನಿರ್ಧಾರ ತೆಗೆದುಕೊಳ್ಳದೆ ರಾಜ್ಯ ಶಾಸನಸಭೆಗಳನ್ನು 'ನಿಸ್ತೇಜ' ಗೊಳಿಸಿದರೆ ಮಧ್ಯ ಪ್ರವೇಶಿಸುವ ಅಧಿಕಾರ ನ್ಯಾಯಾಲಯಗಳಿಗೆ ಇಲ್ಲವೇ ಎಂದು ಸುಪ್ರೀಂ ಕೋರ್ಟ್ ಪೀಠವು ಕೇಂದ್ರ ಸರ್ಕಾರವನ್ನು ಕೇಳಿದೆ.
- ಇಂತಹ ಪರಿಸ್ಥಿತಿಯಲ್ಲಿ ನ್ಯಾಯಾಲಯಗಳು ಮಧ್ಯಪ್ರವೇಶಿಸುವುದರಿಂದ ತನ್ನನ್ನು ತಾನು ತಡೆದಿಟ್ಟುಕೊಳ್ಳಬೇಕು ಎಂಬ ತುಷಾರ್ ಮೆಹ್ತಾ ಅವರ ವಾದಕ್ಕೆ ಪ್ರತಿಕ್ರಿಯೆಯಾಗಿ ಪೀಠವು ಹೀಗೆ ಹೇಳಿದೆ.
- 'ವಿಧಾನಸಭೆಯು ಸರ್ವಾನುಮತದಿಂದ ಮಸೂದೆಯನ್ನು ಅಂಗೀಕರಿಸು ತ್ತದೆ. ರಾಜ್ಯಪಾಲರು ಆ ಮಸೂದೆ ಬಗ್ಗೆ ಯಾವುದೆ ನಿರ್ಧಾರ ತೆಗೆದುಕೊಳ್ಳದಿದ್ದರೆ ವಾಸ್ತವವಾಗಿ ಶಾಸಕಾಂಗವನ್ನು ನಿಷ್ಕ್ರಿಯಗೊಳಿಸಿದಂತೆ ಆಗುತ್ತದೆ' ಎಂದು ಪೀಠ ಹೇಳಿತು.

## ❖ ತೆರಿಗೆ ಹಂತ ಇಳಿಕೆ ಪ್ರಸ್ತಾವಕ್ಕೆ ಒಪ್ಪಿಗೆ

**ಸಂದರ್ಭ:** ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ವ್ಯವಸ್ಥೆಯಲ್ಲಿನ ತೆರಿಗೆ ಹಂತಗಳನ್ನು ಕಡಿಮೆ ಮಾಡುವ ಕೇಂದ್ರ ಸರ್ಕಾರದ ಪ್ರಸ್ತಾವಕ್ಕೆ ವಿವಿಧ ರಾಜ್ಯಗಳ ಸಚಿವರ ಗುಂಪು ತಾತ್ವಿಕ ಒಪ್ಪಿಗೆ ನೀಡಿದೆ.

- ಈಗಿರುವ ನಾಲ್ಕು ಹಂತಗಳ ತೆರಿಗೆ ವ್ಯವಸ್ಥೆಯ ಬದಲು ಎರಡು ಹಂತಗಳ ತೆರಿಗೆ ವ್ಯವಸ್ಥೆಯನ್ನು ಜಾರಿಗೆ ತರುವುದು ಕೇಂದ್ರದ ಪ್ರಸ್ತಾವ. ಕೆಲವು ವಸ್ತುಗಳ ಮೇಲೆ ಶೇ 40ರಷ್ಟು ತೆರಿಗೆ ನಿಗದಿ ಮಾಡುವ ಪ್ರಸ್ತಾವವೂ ಇದರಲ್ಲಿದೆ.
- ಜನಸಾಮಾನ್ಯರಿಗೆ ಪ್ರಯೋಜನ ಆಗುತ್ತದೆ ಎಂದಾದರೆ ತೆರಿಗೆ ಹಂತಗಳನ್ನು ಕಡಿಮೆ ಮಾಡುವುದು ಒಳಿತು ಎಂದು ಸಚಿವರ ಗುಂಪು ಅಭಿಪ್ರಾಯಪಟ್ಟಿತು. ಐಷಾರಾಮಿ ಕಾರುಗಳಂತಹ ಕೆಲವು ಉತ್ಪನ್ನಗಳಿಗೆ ಶೇ 40ರ ವಿಶೇಷ ತೆರಿಗೆ ಮೇಲೆ ಹೆಚ್ಚುವರಿ ಸುಂಕ ವಿಧಿಸಬೇಕು ಎಂದು ಕೆಲವು ಸದಸ್ಯರು ಹೇಳಿದರು.
- ಈ ಗುಂಪಿನಲ್ಲಿ ಬಿಹಾರ, ಉತ್ತರ ಪ್ರದೇಶ, ರಾಜಸ್ಥಾನ, ಕರ್ನಾಟಕ, ಕೇರಳ, ಪಶ್ಚಿಮ ಬಂಗಾಳ ರಾಜ್ಯಗಳ ಪ್ರತಿನಿಧಿಗಳು ಇದ್ದಾರೆ. ಈ ಗುಂಪಿನ ಶಿಫಾರಸು ಈಗ ಉನ್ನತ ಅಧಿಕಾರವಿರುವ ಜಿಎಸ್‌ಟಿ ಮಂಡಳಿಯ ಎದುರು ಬರಲಿದೆ. ಜಿಎಸ್‌ಟಿ ಸುಧಾರಣೆಗಳ ಬಗ್ಗೆ ಮಂಡಳಿಯು ಅಂತಿಮ ತೀರ್ಮಾನ ತೆಗೆದುಕೊಳ್ಳುತ್ತದೆ.
- ತೆರಿಗೆ ಹಂತಗಳನ್ನು ತಗ್ಗಿಸುವ ಕ್ರಮವು ರಾಜ್ಯಗಳ ವರಮಾನವನ್ನು ರಕ್ಷಿಸುವ ಸಮತೋಲನದ ಕ್ರಮವನ್ನೂ ಒಳಗೊಳ್ಳಬೇಕು. ಅದಿಲ್ಲದಿದ್ದರೆ ಬಡವರಿಗಾಗಿ, ಮಧ್ಯಮ ವರ್ಗದವರಿಗಾಗಿ ರೂಪಿಸಿದ ಅಭಿವೃದ್ಧಿ ಯೋಜನೆಗಳು ಹಾಗೂ ಮೂಲಸೌಕರ್ಯ ಯೋಜನೆಗಳಿಗೆ ಅಡ್ಡಿ ಆಗುತ್ತದೆ ಎಂದು ತೆಲಂಗಾಣದ ಉಪ ಮುಖ್ಯಮಂತ್ರಿ ಮಲ್ಲು ಭಟ್ಟಿ ವಿಕ್ರಮಾರ್ಕ ಹೇಳಿದ್ದಾರೆ.

- ತೆರಿಗೆ ಹಂತ ತಗ್ಗಿಸುವ ಪ್ರಸ್ತಾವವನ್ನು ತೆಲಂಗಾಣ ಬೆಂಬಲಿಸುತ್ತದೆ. ಆದರೆ, ಪರಿಹಾರ ವ್ಯವಸ್ಥೆಯೊಂದು ಸೂಕ್ತ ರೀತಿಯಲ್ಲಿ ಜಾರಿಗೆ ಬರಬೇಕು ಎಂದು ಸರ್ಕಾರ ಹೊರಡಿಸಿರುವ ಹೇಳಿಕೆಯಲ್ಲಿ ತಿಳಿಸಲಾಗಿದೆ.

## ❖ ಆಸ್ತಿ ನಗದೀಕರಣ ₹1.42 ಲಕ್ಷ ಕೋಟಿ

**ಸಂದರ್ಭ:** 2024–25ರ ಆರ್ಥಿಕ ವರ್ಷದವರೆಗೆ ವಿವಿಧ ಮಾದರಿಯ ಆಸ್ತಿಗಳ ನಗದೀಕರಣದಿಂದ ₹1.42 ಲಕ್ಷ ಕೋಟಿ ಸಂಗ್ರಹಿಸಲಾಗಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಲೋಕಸಭೆಗೆ ತಿಳಿಸಿದ್ದಾರೆ.

- ಪ್ರಸಕ್ತ ಆರ್ಥಿಕ ವರ್ಷದಲ್ಲಿ ಆಸ್ತಿ ನಗದೀಕರಣದ ಮೂಲಕ ಸಂಗ್ರಹವಾಗುವ ಮೊತ್ತವು ₹30 ಸಾವಿರ ಕೋಟಿ ಆಗುವ ನಿರೀಕ್ಷೆ ಇದೆ ಎಂದು ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.
- ರಸ್ತೆ ಅಪಘಾತಗಳಲ್ಲಿ ಗಾಯ ಗೊಂಡವರಿಗೆ ನಗದು ರಹಿತವಾಗಿ ಚಿಕಿತ್ಸೆ ನೀಡುವ ಯೋಜನೆಯನ್ನು 2024ರ ಮಾರ್ಚ್‌ನಲ್ಲಿ ಆರು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಜಾರಿ ಮಾಡಲಾಗಿತ್ತು. ಅಂದಿನಿಂದ ಪ್ರಸಕ್ತ ವರ್ಷದ ಜುಲೈ 31ರ ವರೆಗೆ ಈ ಯೋಜನೆಯಡಿ 4,971 ರಸ್ತೆ ಅಪಘಾತ ಸಂತ್ರಸ್ತರಿಗೆ ಚಿಕಿತ್ಸೆ ನೀಡಲಾಗಿದೆ ಎಂದು ಪ್ರಶ್ನೆಯೊಂದಕ್ಕೆ ಸಚಿವರು ಉತ್ತರಿಸಿದ್ದಾರೆ.

## ❖ ಮಾನಸಿ, ಅಭಿನವ್‌ಗೆ ಚಿನ್ನ

**ಸಂದರ್ಭ:** ಭಾರತದ ಮಾನಸಿ ರಘುವಂಶಿ ಮತ್ತು ಯಶಸ್ವಿ ರಾಥೋಡ್ ಅವರು ಇಲ್ಲಿ ನಡೆಯುತ್ತಿರುವ ಏಷ್ಯನ್ ಶೂಟಿಂಗ್ ಚಾಂಪಿಯನ್ ಷಿಪ್‌ನಲ್ಲಿ ಮಹಿಳಾ ಜೂನಿಯರ್ ಸ್ಕೀಟ್ ಸ್ಪರ್ಧೆಯಲ್ಲಿ ಕ್ರಮವಾಗಿ ಚಿನ್ನ ಮತ್ತು ಬೆಳ್ಳಿ ಗೆದ್ದುಕೊಂಡು ಗಮನ ಸೆಳೆದರು.

- ಕೂಟದ ನಾಲ್ಕನೇ ದಿನ ಭಾರತದ ಶೂಟರ್‌ಗಳು ಐದು ಚಿನ್ನದ ಪದಕಗಳಲ್ಲಿ ನಾಲ್ಕನ್ನು ಗೆದ್ದು ಪ್ರಾಬಲ್ಯ ಮೆರೆದರು. ಇದರೊಂದಿಗೆ ಭಾರತದ ಪದಕಗಳ ಸಂಖ್ಯೆ 26ಕ್ಕೆ (14 ಚಿನ್ನ, 6 ಬೆಳ್ಳಿ, 6 ಕಂಚು) ಏರಿಕೆಯಾಗಿದೆ.
- ಮಾನಸಿ ಫೈನಲ್‌ನಲ್ಲಿ 53 ಸ್ಕೋರ್ ಗಳಿಸಿದರೆ, ಯಶಸ್ವಿ ಅವರು ಗುರಿಯಲ್ಲಿ 52ರ ಸ್ಕೋರ್ ಮಾಡಿದರು. ಕಜಾಕಸ್ತಾನದ ಲಿಡಿಯಾ ಬಶರೋವಾ (40) ಕಂಚಿನ ಪದಕ ಗಳಿಸಿದರು.
- ಜೂನಿಯರ್ ಪುರುಷರ 10 ಮೀ. ಏರ್ ರೈಫಲ್‌ನಲ್ಲಿ ಅಭಿನವ್ ಶಾ ವೈಯಕ್ತಿಕ ಚಿನ್ನ ಗೆದ್ದರು. ಅಭಿನವ್ (628.1), ನರೇನ್ ಪ್ರಣವ್ (631.1) ಮತ್ತು ಹಿಮಾಂಶು (630.9) ಅವರ ತಂಡವೂ ಚಿನ್ನದ ಸಾಧನೆ ಮೆರೆಯಿತು.
- ಇದಕ್ಕೂ ಮುನ್ನ ಸೀನಿಯರ್ ಪುರುಷರ 10 ಮೀ. ಏರ್ ರೈಫಲ್ ಸ್ಪರ್ಧೆಯಲ್ಲಿ ಭಾರತ ತಂಡ ಚಾಂಪಿಯನ್ ಆಯಿತು.

## ❖ ಇರಾನಿ-ಆಂಡ್ರಿಯಾ ಜೋಡಿಗೆ ಕಿರೀಟ

**ಸಂದರ್ಭ:** ಇಟಲಿಯ ಸಾರಾ ಇರಾನಿ ಮತ್ತು ಆಂಡ್ರಿಯಾ ವಾವಸ್ಸೋರಿ ಜೋಡಿ, ಅಮೆರಿಕ ಓಪನ್ ಟೆನಿಸ್ ಮಿಶ್ರ ಡಬಲ್ಸ್ ಪ್ರಶಸ್ತಿಯನ್ನು ತನ್ನಲ್ಲೇ ಉಳಿಸಿಕೊಂಡಿತು.

- ಪ್ರತ್ಯೇಕವಾಗಿ ನಡೆದ ಮೂರು ದಿನಗಳ ಮಿಶ್ರ ಡಬಲ್ಸ್ ಈ ಬಾರಿ 16 ತಂಡಗಳಿಗೆ ಸೀಮಿತಗೊಂಡಿದ್ದು, ಮೂರು ದಿನಗಳಲ್ಲಿ ನಡೆಯಿತು.
- ಡಬಲ್ಸ್‌ನಲ್ಲಿ ಆಡಲು ಸಿಂಗಲ್ಸ್ ಆಟಗಾರರಿಗೂ ಅವಕಾಶ ದೊರೆಕಿತ್ತು. ಎಂಟು ಜೋಡಿಗಳು ರ್‍ಯಾಂಕಿಂಗ್ ಆಧಾರದಲ್ಲಿ ಪ್ರವೇಶ ಪಡೆದರೆ, ಉಳಿದ ಎಂಟು ಜೋಡಿಗಳಿಗೆ ವೈಲ್ಡ್ ಕಾರ್ಡ್ ಪ್ರವೇಶ ನೀಡಲಾಗಿತ್ತು.
- ಪ್ರೇಕ್ಷಕರಿಂದ ಭರ್ತಿಯಾಗಿದ್ದ ಆರ್ಥರ್ ಆ್ಯಷ್ ಕ್ರೀಡಾಂಗಣದಲ್ಲಿ ನಡೆದ ಫೈನಲ್‌ನಲ್ಲಿ ಸಾರಾ- ವಾವಸ್ಸೋರಿ ಜೋಡಿ 6–3, 5–7 , 10–6 ರಿಂದ ಮೂರನೇ ಶ್ರೇಯಾಂಕದ ಇಗಾ ಶ್ವಾಂಟೆಕ್- ಕ್ಯಾಸ್ಪರ್ ರುಡ್ ಜೋಡಿಯನ್ನು ಮಣಿಸಿತು. ₹8.72 ಕೋಟಿ ಬಹುಮಾನ ವಿಜೇತರ ಪಾಲಾಯಿತು. ಕ್ರೀಡಾಂಗಣ ಭರ್ತಿಯಾಗಿತ್ತು.

Dr. Rajkumar IAS Academy

## ❖ ವಾರ್ಷಿಕ ಪಾಸ್ ಆಪರೇಟರ್‌ಗಳಿಗೆ ಪರಿಹಾರ

**ಸಂದರ್ಭ:** ಫಾಸ್ಟ್‌ಟ್ಯಾಗ್ ಆಧಾರಿತ ವಾರ್ಷಿಕ ಟೋಲ್ ಪಾಸ್ ವ್ಯವಸ್ಥೆ ಆ.15ರಿಂದ ಜಾರಿಗೆ ಬಂದಿದ್ದು, ಹೊಸ ವ್ಯವಸ್ಥೆ ಜಾರಿಯಿಂದ ಆಗುವ 'ದರ ವ್ಯತ್ಯಾಸ 'ಕ್ಕೆ ಟೋಲ್ ಪ್ಲಾಜಾ ಆಪರೇಟರ್‌ಗಳಿಗೆ ಮೂರು ತಿಂಗಳವರೆಗೆ ನಷ್ಟ ಭರ್ತಿ ಪಾವತಿಸಲಾಗುವುದು ಎಂದು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (ಎನ್‌ಎಚ್‌ಎಐ) ಹೇಳಿದೆ.

- ವಾರ್ಷಿಕ ಪಾಸ್‌ನಿಂದ ಟೋಲ್‌ಗಳಲ್ಲಿ ಬಳಕೆದಾರರಿಂದ ಕಡಿತಗೊಳ್ಳುತ್ತಿದ್ದ ಮೊತ್ತದಲ್ಲಿ ವ್ಯತ್ಯಾಸವಾಗಲಿದೆ. ಈ ವ್ಯತ್ಯಾಸವನ್ನು ಎನ್‌ಎಚ್‌ಎಐ, ಟೋಲ್ ಗುತ್ತಿಗೆದಾರರಿಗೆ ಪಾವತಿಸಲಿದೆ. ಇದಕ್ಕಾಗಿ ದೇಶದಾದ್ಯಂತ 'ಏಕರೂಪದ ಪರಿಹಾರ ವ್ಯವಸ್ಥೆ ಜಾರಿ ಗೊಳಿಸಲಾಗುವುದು ಮತ್ತು ನಷ್ಟ ಭರ್ತಿಯನ್ನು ಮೂರು ತಿಂಗಳವರೆಗೆ ಮಾತ್ರ ಪಾವತಿಸಲಾಗುವುದು ' ಎಂದು ಎನ್‌ಎಚ್‌ಎಐ ಸ್ಪಷ್ಟಪಡಿಸಿದೆ.
- **ಭಾರತೀಯ ರಾಷ್ಟ್ರೀಯ ಪಾವತಿ ನಿಗಮವು (ಎನ್‌ಪಿಸಿಐ), ಭಾರತೀಯ ಹೆದ್ದಾರಿ ನಿರ್ವಹಣಾ ಕಂಪನಿ (ಐಎಚ್‌ಎಂಸಿಎಲ್) ಯಿಂದ ಸಂಗ್ರಹಿಸುವ ದತ್ತಾಂಶದ ಮೂಲಕ ವಾರ್ಷಿಕ ಪಾಸ್ ವ್ಯವಸ್ಥೆಯಡಿ ಟೋಲ್ ದಾಟಿದ ವಾಹನಗಳ ಸಂಖ್ಯೆ ಎಷ್ಟು ಎನ್ನುವುದು ನಿಖರವಾಗಿ ತಿಳಿಯಲಿದೆ.**

## ❖ 'ಎಐ' ಯುದ್ಧವಿಮಾನ 'ಕಾಲಭೈರವ'

**ಸಂದರ್ಭ:** ಭಾರತದ ಮೊಟ್ಟಮೊದಲ ಸ್ವದೇಶಿ ನಿರ್ಮಿತ ಮೀಡಿಯಂ ಆಲ್ಟಿಟ್ಯೂಡ್ ಲಾಂಗ್ ಡಿಸ್ಟೆನ್ಸ್ (ಮೇಲ್) ಯುದ್ಧವಿಮಾನ 'ಎಫ್‌ಡಬ್ಲ್ಯುಡಿ ಕಾಲಭೈರವ' ವನ್ನು ಫ್ಲೈಯಿಂಗ್ ವೆಡ್ಜ್ ಡಿಫೆನ್ಸ್ ಆ್ಯಂಡ್ ಏರೋಸ್ಪೇಸ್ ತಯಾರಿಸಿದೆ. ಇದು ಕೃತಕ ಬುದ್ಧಿಮತ್ತೆ (ಎ.ಐ) ಆಧಾರಿತ ಯುದ್ಧವಿಮಾನ ವಾಗಿದ್ದು, ದೇಶದ ರಕ್ಷಣಾ ಕ್ಷೇತ್ರಕ್ಕೆ ಸೇರ್ಪಡೆಯಾಗಿದೆ.

- ಯುದ್ಧ ವಿಮಾನ ಬಿಡುಗಡೆಯಾದ ಬಳಿಕ ಎಫ್‌ಡಬ್ಲ್ಯು ಡಿಎ ಸಂಸ್ಥಾಪಕ ಹಾಗೂ ಸಿಇಒ ಸುಹಾಸ್ ತೇಜಸ್ಕಂದ ಮಾತನಾಡಿ, 'ಭಾರತೀಯರ ನಂಬಿಕೆಯಲ್ಲಿ ಕಾಲದ ಪ್ರತೀಕವಾಗಿರುವ 'ಕಾಲಭೈರವ' ನ ಹೆಸರನ್ನೇ ಈ ಯುದ್ಧವಿಮಾನಕ್ಕೆ ಇಡಲಾಗಿದೆ. ಸತತ 30 ಗಂಟೆ 3000 ಕಿ.ಮೀ. ದೂರ ಹಾರುವ ಸಾಮರ್ಥ್ಯ ವನ್ನು 'ಕಾಲಭೈರವ' ಹೊಂದಿದೆ' ಎಂದು ವಿವರಿಸಿದರು.
- ದಕ್ಷಿಣ ಏಷ್ಯಾದ ದೇಶವೊಂದರಿಂದ ₹218 ಕೋಟಿಯ (ನಿರ್ವಹಣೆ ಸೇರಿ ₹262 ಕೋಟಿ) ರಫ್ತು ಆದೇಶ ಸಿಕ್ಕಿದೆ. ಇದು ರಕ್ಷಣಾ ಸಂಶೋಧನೆ ಹಾಗೂ ತಯಾರಿಕಾ ಕ್ಷೇತ್ರದಲ್ಲಿ ಎಐ ಆಧಾರಿತ ಸಲಕರಣೆಗಳನ್ನು ತಯಾರಿಸುವ ವಿಶ್ವಾಸಾರ್ಹ ದೇಶವಾಗಿ ಭಾರತ ಅಭಿವೃದ್ಧಿ ಹೊಂದುತ್ತಿರುವುದರ ಪ್ರತೀಕ ಎಂದು ವಿಶ್ಲೇಷಿಸಿದರು.
- ಆತ್ಮನಿರ್ಭರ ಭಾರತದ ದೂರದೃಷ್ಟಿ ಯೊಂದಿಗೆ ಸಿದ್ಧಗೊಂಡಿರುವ ಎಫ್‌ಡಬ್ಲ್ಯುಡಿ ಕಾಲಭೈರವ ಇ2ಎ2 (ಎಕನಾಮಿಕ್ ಆ್ಯಂಡ್ ಎಫಿಷಿಯೆಂಟ್ ಅಟಾನಮಸ್ ಏರ್‌ಕ್ರಾಫ್ಟ್) ಯುದ್ಧ ವಿಮಾನವು ವಿದೇಶಿ ನಿರ್ಮಿತ ಎಂಕ್ಯೂ-9 ರೀಪರ್‌ನಂತಹ ಪ್ರಿಡೇಟರ್-ಕ್ಲಾಸ್ ಯುದ್ಧವಿಮಾನದ ಕೇವಲ ಹತ್ತನೇ ಒಂದರಷ್ಟು ವೆಚ್ಚದಲ್ಲಿ ಸಿದ್ಧಗೊಂಡಿದೆ. ಉತ್ತಮ ಸಮರ ಸಾಮರ್ಥ್ಯದ ಜೊತೆಗೆ ಈ ಯುದ್ಧವಿಮಾನವು ಬಹುಕೋನ ಗಳಿಂದ ನಿಖರ ದಾಳಿ ನಡೆಸುವ ಹಾಗೂ ಶತ್ರುಗಳ ವಾಯು ರಕ್ಷಣಾ ವ್ಯವಸ್ಥೆಯನ್ನು ಭೇದಿಸುವ ಶಕ್ತಿ ಹೊಂದಿದೆ ಎಂದು ವಿವರಿಸಿದರು.

### 'ಕಾಲಭೈರವ' ವಿಶೇಷ

- 6.5 ಮೀಟರ್ ಉದ್ದದ ರೆಕ್ಕೆಗಳನ್ನು ಹೊಂದಿದೆ. ಇಒಐಆರ್, ಕ್ಷಿಪಣಿ, ಲೇಸರ್ ಗೈಡೆಡ್ ರಾಕೆಟ್, ಇಂಧನ ಸೇರಿ 91 ಕೆ.ಜಿ. ಪೇಲೋಡ್ ಇದೆ. 20 ಸಾವಿರ ಅಡಿ ಎತ್ತರಕ್ಕೆ. 3 ಸಾವಿರ ಕಿ.ಮೀ. ದೂರಕ್ಕೆ ಹಾರುವ

Dr. Rajkumar's Academy

ಸಾಮರ್ಥ್ಯ ಹೊಂದಿದೆ. ಒಂದು ವಿದೇಶಿ ಪ್ರಿಡೇಟರ್ ಯುದ್ಧವಿಮಾನವನ್ನು ಖರೀದಿಸುವ ವೆಚ್ಚದಲ್ಲಿ ಹತ್ತು ಕಾಲಭೈರವ ಯುದ್ಧವಿಮಾನ ಖರೀದಿಸಬಹುದು.

## ❖ ಹೊಸ ಐ.ಟಿ ಮಸೂದೆಗೆ ರಾಷ್ಟ್ರಪತಿ ಅಂಕಿತ

**ಸಂದರ್ಭ:** ಆದಾಯ ತೆರಿಗೆ ಮಸೂದೆ 2025ಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಅಂಕಿತ ಹಾಕಿದ್ದಾರೆ.

- ಇದೀಗ ಮಸೂದೆ ಕಾಯ್ದೆ ಆಗಿದೆ. ಈ ಕಾಯ್ದೆ ಮುಂದಿನ ಆರ್ಥಿಕ ವರ್ಷದ ಏಪ್ರಿಲ್ 1ರಿಂದ ಜಾರಿಗೆ ಬರಲಿದೆ. ಈ ಕಾಯ್ದೆಯು ತೆರಿಗೆ ಕಾನೂನುಗಳನ್ನು ಸರಳಗೊಳಿಸಲಿದ್ದು, ಪದಗಳನ್ನು ಕಡಿಮೆ ಮಾಡಿದೆ. ಈ ಮೂಲಕ ಸರಳವಾಗಿ ಅರ್ಥವಾಗುವಂತೆ ಮಾಡುತ್ತದೆ.
- ‘ಆದಾಯ ತೆರಿಗೆ ಕಾಯ್ದೆ 2025 ರಾಷ್ಟ್ರಪತಿಗಳ ಅನುಮೋದನೆ ಯನ್ನು ಪಡೆದುಕೊಂಡಿದೆ. ಆದಾಯ ತೆರಿಗೆ ಕಾಯ್ದೆ 1961ರ ಬದಲು ಈ ಹೊಸ ಕಾಯ್ದೆ ಜಾರಿಗೆ ಬಂದಿದೆ’ ಎಂದು ಆದಾಯ ತೆರಿಗೆ ಇಲಾಖೆ ‘ಎಕ್ಸ್’ ನಲ್ಲಿ ತಿಳಿಸಿದೆ.
- ಆದಾಯ ತೆರಿಗೆ (ಐ.ಟಿ) ಮಸೂದೆಯು ಆಗಸ್ಟ್ 12ರಂದು ಸಂಸತ್ತಿನ ಒಪ್ಪಿಗೆ ಪಡೆದಿತ್ತು. ಈ ಹೊಸ ಕಾಯ್ದೆಯು ಯಾವುದೇ ಹೊಸ ತೆರಿಗೆ ಹೇರುವುದಿಲ್ಲ. ಅನಗತ್ಯ ನಿಬಂಧನೆಗಳು ಮತ್ತು ಸಂಕೀರ್ಣ ಭಾಷೆಯನ್ನು ತೆಗೆದು ಹಾಕುತ್ತದೆ.
- 1961ರ ಕಾಯ್ದೆಯಲ್ಲಿ 819 ಸೆಕ್ಷನ್‌ಗಳು ಮತ್ತು 47 ಅಧ್ಯಾಯಗಳಿದ್ದವು. ಇದನ್ನು ಹೊಸ ಕಾಯ್ದೆಯಲ್ಲಿ 536 ಸೆಕ್ಷನ್ ಮತ್ತು 23 ಅಧ್ಯಾಯಕ್ಕೆ ಇಳಿಕೆ ಮಾಡಲಾಗಿದೆ. 5.12 ಲಕ್ಷ ಪದಗಳು 2.6 ಲಕ್ಷಕ್ಕೆ ಇಳಿಕೆಯಾಗಿದೆ.

## ❖ ಬೆಂಗಳೂರು--ಚೆನ್ನೈ ಎಕ್ಸ್‌ಪ್ರೆಸ್‌ವೇ 2026ರ ಜೂನ್‌ಗೆ ಪೂರ್ಣ: ಗಡ್ಕರಿ

**ಸಂದರ್ಭ:** ಭೂಸ್ವಾಧೀನ ವಿಳಂಬ ಸೇರಿದಂತೆ ವಿವಿಧ ಕಾರಣಗಳಿಂದ ಬೆಂಗಳೂರು-ಚೆನ್ನೈ ಎಕ್ಸ್‌ಪ್ರೆಸ್‌ವೇ ಕಾಮಗಾರಿ ನಿಧಾನಗತಿಯಲ್ಲಿ ಸಾಗಿದೆ ಎಂದು ಕೇಂದ್ರ ಹೆದ್ದಾರಿ ಹಾಗೂ ಭೂಸಾರಿಗೆ ಸಚಿವ ನಿತಿನ್ ಗಡ್ಕರಿ ತಿಳಿಸಿದ್ದಾರೆ.

- **ಈ ಎಕ್ಸ್‌ಪ್ರೆಸ್‌ವೇ ಬೆಂಗಳೂರು-ಚೆನ್ನೈ ಕೈಗಾರಿಕಾ ಕಾರಿಡಾರ್‌ನ ಭಾಗವಾಗಿದ್ದು, ಕಾಮಗಾರಿ ಪೂರ್ಣಗೊಂಡ ಬಳಿಕ ಎರಡು ನಗರಗಳ ನಡುವಿನ ಪ್ರಯಾಣದ ಅವಧಿ ಎರಡೂವರೆ ಗಂಟೆಗಳಿಗೆ ಇಳಿಯಲಿದೆ.** 262.4 ಕಿ.ಮೀ. ಉದ್ದದ ಮಾರ್ಗಕ್ಕೆ ₹15,188 ಕೋಟಿ ವೆಚ್ಚ ಮಾಡಲಾಗುತ್ತಿದೆ. ಸದ್ಯ ನಾಲ್ಕು ಪ್ಯಾಕೇಜ್‌ಗಳ ಕೆಲಸ ಮುಗಿದಿದ್ದು, ಎಲ್ಲ ಪ್ಯಾಕೇಜ್‌ಗಳ ಕಾಮಗಾರಿಗಳು 2026ಕ್ಕೆ ಮುಗಿಯಲಿವೆ ಎಂದು ಸಚಿವರು ತಿಳಿಸಿದ್ದಾರೆ.

ಗಡುವು ವಿಸ್ತರಣೆ

- ಈ ಯೋಜನೆಯು 2024ರ ಆರಂಭದಲ್ಲಿ ಪೂರ್ಣಗೊಳ್ಳ ಲಿದೆ ಎಂದು ಗಡ್ಕರಿ ಈ ಹಿಂದೆ ಭರವಸೆ ನೀಡಿದ್ದರು. 2024ರ ಫೆಬ್ರುವರಿಯಲ್ಲಿ ನಡೆದ ಸಂಸತ್ ಅಧಿವೇಶನದಲ್ಲಿ ಗಡ್ಕರಿ, ‘ಈ ಕಾಮಗಾರಿ ಡಿಸೆಂಬರ್‌ಗೆ ಮುಗಿಯಲಿದೆ’ ಎಂದು ಅಭಯ ನೀಡಿದ್ದರು. ‘ಈ ಯೋಜನೆಯನ್ನು ತ್ವರಿತವಾಗಿ ಪೂರ್ಣಗೊಳಿಸಲು ರಾಜ್ಯ ಸರ್ಕಾರಗಳ ಸಹಕಾರ ಅಗತ್ಯ ಎಂದು ಹೇಳಿದ್ದರು. ಗಡುವು ಮೀರಿ ವರ್ಷ ಕಳೆದರೂ ಕಾಮಗಾರಿ ಪೂರ್ಣಗೊಂಡಿಲ್ಲ.

ರಾಜ್ಯದಲ್ಲಿ ಪೂರ್ಣ

- ಕರ್ನಾಟಕದಲ್ಲಿ ಮೂರು ಪ್ಯಾಕೇಜ್‌ಗಳ ಕಾಮಗಾರಿಗಳು ಮುಗಿದಿವೆ. ತಮಿಳುನಾಡು ಹಾಗೂ ಆಂಧ್ರ ಪ್ರದೇಶದಲ್ಲಿ ಕಾಮಗಾರಿ ಆಮೆಗತಿಯಲ್ಲಿ ಸಾಗಿದೆ.

Dr Rajkumar IAS Academy

## ❖ ‘ಜಿಡಿಪಿ ಶೇ 6.3ಕ್ಕೆ ಇಳಿಕೆ ನಿರೀಕ್ಷೆ’

**ಸಂದರ್ಭ:** ಪ್ರಸಕ್ತ ಆರ್ಥಿಕ ವರ್ಷದಲ್ಲಿ ದೇಶದ ಜಿಡಿಪಿ ಬೆಳವಣಿಗೆ ಶೇ 6.3ಕ್ಕೆ ಇಳಿಯುವ ನಿರೀಕ್ಷೆಯಿದೆ ಎಂದು ಎಸ್‌ಬಿಐ ರಿಸರ್ಚ್ ತಿಳಿಸಿದೆ. ಇದು ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ಅಂದಾಜಿಸಿರುವ ಶೇ 6.5ಕ್ಕಿಂತಲೂ ಕಡಿಮೆಯಾಗಿದೆ.

- ಪ್ರಸಕ್ತ ಆರ್ಥಿಕ ವರ್ಷದ ಮೊದಲ ತ್ರೈಮಾಸಿಕದಲ್ಲಿ ಜಿಡಿಪಿ ಪ್ರಗತಿ ಶೇ 6.8ರಿಂದ ಶೇ 7ರಷ್ಟಿರಲಿದೆ. ಎರಡನೇ ತ್ರೈಮಾಸಿಕದಲ್ಲಿ ಶೇ 6.5, ಮೂರನೇ ತ್ರೈಮಾಸಿಕದಲ್ಲಿ ಶೇ 6.3 ಮತ್ತು ನಾಲ್ಕನೇ ತ್ರೈಮಾಸಿಕದಲ್ಲಿ ಶೇ 6.1ರಷ್ಟಾಗ ಬಹುದು. ಖಾಸಗಿ ಬಂಡವಾಳ ವೆಚ್ಚ ಕಡಿಮೆ ಆಗಿರುವುದೇ ಪ್ರಗತಿ ಇಳಿಕೆಗೆ ಕಾರಣ ಎಂದು ಎಸ್‌ಬಿಐ ಹೇಳಿದೆ.
- ಆದರೆ, ಆರ್‌ಬಿಐ ಮೊದಲ ತ್ರೈಮಾಸಿಕದಲ್ಲಿ ಶೇ 6.5, ಎರಡನೇ ತ್ರೈಮಾಸಿಕದಲ್ಲಿ ಶೇ 6.7, ಮೂರನೇ ತ್ರೈಮಾಸಿಕದಲ್ಲಿ ಶೇ 6.6 ಮತ್ತು ನಾಲ್ಕನೇ ತ್ರೈಮಾಸಿಕದಲ್ಲಿ ಶೇ 6.3ರಷ್ಟಾಗಲಿದೆ ಎಂದು ಅಂದಾಜಿಸಿದೆ.
- ಕಳೆದ ಆರ್ಥಿಕ ವರ್ಷಕ್ಕಿಂತಲೂ ಪ್ರಸಕ್ತ ಆರ್ಥಿಕ ವರ್ಷದಲ್ಲಿ ಬಂಡವಾಳ ವೆಚ್ಚ ಕಡಿಮೆ ಆಗಿದೆ. ಅಲ್ಲದೆ, ಅಮೆರಿಕದ ಸುಂಕ ಹೇರಿಕೆಯು ಬಂಡವಾಳ ವೆಚ್ಚದ ಮೇಲೆ ಪರಿಣಾಮ ಬೀರುವ ಸಾಧ್ಯತೆ ಯಿದೆ. ಇದರಿಂದ ವೆಚ್ಚವು ಮತ್ತಷ್ಟು ಕಡಿಮೆ ಆಗಬಹುದು ಎಂದು ತಿಳಿಸಿದೆ.
- ಜುಲೈ 25ರ ವೇಳೆಗೆ ಬ್ಯಾಂಕ್‌ಗಳ ಸಾಲ ನೀಡುವಿಕೆ ಪ್ರಮಾಣ ಶೇ 10ಕ್ಕೆ ಇಳಿದಿದೆ. ಹಿಂದಿನ ವರ್ಷದ ಇದೇ ಅವಧಿಯಲ್ಲಿ ಇದು ಶೇ 13.7ರಷ್ಟಿತ್ತು.
- ಅಮೆರಿಕದ ಸುಂಕ ಹೇರಿಕೆಯು ಪ್ರಮುಖವಾಗಿ ಜವಳಿ, ಹರಳು, ಚಿನ್ನಾಭರಣ, ಚರ್ಮದ ಉತ್ಪನ್ನಗಳು, ರಾಸಾಯನಿಕಗಳು, ಕೃಷಿ, ವಾಹನದ ಬಿಡಿಭಾಗಗಳು ಸೇರಿ ಇತರೆ ಸರಕುಗಳ ವರಮಾನ ಮತ್ತು ಗಳಿಕೆಯ ಮೇಲೆ ಪರಿಣಾಮ ಬೀರಲಿದೆ ಎಂದು ತಿಳಿಸಿದೆ.

## ❖ ವರ್ಷಾಂತ್ಯಕ್ಕೆ ದೆಹಲಿಯಲ್ಲಿ ಓಪನ್‌ಎಐ ಕಚೇರಿ

**ಸಂದರ್ಭ:** ಓಪನ್‌ಎಐ, ಈ ವರ್ಷಾಂತ್ಯದ ವೇಳೆಗೆ ನವದೆಹಲಿಯಲ್ಲಿ ತನ್ನ ಮೊದಲ ಭಾರತೀಯ ಕಚೇರಿಯನ್ನು ಸ್ಥಾಪಿಸಲು ನಿರ್ಧರಿಸಿದೆ.

- ಅಮೆರಿಕದ ನಂತರ ಭಾರತ ಓಪನ್‌ಎಐಗೆ ಎರಡನೇ ಅತಿದೊಡ್ಡ ಮಾರುಕಟ್ಟೆಯಾಗಿದೆ.
- ಭಾರತದಲ್ಲಿ ಕಚೇರಿ ಸ್ಥಾಪನೆಯಿಂದ ಚಾಟ್‌ಜಿಪಿಟಿ ಬಳಸುವ ಲಕ್ಷಾಂತರ ವಿದ್ಯಾರ್ಥಿಗಳು, ಶಿಕ್ಷಣ ತಜ್ಞರು, ವೃತ್ತಿಪರರು, ಡೆವಲಪರ್‌ಗಳು ಸೇರಿದಂತೆ ಬಳಕೆದಾರರಿಗೆ ಉತ್ತಮ ಸೇವೆ ನೀಡಲು ಸಾಧ್ಯ ಆಗುತ್ತದೆ ಎಂದು ತಿಳಿಸಿದೆ.

## ❖ ಗಾಜಾದಲ್ಲಿ ಕ್ಷಾಮ: ವಿಶ್ವಸಂಸ್ಥೆ ಘೋಷಣೆ

**ಸಂದರ್ಭ:** ಗಾಜಾದಲ್ಲಿ ಕ್ಷಾಮ ತಲೆದೋರಿದೆ ಎಂದು ವಿಶ್ವಸಂಸ್ಥೆ ಘೋಷಿಸಿದೆ. ಇಸ್ರೇಲ್ ಮಾನವೀಯ ನೆರವು ನೀಡಲು ವ್ಯವಸ್ಥಿತವಾಗಿ ಅಡ್ಡಿ ಮಾಡಿದ್ದೇ ಇಂಥ ಸ್ಥಿತಿಗೆ ಕಾರಣ ಎಂದು ಅದು ಆರೋಪಿಸಿದೆ.

- ಯುದ್ಧವನ್ನು ನಿಲ್ಲಿಸುವಂತೆ ಹಮಾಸ್ ಬಂಡುಕೋರರು ವಿಶ್ವಸಂಸ್ಥೆ ಮತ್ತು ಭದ್ರತಾ ಮಂಡಳಿಯನ್ನು ಒತ್ತಾಯಿಸಿದ್ದರು. ಅನಿರ್ಬಂಧಿತ ಆಹಾರ, ಔಷಧ, ನೀರು ಮತ್ತು ಇಂಧನ ಪೂರೈಕೆಗೆ ಮನವಿ ಮಾಡಿದ್ದರು.
- ವ್ಯಾಪಿಸುವ ಸಾಧ್ಯತೆ: ಗಾಜಾ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕ್ಷಾಮ ತಲೆದೋರಿದೆ. ಕದನ ವಿರಾಮ ಘೋಷಣೆಯಾಗದಿದ್ದರೆ ಮತ್ತು ಮಾನವೀಯ ನೆರವು ನೀಡಲು ಇರುವ ನಿರ್ಬಂಧ ಅಂತ್ಯಗೊಳ್ಳದಿದ್ದರೆ ಇತರ ಪ್ರದೇಶಗಳಿಗೂ ಕ್ಷಾಮ ಹಬ್ಬುವ ಸಾಧ್ಯತೆ ಇದೆ ಎಂದು ಆಹಾರ ಬಿಕ್ಕಟ್ಟು ಕುರಿತ ಸಂಸ್ಥೆ ಎಚ್ಚರಿಸಿದೆ.

Dr. Rajkumar IAS/KAS Academy

- ಸಮಗ್ರ ಆಹಾರ ಭದ್ರತಾ ವರ್ಗೀಕರಣ (ಐಪಿಸಿ) ಸಂಸ್ಥೆಯು, ಇಸ್ರೇಲ್‌ನಿಂದ ನಿರಂತರ ಆಕ್ರಮಣ, ಆಹಾರ ಮತ್ತು ಮಾನವೀಯ ನೆರವಿಗೆ ನಿರ್ಬಂಧ, ವ್ಯಾಪಕ ಸ್ಥಳಾಂತರ, ಉತ್ಪಾದನೆಯ ಕುಸಿತವು ಪ್ಯಾಲೆಸ್ಟೀನಿಯನ್ನರನ್ನು ಹಸಿವು, ಬರಗಾಲಕ್ಕೆ ದೂಡಿದೆ ಎಂದು ಹೇಳಿದೆ.
- 5 ಲಕ್ಷಕ್ಕೂ ಅಧಿಕ ಮಂದಿ ಅತ್ಯಂತ ಹಸಿವಿನಿಂದ ನಲುಗುತ್ತಿದ್ದಾರೆ, ಹಲವರು ಅಪೌಷ್ಟಿಕತೆ ಯಿಂದ ಸಾಯುವ ಹಂತ ತಲುಪಿದ್ದಾರೆ. ಸೆಪ್ಟೆಂಬರ್ ಅಂತ್ಯದ ವೇಳೆ ಈ ಸಂಖ್ಯೆಯು 6.41 ಲಕ್ಷಕ್ಕೆ ಏರಿಕೆಯಾಗುವ ಸಾಧ್ಯತೆ ಇದೆ ಎಂದು ಐಪಿಸಿ ಹೇಳಿದೆ.

ಷರತ್ತಿಗೆ ಒಪ್ಪದಿದ್ದರೆ ಗಾಜಾ ನಾಶ: ಇಸ್ರೇಲ್

- ದಾರ್ ಅಲ್-ಬಲಾ (ಎಪಿ): ಹಮಾಸ್ ಬಂಡುಕೋರರು ಇಸ್ರೇಲ್ ಷರತ್ತುಗಳಿಗೆ ಒಪ್ಪದಿದ್ದರೆ ಗಾಜಾ ನಗರವನ್ನೇ ನಾಶ ಮಾಡಬೇಕಾಗುತ್ತದೆ ಎಂದು ಇಸ್ರೇಲ್ ರಕ್ಷಣಾ ಸಚಿವ ಕಟ್ಜ್ ಎಚ್ಚರಿಸಿದ್ದಾರೆ.
- ಗಾಜಾ ಸಹ ರಫಾಹ್ ಮತ್ತು ಬೈತ್ ಹನೌನ್ ರೀತಿ ಭಗ್ನಾವಶೇಷವಾಗಲಿದೆ ಎಂದು ಅವರು ಹೇಳಿದ್ದಾರೆ.
- ಗಾಜಾ ನಗರವನ್ನು ವಶಕ್ಕೆ ಪಡೆಯಲು ಮಹತ್ವದ ಕಾರ್ಯಾಚರಣೆ ನಡೆಸಲು ಸೇನೆಗೆ ಪರಮಾಧಿಕಾರ ನೀಡಲಾಗಿದೆ ಎಂದು ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರು ಹೇಳಿಕೆ ನೀಡಿದ ಬಳಿಕ ಈ ಎಚ್ಚರಿಕೆ ನೀಡಿದ್ದಾರೆ.

## ❖ ಎಸ್‌ಐಆರ್: ಹೆಸರು ಸೇರ್ಪಡೆಗೆ 'ಆಧಾರ್'

**ಸಂದರ್ಭ:** ಬಿಹಾರದಲ್ಲಿ ಕೈಗೊಂಡಿರುವ ಮತದಾರರ ಪಟ್ಟಿಯ 'ವಿಶೇಷ ಸಮಗ್ರ ಪರಿಷ್ಕರಣೆ' (ಎಸ್‌ಐಆರ್) ವೇಳೆ, ಪಟ್ಟಿಯಿಂದ ಹೆಸರು ಕೈಬಿಡಲಾದವರು ತಮ್ಮ ಹೆಸರು ಸಲ್ಲಿಸುವ ಬೇಡಿಕೆಯನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಅನುಮತಿ ನೀಡುವಂತೆ ಚುನಾವಣಾ ಆಯೋಗಕ್ಕೆ ಸುಪ್ರೀಂ ಕೋರ್ಟ್ ನಿರ್ದೇಶನ ನೀಡಿದೆ.

- ಸದ್ಯ, ಭೌತಿಕವಾಗಿ ಬೇಡಿಕೆ ಸಲ್ಲಿಸಲು ಅವಕಾಶ ಇದೆ. 'ಎಸ್‌ಐಆರ್' ಅಡಿ 11 ದಾಖಲೆಗಳನ್ನು ಸ್ವೀಕರಿಸಲು ಈಗ ಅವಕಾಶ ಇದೆ. ಅದರ ಜೊತೆಗೆ ಆಧಾರ್ ಅನ್ನು ಕೂಡಾ ಪರಿಗಣಿಸಬೇಕು ಎಂದು ಸುಪ್ರೀಂ ಕೋರ್ಟ್ ನ್ಯಾಯಪೀಠವು ನಿರ್ದೇಶನ ನೀಡಿದೆ.
- ನ್ಯಾಯಮೂರ್ತಿಗಳಾದ ಸೂರ್ಯಕಾಂತ ಮತ್ತು ಜಾಯ್‌ಮಾಲ್ಯ ಬಾಗ್ಚಿ ಅವರು ಇದ್ದ ಪೀಠ, ಈ ಕುರಿತ ಅರ್ಜಿ ವಿಚಾರಣೆ ನಡೆಸಿತು.
- 'ಎಸ್‌ಐಆರ್ ಅಡಿ ಪಟ್ಟಿಯಿಂದ ಕೈಬಿಡಲಾಗಿರುವ 65 ಲಕ್ಷ ಮತದಾರರ ಹೆಸರುಗಳನ್ನು ಚುನಾವಣಾ ಆಯೋಗ ಪ್ರಕಟಿಸಿದೆ. ಈ ಕುರಿತು ಆಕ್ಷೇಪಣೆ ಸಲ್ಲಿಸುವುದಕ್ಕೆ ಮತದಾರರ ನೆರವಿಗೆ ರಾಜಕೀಯ ಪಕ್ಷಗಳು ಮುಂದೆ ಬರುತ್ತಿಲ್ಲ' ಎಂದು ಅಚ್ಚರಿ ವ್ಯಕ್ತಪಡಿಸಿದ ಪೀಠವು, ಮುಂದಿನ ವಿಚಾರಣೆ ವೇಳೆ ರಾಜಕೀಯ ಪಕ್ಷಗಳನ್ನು ಕಕ್ಷಿದಾರರನ್ನಾಗಿ ಸೇರ್ಪಡೆ ಮಾಡುವಂತೆ ಬಿಹಾರದ ಮುಖ್ಯ ಚುನಾವಣಾ ಅಧಿಕಾರಿಗೆ ನಿರ್ದೇಶನ ನೀಡಿತು.
- 'ಮತದಾರರ ಪಟ್ಟಿಯಿಂದ ಹೆಸರು ಕೈಬಿಡಲಾದವರು ತಮ್ಮ ಅರ್ಜಿಗಳನ್ನು ಸಲ್ಲಿಸಲು ನೆರವು ನೀಡಿರುವುದಕ್ಕೆ ಸಂಬಂಧಿಸಿ ಮುಂದಿನ ವಿಚಾರಣೆ ಒಳಗಾಗಿ ಎಲ್ಲ ರಾಜಕೀಯ ಪಕ್ಷಗಳು ವಸ್ತುಸ್ಥಿತಿ ವರದಿ ಸಲ್ಲಿಸಬೇಕು ಎಂದು ಸೂಚಿಸಿದ ಪೀಠ, ವಿಚಾರಣೆಯನ್ನು ಸೆಪ್ಟೆಂಬರ್ 8ಕ್ಕೆ ಮುಂದೂಡಿತು.
- 'ಪಟ್ಟಿ ಪ್ರಕಟಿಸಲಾಗಿದೆ' : ವಿಚಾರಣೆ ವೇಳೆ, ಚುನಾವಣಾ ಆಯೋಗ ಪರ ಹಾಜರಿದ್ದ ಹಿರಿಯ ವಕೀಲ ರಾಕೇಶ್ ದ್ವಿವೇದಿ,'ಮತದಾರರ ಹೆಸರುಗಳನ್ನು ಕೈಬಿಡಲಾಗಿದೆ' ಎಂಬ ಬಗ್ಗೆ ರಾಜಕೀಯ ಪಕ್ಷಗಳು ಹುಯಿಲೆಬ್ಬಿಸುತ್ತಿವೆ. ಆದರೆ, ಆಯೋಗದಲ್ಲಿ ವಿಶ್ವಾಸ ಇಡಿ ಹಾಗೂ 15 ದಿನ ಸಮಯಾವಕಾಶ ಕೊಡಿ. ವಿನಾಕಾರಣ ಯಾರ ಹೆಸರನ್ನೂ ಕೈಬಿಟ್ಟಿಲ್ಲ ಎಂಬುದನ್ನು ಮನವರಿಕೆ ಮಾಡಿಕೊಡಲಾಗುವುದು' ಎಂದು ಪೀಠಕ್ಕೆ ಅರುಹಿದರು.
- 'ಪಟ್ಟಿಯಿಂದ ಕೈಬಿಡಲಾಗಿರುವ 65 ಲಕ್ಷ ಮತದಾರರ ಹೆಸರು, ಕೈಬಿಡಲು ಕಾರಣಗಳನ್ನು ಒಳಗೊಂಡ ವಿವರಗಳನ್ನು ಸಾರ್ವಜನಿಕರಿಗೆ ಲಭ್ಯವಾಗುವಂತೆ ಪ್ರಕಟಿಸಲಾಗಿದೆ. ಈ ವಿವರಗಳನ್ನು ಮುಖ್ಯ ಚುನಾವಣಾ ಅಧಿಕಾರಿ, ಜಿಲ್ಲಾ ಚುನಾವಣಾ ಅಧಿಕಾರಿಗಳ ಕಚೇರಿ, ಪಂಚಾಯಿತಿ ಮತ್ತು ಮಂಡಲ

ಮಟ್ಟದ ಕಚೇರಿ, ಕಚೇರಿಯ ವೆಬ್‌ಸೈಟ್ ಮತ್ತು ಸಾಮಾಜಿಕ ಮಾಧ್ಯಮಗಳ ಖಾತೆಗಳಲ್ಲಿ ಪ್ರಕಟಿಸಲಾಗಿದೆ' ಎಂದು ಪೀಠಕ್ಕೆ ತಿಳಿಸಿದರು.

## ❖ ಶೂಟಿಂಗ್: ಇಳವೆನಿಲ್‌ಗೆ ಚಿನ್ನ

**ಸಂದರ್ಭ:** ಭಾರತದ ಶೂಟರ್ ಇಳವೆನಿಲ್ ವಳರಿವನ್ ಅವರು ಇಲ್ಲಿ ನಡೆಯುತ್ತಿರುವ 16ನೇ ಏಷ್ಯನ್ ಚಾಂಪಿಯನ್‌ಷಿಪ್‌ನ ಮಹಿಳೆಯರ 10 ಮೀಟರ್ ಏರ್ ರೈಫಲ್ ಸ್ಪರ್ಧೆಯಲ್ಲಿ ಚಿನ್ನದ ಪದಕ ಗೆದ್ದರು.

- ತಮಿಳುನಾಡಿನ 26 ವರ್ಷದ ಇಳವೆನಿಲ್ ಅವರು ಫೈನಲ್‌ನಲ್ಲಿ 253.6 ಅಂಕಗಳೊಂದಿಗೆ ಚಾಂಪಿಯನ್ ಆದರು. ಅರ್ಹತಾ ಸುತ್ತಿನಲ್ಲಿ ಅವರು (630.7) ಎಂಟನೇ ಸ್ಥಾನದೊಂದಿಗೆ ಫೈನಲ್ ಪ್ರವೇಶಿಸಿದ್ದರು. ಚೀನಾದ ಕ್ಸಿನ್ಲು ಪೆಂಗ್ (253 ಅಂಕ) ಬೆಳ್ಳಿ ಗೆದ್ದರೆ, ಕೊರಿಯಾದ ಯುಂಜಿ ಕ್ವಾನ್ (231.2) ಕಂಚು ಗೆದ್ದರು.
- ಜೂನಿಯರ್ ಸ್ಕೀಟ್ ಮಿಶ್ರ ತಂಡ ಸ್ಪರ್ಧೆಯಲ್ಲಿ ಹರ್ಮೆಹರ್ ಸಿಂಗ್ ಲಾಲಿ ಅವರು ಯಶಸ್ವಿ ರಾಥೋಡ್ ಅವರೊಂದಿಗೆ ಸೇರಿ ಚಿನ್ನದ ಪದಕ ಜಯಿಸಿದರು. ಈ ತಂಡವು 39–36ರಿಂದ ಕಜಾಕಸ್ತಾನದ ತಂಡವನ್ನು ಮಣಿಸಿತು.
- ಶಾಂಭವಿ ಶ್ರವಣ್, ಹೃದಯಶ್ರೀ ಕೊಂಡೂರ್ ಮತ್ತು ಇಶಾ ಅನಿಲ್ ಅವರನ್ನು ಒಳಗೊಂಡ ತಂಡವು ಮಹಿಳೆಯರ ಜೂನಿಯರ್ 10 ಮೀಟರ್ ಏರ್ ರೈಫಲ್ ಸ್ಪರ್ಧೆಯಲ್ಲಿ ಚಿನ್ನದ ಪದಕ ಗೆದ್ದುಕೊಂಡಿತು. ಭಾರತ ತಂಡವು ಒಟ್ಟು 1896.2 ಅಂಕ ಗಳಿಸಿದ್ದು, ಇದು ಜೂನಿಯರ್ ವಿಶ್ವ ಮತ್ತು ಏಷ್ಯನ್ ದಾಖಲೆಯಾಗಿದೆ.

---------------------------------------------ಶುಭವಂದನೆಗಳು---------------------------------------------

